ಸಂಪುಟ: 22, ಸಂಚಿಕೆ: 34, ಪುಟಗಳು: 8, ಬುಧವಾರ, 13 ನವೆಂಬರ್ 2024 RNI NO. KARKAN/2002/08054
epaper: www.sanjemugilu.com



ಸುದ್ದಿಗಳ ಹೊನಲು

# ಸಂಜೆ ಮುಗಿಲು

ಕನ್ನಡವೇ ಸತ್ಯ, ಕನ್ನಡವೇ ನಿತ್ಯ

ವೇಣು ಸಾರಥ್ಯದಲ್ಲಿ...

ಕನ್ನಡ ಪ್ರಾದೇಶಿಕ ಸಂಜೆ ದಿನಪತ್ರಿಕೆ
ಬೆಂಗಳೂರು। ಬೆಂಗಳೂರು ಗ್ರಾಮಾಂತರ। ಕೋಲಾರ। ಚಿಕ್ಕಬಳ್ಳಾಪುರ। ರಾಮನಗರ। ಮಂಡ್ಯ। ಮೈಸೂರು। ಚಾಮರಾಜನಗರ
₹3

ದಶಪ್ರಮತಿ ಮುದ್ರಣಾಲಯ
dashapramathi mudranalaya
PRE-PRESS PRINTERS
Contact: +91 9483589085 | e-mail: dashapramathimudranalaya@gmail.com
We Undertake Printing of
Newspapers | Tabloids | Magazines

### ಸುಭಾಷಿತ

ಎಂತಹ ಕಠಿಣ ಪರಿಸ್ಥಿತಿಯಲ್ಲೂ ಶರಣಾಗತವಾಗದಿರುವುದೆ ನಿಜವಾದ ಶಕ್ತಿ.

### ಪಂಚಾಂಗ

(ಬುಧವಾರ 13, ನವೆಂಬರ್-2024)

- ಶ್ರೀ ಕ್ರೋಧಿ ನಾಮ ಸಂವತ್ಸರ,
- ದಕ್ಷಿಣಾಯನ, ಶರದ್ ಋತು,
- ಕಾರ್ತಿಕ ಮಾಸ, ಶುಕ್ಲ ಪಕ್ಷ,
- ತಿಥಿ: ದ್ವಾದಶಿ, ನಕ್ಷತ್ರ: ರೇವತಿ
- ರಾಹುಕಾಲ: 12:07 ರಿಂದ 1:34
- ಗುಳಿಕಕಾಲ: 10:40 ರಿಂದ 12:07
- ಯಮಗಂಡಕಾಲ: 7:46 ರಿಂದ 9:13

## ಮಲ್ಲೇಶ್ವರಂ ಕಡಲೆ ಪರಿಷೆಗೆ ದಿನಗಣನೆ

**ಬೆಂಗಳೂರು:** ಬೆಂಗಳೂರಿನ ಇತಿಹಾಸ ಪ್ರಸಿದ್ಧ ಬಸವನಗುಡಿ ಕಡಲೆಕಾಯಿ ಪರಿಷೆಗೂ ಕೆಲವೇ ದಿನಗಳ ಮುನ್ನ ಮಲ್ಲೇಶ್ವರಂನಲ್ಲಿ ಕಡಲೆಕಾಯಿ ಪರಿಷೆ ನಡೆಯಲಿದೆ. ಇಲ್ಲಿನ ಕಾಡುಮಲ್ಲೇಶ್ವರ ಗೆಳೆಯರ ಬಳಗವು ನವೆಂಬರ್ 15 ರಿಂದ 18 ರವರೆಗೆ ಮಲ್ಲೇಶ್ವರಂನಲ್ಲಿ ನಾಲ್ಕು ದಿನಗಳ ಕಡಲೆಕಾಯಿ ಪರಿಷೆಯನ್ನು ಆಯೋಜಿಸಿದೆ. ಕಡಲೆಕಾಯಿ ಪರಿಷೆ ಪ್ಲಾಸ್ಟಿಕ್ ಮುಕ್ತ ಹಾಗೂ ರೈತ ಸ್ನೇಹಿಯಾಗಿ ನಡೆಯಲಿದೆ ಎಂದು ಸಂಘಟಕರು ತಿಳಿಸಿದ್ದಾರೆ. ಈ ವರ್ಷ ಪ್ಲಾಸ್ಟಿಕ್ ಬದಲಿಗೆ ಕಾಗದ ಮತ್ತು ಬಟ್ಟೆಯ ಚೀಲಗಳನ್ನೇ ಬಳಸಲು ನಿರ್ಧರಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

ಸುಮಾರು 40 ಸಾವಿರ ಕಾಗದದ ಚೀಲಗಳನ್ನು ಮಾರಾಟಗಾರರಿಗೆ ವಿತರಿಸಲಾಗುವುದು ಎಂದು



ಕಾಡುಮಲ್ಲೇಶ್ವರ ಗೆಳೆಯರ ಬಳಗದ ಅಧ್ಯಕ್ಷ ಬಿಕೆ ಶಿವರಾಂ ಮಾಹಿತಿ ನೀಡದ್ದಾರೆ. ವಿದ್ಯಾರ್ಥಿ ಸ್ವಯಂಸೇವಕರು ತಯಾರಿಸಿದ ಚೀಲಗಳು ಎರಡರಿಂದ ಮೂರು ಕಿಲೋ ಕಡಲೆಕಾಯಿಯನ್ನು ತುಂಬಿಸಬಲ್ಲದ್ದಾಗಿದೆ ಎಂದು ಅವರು ತಿಳಿಸಿದ್ದಾರೆ.

ಕಾಗದದ ಚೀಲಗಳು ಮಾತ್ರವಲ್ಲದೆ, ಹಳೆಯ ಸೀರೆಗಳು ಮತ್ತು ಇತರ ವಸ್ತುಗಳನ್ನು ಬಳಸಿ ಸುಮಾರು 6,000 ಬಟ್ಟೆ ಚೀಲಗಳನ್ನು ಸಿದ್ಧಪಡಿಸಲಾಗಿದೆ. ಈ ಚೀಲಗಳನ್ನು ಮಾರಾಟಗಾರರಿಗೆ ವಿತರಿಸಲಾಗುವುದು ಎಂದು ಅವರು ಹೇಳಿದ್ದಾರೆ.

**ಕಡಲೆಕಾಯಿ ಪರಿಷೆ ಹಿನ್ನೆಲೆ:** ಕಡಲೆಕಾಯಿ ರೈತರು ತಮ್ಮ ಬೆಳೆಯನ್ನು ಜಾನುವಾರುಗಳಿಂದ ರಕ್ಷಿಸಿಕೊಳ್ಳಲು ಬಸವನನ್ನು ಪೂಜಿಸುತ್ತಾರೆ. ಜಾನುವಾರುಗಳು ಜಮೀನಿಗೆ ಬರುವಂತೆ ಮಾಡುವ ಶಕ್ತಿಗಳನ್ನು ಹತ್ತಿಕ್ಕಲು ರೈತರು ಸಾಂಪ್ರದಾಯಿಕವಾಗಿ ತಮ್ಮ ಮೊದಲ ಬೆಳೆಯನ್ನು ಬಸವ ದೇವರಿಗೆ ಅರ್ಪಿಸುತ್ತಾರೆ. ಇದರಿಂದ ಬೆಳೆ ರಕ್ಷಣೆಯಾಗುತ್ತದೆ ಎಂಬ ನಂಬಿಕೆ ಅವರದ್ದು.

ಪುಟ 2

### ಬಂಗಾಳ ಕೊಲ್ಲಿಯಲ್ಲಿ ವಾಯುಭಾರ ಕುಸಿತ

## ಬೆಂಗಳೂರಲ್ಲಿ ತುಂತುರು ಮಳೆ

**ಬೆಂಗಳೂರು:** ಬಂಗಾಳ ಕೊಲ್ಲಿಯ ನೈರುತ್ಯ ಭಾಗದಲ್ಲಿ ವಾಯುಭಾರ ಕುಸಿತದ ಪರಿಣಾಮವಾಗಿ ಸಿಲಿಕಾನ್ ಸಿಟಿಯಲ್ಲಿ ಬೆಳ್ಳಂಬೆಳಗ್ಗೆ ತುಂತುರು ಮಳೆ ಶುರುವಾಗಿದೆ. ನಗರದಲ್ಲಿ ಮುಂದಿನ ಎರಡು ದಿನಗಳ ಕಾಲ ಮೋಡ ಕವಿದ ವಾತಾವರಣವಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ರಾಜ್ಯದ ಕೆಲವು ಜಿಲ್ಲೆಗಳಿಗೆ ಮಳೆಯಾಗುವ ಸಾಧ್ಯತೆಯಿದ್ದು, ಹವಾಮಾನ ಇಲಾಖೆ ಎರಡು ದಿನಗಳ ಕಾಲ ಯೆಲ್ಲೋ ಅಲರ್ಟ್ ಘೋಷಿಸಿದೆ.

ಇಂದು ಮತ್ತು ನಾಳೆ ಮಳೆಯ ಮುನ್ಸೂಚನೆ ನೀಡಿದ್ದು, ಚಿಕ್ಕಮಗಳೂರು,



ಹಾಸನ, ಕೊಡಗು, ಮೈಸೂರು ಜಿಲ್ಲೆಗಳಿಗೆ ಇಂದು (ನ.13) ಯೆಲ್ಲೋ ಅಲರ್ಟ್ ಘೋಷಿಸಿದೆ ಹಾಗೂ ಶಿವಮೊಗ್ಗ, ಚಾಮರಾಜನಗರ ಜಿಲ್ಲೆಗಳಿಗೆ ನಾಳೆ ಯೆಲ್ಲೋ (ನ.14) ಅಲರ್ಟ್ ಘೋಷಿಸಿದೆ.

ಪುಟ 2

## ಸಂಕ್ಷಿಪ್ತ ಸುದ್ದಿ

### ಭಾರತಕ್ಕೆ ಹಂಗಾಮಿ ರಾಯಭಾರಿಯನ್ನು ನೇಮಿಸಿದ ತಾಲಿಬಾನ್ ಸರ್ಕಾರ



**ಅಫ್ಘಾನ್:** ತಾಲಿಬಾನ್ ಸರ್ಕಾರವು ಅಫ್ಘಾನಿನ ಇಕ್ರಮುದ್ದೀನ್ ಕಾಮಿಲ್ ಅವರನ್ನು ಭಾರತಕ್ಕೆ ಹಂಗಾಮಿ ರಾಯಭಾರಿಯಾಗಿ ನೇಮಿಸಿದೆ. ಅಫ್ಘಾನಿಸ್ತಾನದ ವಿದೇಶಾಂಗ ಸಚಿವಾಲಯವು ಕಾಮಿಲ್ ಅವರ ನೇಮಕವನ್ನು ಪ್ರಕಟಿಸಿದೆ.

ಇದನ್ನು ತಾಲಿಬಾನ್ ನಿಯಂತ್ರಿತ ಬಖ್ತರ್ ಸುದ್ದಿ ಸಂಸ್ಥೆ ಕೆಲವು ಮೂಲಗಳನ್ನು ಉಲ್ಲೇಖಿಸಿ ವರದಿ ಮಾಡಿದೆ.

ಈ ನೇಮಕಾತಿಯನ್ನು ಭಾರತದೊಂದಿಗೆ ರಾಜತಾಂತ್ರಿಕ ಸಂಬಂಧಗಳನ್ನು ಬಲಪಡಿಸಲು ಮತ್ತು ವಿದೇಶದಲ್ಲಿ ತನ್ನ ಅಸ್ತಿತ್ವವನ್ನು ಹೆಚ್ಚಿಸಲು ಕಾಬೂಲ್‌ನ ಪ್ರಯತ್ನವೆಂದು ಪರಿಗಣಿಸಲಾಗಿದೆ. ಕಾಮಿಲ್ ಅವರು ಅಂತರರಾಷ್ಟ್ರೀಯ ಕಾನೂನಿನಲ್ಲಿ ಪಿಎಚ್‌ಡಿ ಹೊಂದಿದ್ದಾರೆ ಮತ್ತು ಹಿಂದೆ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಭದ್ರತಾ ಸಹಕಾರ ಮತ್ತು ಗಡಿ ವ್ಯವಹಾರಗಳ ಇಲಾಖೆಯಲ್ಲಿ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸಿದ್ದಾರೆ.

### ಬಾಲ ಭವನ ಪ್ರವೇಶ ಶುಲ್ಕ ಏರಿಸಲು ಚಿಂತನೆ




**ಬೆಂಗಳೂರು:** ಕಬ್ಬನ್ ಪಾರ್ಕ್ ಗೆ ನಿತ್ಯ ನೂರಾರು ಜನರು ಭೇಟಿ ನೀಡುತ್ತಾರೆ. ಅದರಲ್ಲಂತೂ ವಾರಾಂತ್ಯದಲ್ಲಿ ಸಾವಿರಾರು ಜನರು ಭೇಟಿ ನೀಡಿ, ಪ್ರಕೃತಿಯ ಅಂದವನ್ನು ಆನಂದಿಸುತ್ತಾರೆ. ಕಬ್ಬನ್ ಪಾರ್ಕ್ ನಲ್ಲಿರುವ ಇದೀಗ ಬಾಲ ಭವನ ಪ್ರವೇಶ ಶುಲ್ಕ ಹೆಚ್ಚಳಕ್ಕೆ ತೆರೆಮರೆಯಲ್ಲಿ ಸಿದ್ಧತೆ ನಡೆಯುತ್ತಿದೆ.

ಕಳೆದ ಹಲವು ವರ್ಷಗಳಿಂದ ಟಿಕೆಟ್ ದರ ಏರಿಕೆ ಮಾಡಿಲ್ಲ. ಹೀಗಾಗಿ, ಈ ವರ್ಷ ಟಿಕೆಟ್ ದರ ಏರಿಸಲು ಬಾಲ ಭವನ ಅಧಿಕಾರಿಗಳು ಚಿಂತನೆ ನಡೆಸಿದ್ದಾರೆ. ಬಾಲ ಭವನ ಪ್ರವೇಶಕ್ಕೆ ಮಕ್ಕಳಿಗೆ 20 ರೂ. ವಯಸ್ಕರಿಗೆ 30 ರೂ. ಟಿಕೆಟ್ ದರ ನಿಗದಿ ಮಾಡಲಾಗಿದೆ. ಇದೀಗ, ವಯಸ್ಕರಿಗೆ 10 ರಿಂದ 20 ರುಪಾಯಿ ಏರಿಕೆ ಮಾಡಲು ಚಿಂತನೆ ನಡೆದಿದೆ.

ಬಾಲ ಭವನದಲ್ಲಿ ಮಕ್ಕಳಿಗೆಂದೇ ವಿಶೇಷ ಆಟಿಕೆ ವಸ್ತುಗಳಿವೆ.

# ಪ್ರಿಯಾಂಕಾಗಾಂಧಿಗೆ ಅಗ್ನಿ ಪರೀಕ್ಷೆ

## ಇಂದು ವಯನಾಡಿನಲ್ಲಿ 14 ಲಕ್ಷ ಮತದಾರರ ಕೈಯಲ್ಲಿ 16 ಅಭ್ಯರ್ಥಿಗಳ ಭವಿಷ್ಯ

**ಕೇರಳ:** ಕೇರಳದ ವಯನಾಡ್ ಲೋಕಸಭಾ ಕ್ಷೇತ್ರಕ್ಕೆ ಇಂದು ಉಪಚುನಾವಣೆ ನಡೆಯಲಿದೆ. ರಾಹುಲ್ ಗಾಂಧಿ ಈ ಸ್ಥಾನವನ್ನು ತೊರೆದಿದ್ದರು. ವಾಸ್ತವವಾಗಿ, ರಾಹುಲ್ ವಯನಾಡ್ ಜೊತೆಗೆ ರಾಯ್ ಬರೇಲಿ ಕ್ಷೇತ್ರದಿಂದ ಸಂಸದರಾಗಿ ಆಯ್ಕೆಯಾಗಿದ್ದರು. ಇದಾದ ನಂತರ ರಾಯ್ ಬರೇಲಿ ಸೀಟನ್ನು ತಮ್ಮ ಬಳಿಯೇ ಉಳಿಸಿಕೊಳ್ಳಲು ನಿರ್ಧರಿಸಿದ್ದರು. ಇದೀಗ ಅವರ ಸಹೋದರಿ ಪ್ರಿಯಾಂಕಾ ಗಾಂಧಿ ವಾದ್ರಾ, ಈ ಸ್ಥಾನದಿಂದ ಅದೃಷ್ಟ ಪರೀಕ್ಷೆಗೆ ಮುಂದಾಗಿದ್ದಾರೆ. ರಾಜ್ಯದಲ್ಲಿ ಯುಡಿಎಫ್ ಜೊತೆ ಕಾಂಗ್ರೆಸ್ ಮೈತ್ರಿ ಮಾಡಿಕೊಂಡಿದೆ. ಬಿಜೆಪಿಯಿಂದ ನವ್ಯಾ ಹರಿದಾಸ್ ಮತ್ತು ಎಡ ಮೈತ್ರಿಕೂಟದ ಎಲ್‌ಡಿಎಫ್‌ನಿಂದ ಸತ್ಯನ್ ಮೊಕೇರಿ ಸ್ಪರ್ಧಿಸಿದ್ದಾರೆ.

ಇದಕ್ಕೂ ಮುನ್ನ ಇಲ್ಲಿನ ಉಪಚುನಾವಣೆಯ ಒಂದು ತಿಂಗಳ ಪ್ರಚಾರ ಸೋಮವಾರ ಅಂತ್ಯಗೊಂಡಿತ್ತು. ಇದರಲ್ಲಿ ಕಾಂಗ್ರೆಸ್ ನೇತೃತ್ವದ ಯುಡಿಎಫ್, ಸಿಪಿಐ(ಎಂ) ನೇತೃತ್ವದ ಎಲ್ ಡಿಎಫ್ ಮತ್ತು ಬಿಜೆಪಿ ನೇತೃತ್ವದ ಎನ್ ಡಿಎ ತಮ್ಮ ಕೈಲಾದಷ್ಟು ಪ್ರಯತ್ನಿಸಿದ್ದವು.



ವಯನಾಡ್ ಕಾಂಗ್ರೆಸ್ ನೇತೃತ್ವದ ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ನ ಭದ್ರಕೋಟೆಯಾಗಿದೆ. ಆದಾಗ್ಯೂ, ಬದಲಾಗುತ್ತಿರುವ ರಾಜಕೀಯ ಪರಿಸ್ಥಿತಿಗಳು ಮತ್ತು ಬೆಳವಣಿಗೆಗಳು ಎರಡೂ ಕ್ಷೇತ್ರಗಳಲ್ಲಿ ಅಚ್ಚರಿಯ ಚುನಾವಣಾ ಫಲಿತಾಂಶಗಳಿಗೆ ಕಾರಣವಾಗಬಹುದು ಎಂದು ರಾಜಕೀಯ ಪಕ್ಷಗಳು ಆಶಾದಾಯಕವಾಗಿವೆ.

14 ಲಕ್ಷ ಮತದಾರರು 16 ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಪ್ರಿಯಾಂಕಾ ಗಾಂಧಿ ವಾದ್ರಾ ಅವರ ಸಂಸದೀಯ ರಾಜಕೀಯಕ್ಕೆ ಬರುವ ಕನಸು ನನಸಾಗುತ್ತದೆಯೋ ಇಲ್ಲವೋ ಎಂಬುದನ್ನು ವಯನಾಡಿನ ಮತದಾರರು ಇಂದು ನಿರ್ಧರಿಸಲಿದ್ದಾರೆ. ರಾಹುಲ್ ಗಾಂಧಿ ವಯನಾಡ್ ಕ್ಷೇತ್ರವನ್ನು ತೊರೆದಿರುವುದರಿಂದ ಇಲ್ಲಿ ನಡೆಯುತ್ತಿರುವ ಉಪಚುನಾವಣೆಯಲ್ಲಿ ಸುಮಾರು 14 ಲಕ್ಷ ಮತದಾರರು 16 ಅಭ್ಯರ್ಥಿಗಳ ಭವಿಷ್ಯವನ್ನು ನಿರ್ಧರಿಸಲಿದ್ದಾರೆ. ಅಲ್ಲದೆ, ಕೇರಳದ ಚೇಲಕ್ಕರ ವಿಧಾನಸಭಾ ಕ್ಷೇತ್ರಕ್ಕೆ ಉಪಚುನಾವಣೆ ನಡೆಯಲಿದೆ.

ಪುಟ 2

## ರಾಜ್ಯದಲ್ಲಿ ಬಿರುಸಿನ ಮತದಾನ

### ಇವಿಎಂ ಸೇರಲಿದೆ ಅಭ್ಯರ್ಥಿಗಳ ಭವಿಷ್ಯ!

**ಬೆಂಗಳೂರು:** ರಾಜ್ಯದಲ್ಲಿ ಉಪಚುನಾವಣೆ ಕಣ ರಂಗೇರಿದ್ದು, ಇಂದು ಮತದಾರರು ಅಭ್ಯರ್ಥಿಗಳ ಭವಿಷ್ಯವನ್ನು ಬರೆಯಲಿದ್ದಾರೆ. ಚನ್ನಪಟ್ಟಣ, ಶಿಗ್ಗಾವಿ, ಸಂಡೂರು ವಿಧಾನಸಭಾ ಕ್ಷೇತ್ರಗಳಿಗೆ ಬೆಳಗ್ಗೆ 7 ರಿಂದ ಸಂಜೆ 6 ಗಂಟೆಯವರೆಗೆ ಮತದಾನ ಪ್ರಕ್ರಿಯೆ ನಡೆಯಲಿದೆ. ಈಗಾಗಲೆ ಶಾಂತಿಯುತ ಮತದಾನಕ್ಕೆ 3 ಕ್ಷೇತ್ರಗಳಲ್ಲಿ ಜಿಲ್ಲಾಡಳಿತಗಳು ಸಕಲ ಸಿದ್ಧತೆ ಕೈಗೊಂಡಿದ್ದು, ಸೂಕ್ತ ಬಂದೋಬಸ್ತ್ ಮಾಡಿವೆ.

ಪುಟ 2



### ಮುಡಾ ಹಗರಣ

## ಸಿದ್ದರಾಮಯ್ಯ ಆಪ್ತನಿಗೆ ಡ್ರಿಲ್




**ಮೈಸೂರು:** ಮುಡಾದಲ್ಲಿ ಸಿಎಂ ಸಿದ್ದರಾಮಯ್ಯ ಪತ್ನಿ ಪಾರ್ವತಿಗೆ 50-50 ಅನುಪಾತದಲ್ಲಿ 14 ಸೈಟ್ ನೀಡಿದ್ದ ಪ್ರಕರಣದಲ್ಲಿ ಇಡಿ ಅಧಿಕಾರಿಗಳು ಇದೀಗ ವಿಚಾರಣೆಯನ್ನು ತೀವ್ರಗೊಳಿಸಿದ್ದು, ಸಿಎಂ ಖಾಸಗಿ ಆಪ್ತ ಸಹಾಯಕ ಸಿ.ಟಿ.ಕುಮಾರ್ ಅವರ ವಿಚಾರಣೆ ನಡೆಸಿದ್ದಾರೆ.

ಮೈಸೂರಿನಲ್ಲಿ ಸಿಎಂಗೆ ಸೇರಿದ ಎಲ್ಲಾ ವ್ಯವಹಾರಗಳನ್ನ ಸಿ.ಟಿ ಕುಮಾರ್ ಅಲಿಯಾಸ್ ಎಸ್.ಜಿ.ದಿನೇಶ್ ಕುಮಾರ್ ನೋಡಿಕೊಳ್ಳುತ್ತಿದ್ದರು. ಇದೀಗ ಇಡಿ ಅಧಿಕಾರಿಗಳು ದಿನೇಶ್ ಕುಮಾರ್ ಅವರ ವಿಚಾರಣೆ ನಡೆಸಿದ್ದು,

ಪುಟ 2

## ಸಾಂಪ್ರದಾಯಿಕ ಗೊಂಬೆ ಮತಗಟ್ಟೆ

**ಚನ್ನಪಟ್ಟಣ:** ಕರ್ನಾಟಕದ ಮೂರು ವಿಧಾನಸಭಾ ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯುತ್ತಿದೆ. ಚನ್ನಪಟ್ಟಣ, ಶಿಗ್ಗಾಂವಿ ಮತ್ತು ಸಂಡೂರು ಕ್ಷೇತ್ರಗಳಿಗೆ ಉಪ ಚುನಾವಣೆ ನಡೆಯುತ್ತಿದ್ದು, ಇಂದು (ನ.13) ಮತದಾನ ಪ್ರಕ್ರಿಯೆ ಆರಂಭವಾಗಿದೆ. ಬೆಳಗಿನ ಜಾವ 7 ಗಂಟೆಯಿಂದಲೇ ಮತದಾನ ಆರಂಭವಾಗಿದ್ದು, ಉತ್ತಮ ಪ್ರತಿಕ್ರಿಯೆ ಇದೆ.

» **ಚನ್ನಪಟ್ಟಣದಲ್ಲಿ ಆಕರ್ಷಣೆಯ ಕೇಂದ್ರ**

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಒಟ್ಟು 276 ಮತಗಟ್ಟೆಗಳ ಸ್ಥಾಪನೆ ಮಾಡಗಿದೆ. ನಗರ ಪ್ರದೇಶದಲ್ಲಿ 62, ಗ್ರಾಮೀಣ ಪ್ರದೇಶದಲ್ಲಿ 214 ಮತಗಟ್ಟೆಗಳನ್ನು ಸ್ಥಾಪನೆ ಮಾಡಲಾಗಿದೆ. 276 ಮತಗಟ್ಟೆಗಳಲ್ಲಿ ಆಯೋಗ ವೆಬ್ ?ಕಾಸ್ಟಿಂಗ್ ವ್ಯವಸ್ಥೆ ಮಾಡಿದೆ. 276 ಮತಗಟ್ಟೆಗಳ ಪೈಕಿ 119 ಮತಗಟ್ಟೆಗಳನ್ನು ಸೂಕ್ಷ್ಮವೆಂದು ಗುರುತಿಸಲಾಗಿದೆ. ಚುನಾವಣಾ ಆಯೋಗ 119 ಮೈಕ್ರೋ ಅಬ್ಸರ್ವರ್ಸ್ ನಿಯೋಜಿಸಲಾಗಿದೆ.

ಚನ್ನಪಟ್ಟಣ ಗೊಂಬೆಗಳಿಗೆ ವಿಶ್ವ ವಿಖ್ಯಾತಿ ಪಡೆದಿದೆ. ಇಲ್ಲಿನ ಗೊಂಬೆಗಳಿಗೆ ಭಾರಿ ಬೇಡಿಕೆ ಇದೆ. ಹೀಗಾಗಿ ಚುನಾವಣಾ ಆಯೋಗ ಗೊಂಬೆ ಮತಗಟ್ಟೆ ನಿರ್ಮಾಣ ಮಾಡಿದೆ. ಈ ಮೂಲಕ ಚನ್ನಪಟ್ಟಣ




ಗೊಂಬೆಗಳ ವಿಶೇಷ ಪ್ರಾಶಸ್ತ್ಯ ನೀಡಿದೆ.

ಚನ್ನಪಟ್ಟಣದ ಕೋಟೆ ಬಡಾವಣೆಯಲ್ಲಿ ವಿಶೇಷ ಸಾಂಪ್ರದಾಯಿಕ ಗೊಂಬೆ ಮತಗಟ್ಟೆ ನಿರ್ಮಿಸಲಾಗಿದೆ. ಮತಗಟ್ಟೆ ಹೊರಭಾಗದಲ್ಲಿ ಆಕರ್ಷಕ ಬಲೂನ್ ಕಮಾನು, ಗೊಂಬೆಗಳ ಫ್ಲೆಕ್ಸ್ ಅಳವಡಿಸಲಾಗಿದೆ. ಮತದಾನ ಮಾಡಲು ಬಂದಿರುವ ಮತದಾರರು ಗೊಂಬೆ ಮತಗಟ್ಟೆ ಕಂಡು ಹರ್ಷಗೊಂಡಿದ್ದಾರೆ.

ಪುಟ 2





### ತೆಲಂಗಾಣದಲ್ಲಿ ಹಳಿ ತಪ್ಪಿದ 11 ರೈಲ್ವೆ ಬೋಗಿಗಳು

## ದೆಹಲಿ-ಚೆನ್ನೈ ಮಾರ್ಗ ಸಂಚಾರ ಸ್ಥಗಿತ

**ತೆಲಂಗಾಣ:** ತೆಲಂಗಾಣದ ಪೆದ್ದಪಲ್ಲಿ ಜಿಲ್ಲೆಯಲ್ಲಿ ಗೂಡ್ಸ್ ರೈಲಿನ ಹನ್ನೊಂದು ಬೋಗಿಗಳು ಹಳಿ ತಪ್ಪಿದ ಪರಿಣಾಮ ರೈಲು ಸಂಚಾರದಲ್ಲಿ ಭಾರೀ ವ್ಯತ್ಯಯ ಉಂಟಾಗಿದೆ. ಮಾಹಿತಿ ಪ್ರಕಾರ, ಗಾಜಿಯಾಬಾದ್‌ನಿಂದ ಕಾಜಿಪೇಟ್‌ಗೆ ಹೋಗುತ್ತಿದ್ದ ಈ ಗೂಡ್ಸ್ ರೈಲು ಕಬ್ಬಿಣದ ಸರಳುಗಳನ್ನು ಸಾಗಿಸುತ್ತಿತ್ತು.

ಪೆದ್ದಪಲ್ಲಿ ಜಿಲ್ಲೆಯ ರಾಘವಪುರ ಮತ್ತು ಕನ್ನಾಲ್ ನಡುವೆ ಅಪಘಾತ ಸಂಭವಿಸಿದಾಗ. ಈ ಅಪಘಾತದ ನಂತರ ರೈಲುಗಳು ಗಂಟೆಗಟ್ಟಲೆ ಸ್ಥಗಿತಗೊಂಡಿದ್ದರಿಂದ ದೆಹಲಿ ಮತ್ತು ಚೆನ್ನೈ ನಡುವಿನ ಸಂಚಾರಕ್ಕೆ ತೊಂದರೆಯಾಯಿತು. ಗೂಡ್ಸ್ ರೈಲಿನ ಹನ್ನೊಂದು ಬೋಗಿಗಳು ಹಳಿ ತಪ್ಪಿದ ಕಾರಣ ದೆಹಲಿ-ಚೆನ್ನೈ ಮುಖ್ಯ ರೈಲು ಮಾರ್ಗದಲ್ಲಿ ರೈಲು ಸಂಚಾರ ಸಂಪೂರ್ಣ ಅಸ್ತವ್ಯಸ್ತಗೊಂಡಿದೆ.

ಸೂಪರ್‌ಫಾಸ್ಟ್ ಎಕ್ಸ್‌ಪ್ರೆಸ್ ರೈಲುಗಳು ಮಾತ್ರವಲ್ಲದೆ ಎಕ್ಸ್‌ಪ್ರೆಸ್, ಪ್ಯಾಸೆಂಜರ್



ರೈಲುಗಳು ಮತ್ತು ಇತರ ಸರಕು ರೈಲುಗಳು ಹಳಿಗಳ ಮೇಲೆ ಸಿಲುಕಿಕೊಂಡಿವೆ. ಈ ಅವಧಿಯಲ್ಲಿ ಪ್ರಯಾಣಿಕರು ಸಾಕಷ್ಟು ತೊಂದರೆಗಳನ್ನು ಎದುರಿಸಬೇಕಾಯಿತು ಮತ್ತು ಅನೇಕ ರೈಲುಗಳ ವೇಗವು ತುಂಬಾ ನಿಧಾನವಾಯಿತು ಅಥವಾ ಅವು ಮಧ್ಯದಲ್ಲಿಯೇ ನಿಂತವು.

ಪುಟ 2

### ಮಣಿಪುರದಲ್ಲಿ ಹಿಂಸಾಚಾರ, 6 ಮಂದಿ ನಾಪತ್ತೆ,

## ಇಬ್ಬರ ಶವ ಪತ್ತೆ

**ಮಣಿಪುರ :** ಮಣಿಪುರದಲ್ಲಿ ಹಿಂಸಾಚಾರ ಮುಂದುವರೆದಿದೆ, ಮಣಿಪುರದ ಜಿರಿಬಾಮ್ ಜಿಲ್ಲೆಯಲ್ಲಿ ಬೆಳಗ್ಗೆ ಇಬ್ಬರು ವೃದ್ಧರ ಮೃತದೇಹಗಳು ಪತ್ತೆಯಾಗಿದ್ದು, ಆರು ಮಂದಿ ನಾಪತ್ತೆಯಾಗಿದ್ದಾರೆ ಎಂದು ವರದಿಯಾಗಿದೆ.ನಿನ್ನೆ ನಡೆದ ಗುಂಡಿನ ದಾಳಿಯ ನಂತರ ಮೂವರು ಮಹಿಳೆಯರು ಮತ್ತು ಮೂವರು ಮಕ್ಕಳು ನಾಪತ್ತೆಯಾಗಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪುಟ 2



### ಸಿಂಧೂ ನದಿಗೆ ಉರುಳಿಬಿದ್ದ ಬಸ್

## 26 ಮಂದಿ ಸಾವು

**ಬಾಲ್ಟಿಸ್ತಾನ್:** ಮದುವೆ ಮನೆಯಿಂದ ಜನರನ್ನು ಹೊತ್ತು ಬರುತ್ತಿದ್ದ ಬಸ್ ಸಿಂಧೂ ನದಿಗೆ ಉರುಳಿದ ಪರಿಣಾಮ 26 ಮಂದಿ ಸಾವನ್ನಪ್ಪಿರುವ ಘಟನೆ ಪಾಕಿಸ್ತಾನದಲ್ಲಿ ನಡೆದಿದೆ. ಪಾಕಿಸ್ತಾನದ ಉತ್ತರ ಗಿಲ್ಗಿಟ್-ಬಾಲ್ಟಿಸ್ತಾನ್ (ಜಿಬಿ) ಪ್ರದೇಶದಲ್ಲಿ ಈ ಘಟನೆ ನಡೆದಿದೆ. 28 ಜನರನ್ನು ಹೊತ್ತೊಯ್ಯುತ್ತಿದ್ದ ಬಸ್ ಡೈಮರ್ ಜಿಲ್ಲೆಯ ಥಾಲಿಚಿ ಪ್ರದೇಶದಲ್ಲಿ ನದಿಗೆ ಬಿದ್ದಿದೆ ಎಂದು ಹೇಳಿದರು.

ಸ್ಥಳೀಯ ಜನರು ಮತ್ತು ರಕ್ಷಣಾ ತಂಡಗಳು ತಕ್ಷಣ ಸ್ಥಳಕ್ಕೆ ಧಾವಿಸಿ ರಕ್ಷಣಾ ಕಾರ್ಯಾಚರಣೆಯನ್ನು ಪ್ರಾರಂಭಿಸಿದವು. ಇಬ್ಬರ ಜೀವ ಉಳಿಸುವಲ್ಲಿ ಯಶಸ್ವಿಯಾದರು. ರಕ್ಷಣಾ ತಂಡ 16 ಮೃತದೇಹಗಳನ್ನು ಮೊದಲು ಹೊರ ತೆಗೆದಿತ್ತು. ಅತಿಥಿಗಳು ಜಿಬಿ ಪ್ರದೇಶದ ಆಸ್ಟರ್ ಪ್ರದೇಶದಿಂದ ಈ ಬಸ್ ಮೂಲಕ ಪೂರ್ವ ಚಕ್ವಾಲ್ ಜಿಲ್ಲೆಗೆ ಹೋಗುತ್ತಿದ್ದರು.

ಈ ದುರಂತ ಘಟನೆಗೆ ಪಾಕಿಸ್ತಾನ ಅಧ್ಯಕ್ಷ



ಆಸಿಫ್ ಅಲಿ ಜರ್ದಾರಿ ಸಂತಾಪ ವ್ಯಕ್ತಪಡಿಸಿದ್ದು, ಸಂತ್ರಸ್ತರ ಕುಟುಂಬಗಳಿಗೆ ಸಂತಾಪ ಸೂಚಿಸಿದ್ದಾರೆ. ಅಲ್ಲದೆ ನಾಪತ್ತೆಯಾದವರ ಪತ್ತೆಗೆ ಎಲ್ಲ ರೀತಿಯ ಪ್ರಯತ್ನ ಮಾಡುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಖೈಬರ್ ಪಖ್ತುಂಕ್ವಾ ಮತ್ತು ಗಿಲ್ಗಿಟ್ -ಬಾಲ್ಟಿಸ್ತಾನ್‌ನಲ್ಲಿ ರಸ್ತೆ ಅಪಘಾತಗಳು ಆಗಾಗ ಸಂಭವಿಸುತ್ತಿರುತ್ತವೆ. ಕೆಟ್ಟ ಹವಾಮಾನ, ಕೆಟ್ಟ ರಸ್ತೆಗಳು,. ಓವರ್ ಲೋಡ್ ವಾಹನಗಳಿಂದ ಅಪಘಾತ ಸಂಭವಿಸುತ್ತದೆ.

ಪುಟ 2

# ಬಂಡೀಪುರ ಅರಣ್ಯದಲ್ಲಿ ರಾತ್ರಿ ಸಂಚಾರ ನಿಷೇಧ ವಾಪಸ್?

**ಬೆಂಗಳೂರು/ ಚಾಮರಾಜನಗರ:** ಕೇರಳ ಸರ್ಕಾರ, ಕಾಂಗ್ರೆಸ್ ಹೈಕಮಾಂಡ್ ಲಾಬಿಗೆ ಮಣಿದು ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದಲ್ಲಿ ಹಾದು ಹೋಗುವ ಹೆದ್ದಾರಿಯಲ್ಲಿ ರಾತ್ರಿ ಸಂಚಾರಕ್ಕೆ ರಾಜ್ಯ ಸರ್ಕಾರ ಅನುಮತಿ ನೀಡುತ್ತಾ ಎಂಬ ಪ್ರಶ್ನೆ ಎದ್ದಿದೆ.

ಹೌದು. ಕಳೆದ ವಯನಾಡು ಲೋಕಸಭಾ ಚುನಾವಣೆಯಲ್ಲಿ ರಾಹುಲ್ ಗಾಂಧಿ ರಾತ್ರಿ ಸಂಚಾರಕ್ಕೆ ಅನುಮತಿ ನೀಡುವ ಬಗ್ಗೆ ಭರವಸೆ ನೀಡಿದ್ದರು. ಈಗ ಪ್ರಿಯಾಂಕಾ ಗಾಂಧಿ ಈ ಭರವಸೆ ನೀಡಿದ್ದಾರೆ. ಈ ಬೆನ್ನಲ್ಲೇ ಡಿಕೆ ಶಿವಕುಮಾರ್ ಅನುಮತಿ ನೀಡುವ ಬಗ್ಗೆ ಪರಿಶೀಲನೆ ಮಾಡುವುದಾಗಿ ಪ್ರತಿಕ್ರಿಯಿಸಿದ್ದಾರೆ.

ಈ ವಿಚಾರದ ಬಗ್ಗೆ ಇಂದು ಬೆಂಗಳೂರಿನಲ್ಲಿ ಮಾತನಾಡಿದ ಅವರು, ನಮ್ಮ ಪ್ರತಿನಿಧಿಗಳು ನನ್ನ ಬಳಿ ಬಂದು ಮಾತಾಡಿದ್ದಾರೆ. ಎರಡು ಸರ್ಕಾರಗಳನ್ನ ಕರೆಸಿ ಕುಳಿತುಕೊಂಡು ಮಾತುಕತೆ ಮಾಡುತ್ತೇವೆ. ರಾಜ್ಯದ ಹಿತವನ್ನು ಕಾಪಾಡಿಕೊಂಡು, ಜನರ ಹಿತವನ್ನು ಕಾಪಾಡಿಕೊಂಡು ಪರಿಶೀಲನೆ ಮಾಡುತ್ತೇವೆ ಎಂದು ಹೇಳಿದ್ದಾರೆ.

**ಯದುವೀರ್ ವಿರೋಧ:** ವಯನಾಡ್ ಉಪಚುನಾವಣೆಯಲ್ಲಿ ರಾಜಕೀಯ ಲಾಭಕ್ಕಾಗಿ ನಮ್ಮ ರಾಜ್ಯದ ನೈಸರ್ಗಿಕ ಸಂಪತ್ತಾದ ಬಂಡಿಪುರ ಅಭಯಾರಣ್ಯದ ಮಧ್ಯೆ ಹಾದು ಹೋಗುವ ಎನ್ ಎಚ್ 766 ರ ರಾತ್ರಿ ಪ್ರಯಾಣ ನಿಷೇಧವನ್ನು ತೆಗೆದುಹಾಕುವುದಾಗಿ ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ಅವರು ಇತ್ತೀಚೆಗೆ ಕೇರಳದಲ್ಲಿ ನೀಡಿರುವ ಹೇಳಿಕೆಯು ಬೇಜವಾಬ್ದಾರಿ ಮತ್ತು ಖಂಡನೀಯವಾಗಿದೆ.

ಬಂಡೀಪುರದ ನೈಸರ್ಗಿಕ ಸೌಂದರ್ಯ ಮತ್ತು ಪರಿಸರ ವೈವಿಧ್ಯತೆಯು ಅದರೊಳಗೆ ಅಭಿವೃದ್ಧಿ ಹೊಂದುತ್ತಿರುವ ವಿವಿಧ ಪ್ರಭೇದಗಳ ವನ್ಯಜೀವಿಗಳಿಗೆ ಸೇರಿದ ಸಂಪತ್ತು. ಈ ಅಭಯಾರಣ್ಯದ ಮೂಲಕ ರಾತ್ರಿ ಪ್ರಯಾಣಕ್ಕೆ ಅವಕಾಶ ನೀಡುವುದರಿಂದ ವನ್ಯಜೀವಿಗಳಿಗೆ ಅಪಾಯವಿದೆ ಮತ್ತು ಮಾನವ-ವನ್ಯಜೀವಿ ಸಂಘರ್ಷಕ್ಕೆ ಇದು ಎಡೆ ಮಾಡಿಕೊಡುತ್ತದೆ.



ಹೈಕಮಾಂಡ್ ಲಾಬಿಗೆ ಮಣಿದ್ರಾ, ಡಿಕೆಶಿ?

ಬೇರೆ ರಾಜ್ಯದಲ್ಲಿನ ಚುನಾವಣಾ ಲಾಭಕ್ಕಾಗಿ ಕರ್ನಾಟಕದ ವನ್ಯಜೀವಿಗಳಿಗೆ ಧಕ್ಕೆ ತರುವುದು ಸಮಂಜಸವಲ್ಲ. ನಮ್ಮ ಸರ್ಕಾರವು ಈ ಪರಿಸರ ವಲಯಗಳ ರಕ್ಷಣೆಯ ನಿಟ್ಟಿನಲ್ಲಿ ಯಾವುದೆ ರಾಜಿ ಮಾಡಿಕೊಳ್ಳದೆ ರಕ್ಷಿಸಬೇಕಾಗಿದೆ ಎಂದು ಮೈಸೂರು ಸಂಸದ ಯದುವೀರ್ ಒಡೆಯರ್ ಪೋಸ್ಟ್ ಮಾಡಿದ್ದಾರೆ.

**ಏನಿದು ಪ್ರಕರಣ?:** ಹುಲಿ, ಆನೆ, ಕಾಡೆಮ್ಮೆ ಸೇರಿದಂತೆ ಅಳಿವಿನಂಚಿನಲ್ಲಿರುವ ಪ್ರಾಣಿಗಳು ಅಪಘಾತದಿಂದ ಸಾವನ್ನಪ್ಪುತ್ತಿರುವ ಹಿನ್ನೆಲೆಯಲ್ಲಿ 2009ರಲ್ಲಿ ಬಂಡೀಪುರ ಅಭಯಾರಣ್ಯದಲ್ಲಿ ಹಾದು ಹೋಗುವ ರಾಷ್ಟ್ರೀಯ ಹೆದ್ದಾರಿ 212 ಮತ್ತು 69 ರಲ್ಲಿ ರಾತ್ರಿ 9 ರಿಂದ ಬೆಳಗ್ಗೆ 6 ಗಂಟೆಯವರೆಗೆ ವಾಹನ ಸಂಚಾರವನ್ನು ನಿಷೇಧಿಸಿ ಚಾಮಾರಾಜನಗರ ಜಿಲ್ಲಾ ಆಡಳಿತ ಆದೇಶ ಹೊರಡಿಸಿತ್ತು. ವಾಹನಗಳ ಸಂಚಾರ ನಿಷೇಧವನ್ನು ರದ್ದುಪಡಿಸದಂತೆ ಕರ್ನಾಟಕ ಹೈಕೋರ್ಟ್ 2010ರಲ್ಲಿ ಆದೇಶ ನೀಡಿತ್ತು. ಈ ಆದೇಶವನ್ನು ಪ್ರಶ್ನಿಸಿ ಕೇರಳ ಸುಪ್ರೀಂ ಕೋರ್ಟ್ ನಲ್ಲಿ ಮೇಲ್ಮನವಿ ಸಲ್ಲಿಸಿದ್ದು ವಿಚಾರಣೆ ನಡೆಯುತ್ತಿದೆ.

ಕೇರಳ ಸರ್ಕಾರ ಈ ಹಿಂದೆ ಸಾಕಷ್ಟು ಬಾರಿ ನಿಷೇಧ ತೆರವುಗೊಳಿಸುವಂತೆ ರಾಜ್ಯ ಸರ್ಕಾರವನ್ನು ಕೇಳಿಕೊಂಡಿತ್ತು. ಕೇರಳದ ಲಾಬಿಗೆ ರಾಜ್ಯ ಸರ್ಕಾರ ಮಣಿದಿರಲಿಲ್ಲ. ಸಿದ್ದರಾಮಯ್ಯ ಸರ್ಕಾರ ಇದ್ದಾಗಲೂ ವಿರೋಧ ವ್ಯಕ್ತಪಡಿಸಿದ್ದರು. ಕಾಂಗ್ರೆಸ್ ಜೆಡಿಎಸ್ ಸರ್ಕಾರ ಇದ್ದಾಗ ಬಂಡೀಪುರದಲ್ಲಿ ಫ್ಲೈ ಓವರ್ ನಿರ್ಮಾಣಕ್ಕೆ ಚಿಂತನೆ ನಡೆದಿತ್ತು. ಇದಕ್ಕೆ ಪರಿಸರವಾದಿಗಳಿಂದ ಭಾರೀ ವಿರೋಧ ವ್ಯಕ್ತವಾಗಿತ್ತು.

ರಾತ್ರಿ ಸಂಚಾರ ನಿಷೇಧಕ್ಕೂ ಮುನ್ನ ಅಂದ್ರೆ 2004-09ರ ಅವಧಿಯಲ್ಲಿ ಬಂಡಿಪುರ ಅರಣ್ಯ ಪ್ರದೇಶದಲ್ಲಿ 86 ಪ್ರಾಣಿಗಳು ಅಪಘಾತಕ್ಕೆ ಬಲಿಯಾಗಿತ್ತು. ರಾತ್ರಿ ಸಂಚಾರ ನಿಷೇಧ ಬಳಿಕ 2010-18ರ ಅವಧಿಯಲ್ಲಿ 17 ಪ್ರಾಣಿ ಮೃತಪಟ್ಟಿದ್ದವು. ಒಟ್ಟಿನಲ್ಲಿ ರಾತ್ರಿ ವಾಹನ ಸಂಚಾರ ನಿಷೇಧದ ಬಳಿಕ ಅಪಘಾತದಲ್ಲಿ ಸತ್ತ ಪ್ರಾಣಿಗಳ ಸಂಖ್ಯೆ ಇಳಿಕೆಯಾಗಿತ್ತು. ಕೇರಳ ಸರ್ಕಾರದ ಬೇಡಿಕೆಯ ಹಿಂದೆ ಟಿಂಬರ್ ಮಾಫಿಯಾದ ಕೈವಾಡವಿದೆ ಎಂಬ ಆರೋಪವೂ ಕೇಳಿ ಬಂದಿದೆ.

## ಶಿಗ್ಗಾಂವಿ ಉಪಚುನಾವಣೆ: ನಗದು ಸೇರಿ 5 ಲಕ ಮೌಲ್ಯದ ವಸ್ತುಗಳು ವಶ

**ಹಾವೇರಿ:** ಜಿಲ್ಲೆಯಾದ್ಯಂತ ಜಾರಿಯಾಗಿದ್ದ ಮಾದರಿ ನೀತಿ ಸಂಹಿತೆ ಹಿನ್ನೆಲೆ ವಿವಿಧ ಕಡೆಗಳಲ್ಲಿ ತೆರಿಗೆ ಇಲಾಖೆಯಿಂದ ಭರ್ಜರಿ ದಾಳಿ ನಡೆದಿದ್ದು, ನಗದು ಸೇರಿ 5 ಲಕ್ಷ ರೂ. ಮೌಲ್ಯದ ವಸ್ತುಗಳು ವಶಪಡಿಸಿಕೊಂಡಿದ್ದಾರೆ.

ಶಿಗ್ಗಾಂವಿ ಉಪಚುನಾವಣೆ ಹಿನ್ನೆಲೆ ಹಾವೇರಿ ಜಿಲ್ಲೆಯಾದ್ಯಂತ ಮಾದರಿ ನೀತಿ ಸಂಹಿತೆ ಜಾರಿಯಾಗಿತ್ತು. ಈ ವೇಳೆ ವಾಣಿಜ್ಯ ತೆರಿಗೆ ಇಲಾಖೆಯಿಂದ ದಾಳಿ ನಡೆಸಿದ್ದು, 2,68,270 ರೂ. ನಗದು, 1 ಲಕ್ಷ 60 ಸಾವಿರ ರೂ. ಮೌಲ್ಯದ 8 ಕೆ.ಜಿ 240 ಗ್ರಾಂ ಗಾಂಜಾ, 55,13,926 ಲಕ್ಷ ರೂ. ಮೌಲ್ಯದ 4,686 ಲೀಟರ್‌ನಷ್ಟು ಮದ್ಯ ವಶಪಡಿಸಿಕೊಳ್ಳಲಾಗಿದೆ. ಇನ್ನೂ 3 ಲಕ್ಷ ರೂ. ಮೌಲ್ಯದ 5 ವಾಹನ ಜಪ್ತಿ ಮಾಡಲಾಗಿದ್ದು, ಒಟ್ಟು ವಾಣಿಜ್ಯ ತೆರಿಗೆ ಇಲಾಖೆಯಿಂದ 5,34,850 ರೂ. ಮೌಲ್ಯದ ವಸ್ತುಗಳನ್ನು ವಶಪಡಿಸಿಕೊಳ್ಳಲಾಗಿದೆ. ಅಬಕಾರಿ ಇಲಾಖೆಯಿಂದ ಒಟ್ಟು 232 ಪ್ರಕರಣ ದಾಖಲಾಗಿದ್ದು, ಮಾದರಿ ನೀತಿ ಸಂಹಿತಿ ಉಲ್ಲಂಘನೆ ಸಂಬಂಧ 3 ಕೇಸ್ ದಾಖಲಿಸಲಾಗಿದೆ



## ಸಚಿವ ಜಮೀರ್ ರಾಜ್ಯದ ಜನತೆಗೆ ಕಮೆ ಕೇಳಿ, ರಾಜೀನಾಮೆ ನೀಡಬೇಕು: ಜೆಡಿಎಸ್ ಆಗ್ರಹ

**ಬೆಂಗಳೂರು:** ಕೇಂದ್ರ ಸಚಿವ ಹೆಚ್.ಡಿ ಕುಮಾರಸ್ವಾಮಿ ಬಣ್ಣದ ಬಗ್ಗೆ ಮಾತನಾಡಿದ್ದ ಸಚಿವ ಜಮೀರ್ ಅಹ್ಮದ್ ವಿರುದ್ಧ ಜೆಡಿಎಸ್ ಕಿಡಿಕಾರಿದೆ. ಎಕ್ಸ್‌ನಲ್ಲಿ ಟ್ವೀಟ್ ಮಾಡಿರುವ ಜೆಡಿಎಸ್ ಜಮೀರ್ ಅಹ್ಮದ್ ರಾಜ್ಯದ ಜನತೆಯಲ್ಲಿ ಕ್ಷಮೆ ಕೇಳಿ ರಾಜೀನಾಮೆ ನೀಡಬೇಕು ಎಂದು ಆಗ್ರಹಿಸಿದೆ.



**ಟ್ವೀಟ್‌ನಲ್ಲಿ ಏನಿದೆ?:** ಜಮೀರ್ ಅಹ್ಮದ್ ಅವರೇ, ಹೆಚ್.ಡಿ ಕುಮಾರಸ್ವಾಮಿ ಅವರು ಜಾತಿ, ಪಂಥ ಮತ್ತು ಬಣ್ಣದಿಂದ ಜನನಾಯಕರಾಗಿ ಬೆಳೆದಿಲ್ಲ. ಅವರ ನಾಯಕತ್ವ ಗುಣ, ಸಮಾಜಕ್ಕೆ ಮತ್ತು ಸಮುದಾಯಗಳ ಅಭಿವೃದ್ಧಿಗೆ ಕೊಟ್ಟಿರುವ ಕೊಡುಗೆಗಳು, ಜನಪರ ಯೋಜನೆಗಳು ಮತ್ತು ಉತ್ತಮವಾದ ಆಡಳಿತ ಮತ್ತು ಆರ್ಥಿಕ ಅಭಿವೃದ್ಧಿ ದೃಷ್ಟಿಕೋನದಿಂದಲೇ ಉತ್ತಮ ರಾಜಕಾರಣಿಯಾಗಿ ಗುರುತಿಸಿಕೊಂಡಿದ್ದಾರೆ. ಸರ್ವಜನಾಂಗದ ಶಾಂತಿಯ ತೋಟವಾಗಿರುವ ಕರ್ನಾಟಕದಲ್ಲಿ ಕಾಂಗ್ರೆಸ್ ಮತ್ತು ನೀವು ಕ್ಷುಲ್ಲಕ ರಾಜಕೀಯಕ್ಕಾಗಿ ದ್ವೇಷ ಹರಡಲು, ಒಡೆದು ಆಳುವ ನೀತಿಯನ್ನು ಅನುಸರಿಸುತ್ತಿದ್ದೀರಿ. ನೆನಪಿರಲಿ, ಇಲ್ಲಿ ನಿಮ್ಮ ಒಡೆದು ಆಳುವ ನೀತಿಗೆ ಜಾಗವಿಲ್ಲ. ಜನಾಂಗೀಯ ನಿಂದನೆ, ವರ್ಣಭೇದ ಹೇಳಿಕೆಗಳನ್ನು ನೀಡಿ ಅಪಮಾನ ಎಸಗಿರುವ ನೀವು ನಾಡಿನ ಜನರಲ್ಲಿ ಕ್ಷಮೆಯಾಚಿಸಿ, ರಾಜೀನಾಮೆ ನೀಡಬೇಕು ಎಂದು ಜೆಡಿಎಸ್ ಆಗ್ರಹಿಸಿದೆ.

## ಹೆಚ್.ಡಿ.ಕುಮಾರಸ್ವಾಮಿಗೆ ಕರಿಯ ಎಂದಿದ್ದಕ್ಕೆ ಕ್ಷಮೆಯಾಚಿಸಿದ ಜಮೀರ್

**ಮೈಸೂರು:** ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಬಣ್ಣದ ಬಗ್ಗೆ ನೀಡಿದ್ದ ವಿವಾದಾತ್ಮಕ ಹೇಳಿಕೆಗೆ ಸಚಿವ ಜಮೀರ್ ಅಹ್ಮದ್ ಸಾರ್ವಜನಿಕವಾಗಿ ಕ್ಷಮೆಯಾಚಿಸಿದರು.

ಮೈಸೂರಿನಲ್ಲಿ ಮಾತನಾಡಿದ ಅವರು, ಜೆಡಿಎಸ್ ಕಾರ್ಯಕರ್ತರಿಗೆ ನೋವಾಗಿದ್ದರೆ ಕ್ಷಮೆ ಕೋರುತ್ತೇನೆ ಎಂದು ತಮ್ಮ ಹೇಳಿಕೆ ಬಹಳಷ್ಟು ವಿವಾದ ಸೃಷ್ಟಿಯಾಗ್ತಿದ್ದಂತೆ ಕ್ಷಮೆ ಕೋರಿದರು.

ನಾನು ಮತ್ತು ಕುಮಾರಸ್ವಾಮಿ ಅವರು ಆತ್ಮೀಯರಾಗಿದ್ದವರು. 24 ಗಂಟೆಯಲ್ಲಿ 14 ಗಂಟೆ ಜೊತೆಯಲ್ಲಿ ಇರ್ತಾ ಇದ್ದೊ. ಅವರು ನನ್ನ ಕುಳ್ಳ ಅಂತಾ ಇದ್ರು, ನಾನು ಕರಿಯಣ್ಣ ಅಂತಿದ್ದೆ. ಈಗ ಚುನಾವಣೆ ಹಿನ್ನಲೆ ಅದನ್ನು ದೊಡ್ಡ ವಿಚಾರ ಮಾಡ್ತಾ ಇದ್ದಾರೆ. ನಾನು ಮೊದಲ ಬಾರಿಗೆ ಕರಿಯಣ್ಣ ಅಂತಿಲ್ಲ. ನಾನು ಅಂತಹದ್ದು ಏನು ಹೇಳಿಲ್ಲ. ಪ್ರೀತಿಯಿಂದ ಅವರು ಕುಳ್ಳ ಅಂತಾ ಇದ್ರು, ನಾನು ಕರಿಯಣ್ಣ ಅಂತಾ ಇದ್ದೆ. ನನ್ನ



ಮಾತಿಂದ ಯಾರಿಗಾದ್ರು ನಾವಾಗಿದ್ರೆ, ನಾನು ಕ್ಷಮೆ ಕೇಳ್ತೀನಿ. ನನ್ನ ಹೇಳಿಕೆಯಿಂದ ಉಪಚುನಾವಣೆ ಮೇಲೆ ಪರಿಮಾಣ ಬೀರಲ್ಲ ಎಂದು ತಿಳಿಸಿದರು.

19 ರಂದು ವಕ್ಫ್ ಚುನಾವಣೆ ಇದೆ. ಈ ಹಿನ್ನೆಲೆ ಇಂದು ಸಭೆ ಕರೆದಿದ್ದೇವೆ. ಮತದಾರರು ಮಾತ್ರ ಭಾಗಿಯಾಗಿದ್ದಾರೆ. ವಕ್ಫ್ ಜಮೀನಿನ ವಿವಾದ ಇಲ್ಲಿ ಚರ್ಚೆ ಇಲ್ಲ. ವಕ್ಫ್ ಚುನಾವಣೆ ಪ್ರಚಾರ ಮಾತ್ರ ಮಾಡ್ತೀವಿ ಎಂದು ಸ್ಪಷ್ಟಪಡಿಸಿದರು.

## ಗುತ್ತಿಗೆ ಕಾಮಗಾರಿಗಳಲ್ಲಿ ಶೇ.4 ಮೀಸಲಾತಿ ಕೊಡಿ: ಸರ್ಕಾರಕ್ಕೆ ಮುಸ್ಲಿಂ ಸಮುದಾಯ ಬೇಡಿಕೆ

**ಬೆಂಗಳೂರು:** ಮುಸ್ಲಿಂ ಸಮುದಾಯದವರಿಗೆ ಗುತ್ತಿಗೆ ಕಾಮಗಾರಿಗಳಲ್ಲಿ ಮೀಸಲಾತಿ ನೀಡುವ ವಿಚಾರ ಮುನ್ನಲೆಗೆ ಬಂದಿದೆ. 4% ಮೀಸಲಾತಿ ನೀಡುವಂತೆ ಮುಸ್ಲಿಂ ನಾಯಕರು ಬರೆದ ಪತ್ರ ಸರ್ಕಾರದ ಮುಂದಿದೆ. ಆದರೆ, ಮುಸ್ಲಿಂ ಮೀಸಲಾತಿ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ಸಿಎಂ ಕಚೇರಿ ಸ್ಪಷ್ಟಪಡಿಸಿದೆ.

ಅಂದಹಾಗೆ ಆರ್ಥಿಕವಾಗಿ, ಸಾಮಾಜಿಕವಾಗಿ ಹಿಂದುಳಿದಿರುವ ಅಲ್ಪಸಂಖ್ಯಾತ ಸಮುದಾಯದ ಗುತ್ತಿಗೆ ಮೀಸಲಾತಿಗೆ ಬೇಡಿಕೆ ಕೇಳಿಬಂದಿದೆ. ಪ್ರವರ್ಗ 2 ಬಿಗೆ ಸೇರುವ ಮುಸ್ಲಿಂ ಸಮುದಾಯಕ್ಕೆ ಗುತ್ತಿಗೆ ಕಾಮಗಾರಿಗಳಲ್ಲಿ ಮೀಸಲಾತಿ ಇಲ್ಲ. ಆದರೆ, ಈಗಾಗಲೇ ಎಸ್‌ಸಿ, ಎಸ್‌ಟಿ ಸಮುದಾಯಕ್ಕೆ 24% ಗುತ್ತಿಗೆ ಮೀಸಲಾತಿ ಇದೆ. ಹಾಗಾಗಿ, ಅದೇ ಸೌಲಭ್ಯವನ್ನು ಅಲ್ಪಸಂಖ್ಯಾತ ಸಮುದಾಯಕ್ಕೂ ವಿಸ್ತರಿಸಬೇಕೆಂಬ ಕೂಗು ವ್ಯಕ್ತವಾಗಿದೆ.

ಮುಸ್ಲಿಮರಿಗೆ ಶೇ.4ರಷ್ಟು ಮೀಸಲಾತಿ ಸೌಲಭ್ಯವನ್ನು ವಿಸ್ತರಿಸಿ ಸೂಕ್ತ ಆದೇಶ ನೀಡಬೇಕು ಎಂದು ಮುಸ್ಲಿಂ ಸಚಿವರು, ಶಾಸಕರ ನಿಯೋಗ ಮನವಿ ಮಾಡಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ 2024ರ ಆ.24 ರಂದು ಪತ್ರ ಬರೆದು ಬೇಡಿಕೆ ಮುಂದಿಟ್ಟಿದ್ದಾರೆ. ಮುಖ್ಯಮಂತ್ರಿಗಳ ರಾಜಕೀಯ ಕಾರ್ಯದರ್ಶಿ ನಸೀರ್ ಅಹ್ಮದ್ ಲೆಟರ್ ಹೆಡ್‌ನಲ್ಲಿ ಬರೆದಿರುವ ಪತ್ರಕ್ಕೆ, ಸಚಿವ ಜಮೀರ್ ಅಹ್ಮದ್, ರಹೀಂ ಖಾನ್ ಸೇರಿದಂತೆ ಮುಸ್ಲಿಂ ಸಮುದಾಯದ ಶಾಸಕರು, ಪರಿಷತ್ ಸದಸ್ಯರು ಸಹಿ ಹಾಕಿದ್ದಾರೆ. ಇದೇ ವೇಳೆ ಕಡತ ಮಂಡಿಸುವುದು ಎಂದು ಸಿಎಂ ಸಿದ್ದರಾಮಯ್ಯ ಸಹಿ ಹಾಕಿದ್ದಾರೆ. ಆದರೆ, ಸಿಎಂ ಸಿದ್ದರಾಮಯ್ಯ ಕಚೇರಿ ಅಧಿಕೃತ ಸ್ಪಷ್ಟನೆ ನೀಡಿದ್ದು, ಬೇಡಿಕೆ ಬಂದಿರುವುದು ನಿಜ. ಆದರೆ, ಮೀಸಲಾತಿ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿಲ್ಲ ಎಂದು ತಿಳಿಸಿದೆ.

## ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಶೀಟರ್ ಬರ್ಬರ ಹತ್ಯೆ

**ಕಲಬುರಗಿ:** ಮಾರಕಾಸ್ತ್ರಗಳಿಂದ ಕೊಚ್ಚಿ ರೌಡಿಶೀಟರ್‌ನನ್ನು ಬರ್ಬರವಾಗಿ ಹತ್ಯೆಗೈದ ಘಟನೆ ಕಲಬುರಗಿ ಜಿಲ್ಲೆಯ ಪಟ್ಟಣ ಗ್ರಾಮದಲ್ಲಿ ನಡೆದಿದೆ.

ಸೋಮು ತಾಳಿಕೋಟಿ (40) ಬರ್ಬರವಾಗಿ ಕೊಲೆಯಾದ ರೌಡಿಶೀಟರ್. ಕಲಬುರಗಿಯ ಪಟ್ಟಣ ಗ್ರಾಮದಲ್ಲಿ ಕೊಲೆ ಮಾಡಿ ಆಳಂದ ರಸ್ತೆಯ ರೈಲ್ವೆ ಹಳಿ ಬಳಿ ಶವ ಎಸೆದು ದುಷ್ಕರ್ಮಿಗಳು ಪರಾರಿಯಾಗಿದ್ದಾರೆ.

ಕೆಲ ತಿಂಗಳ ಹಿಂದೆ ಸೋಮು ಪಟ್ಟಣ ಗ್ರಾಮದ ಡಾಬಾ ಮಾಲೀಕನ ಜೊತೆ ಈತ ಜಗಳವಾಡಿದ್ದನು. ಅಲ್ಲದೆ ಸೋಮು ಮತ್ತು ಆತನ ಸಂಗಡಿಗರು ಡಾಬಾ ಮಾಲೀಕನ ಮೇಲೆ ಹಲ್ಲೆ ನಡೆಸಿದ್ದರು ಎನ್ನಲಾಗಿದೆ. ಹೀಗಾಗಿ ಹಳೆಯ ವೈಷಮ್ಯದ ಹಿನ್ನಲೆ ಈ ಕೊಲೆ ನಡೆದಿರಬಹುದು ಎಂದು ಪೊಲೀಸರು ಶಂಕೆ ವ್ಯಕ್ತಪಡಿಸಿದ್ದಾರೆ.

ಸಬ್ ಅರ್ಬನ್ ಪೊಲೀಸ್ ಠಾಣೆಯಲ್ಲಿ ಈ ಪ್ರಕರಣ ದಾಖಲಾಗಿದ್ದು, ಹಂತಕರ ಬಂಧನಕ್ಕೆ ಪೊಲೀಸರು ಬಲೆ ಬೀಸಿದ್ದಾರೆ.

## ಮಲೆನಾಡಲ್ಲಿ ನಕ್ಸಲ್ ಹೆಜ್ಜೆ: ಪತ್ರ ತರಲು ಹೋಗಿ ಸಿಕ್ಕಿಬಿದ್ರಾ ಅನುಕಂಪಿತರು?

**ಚಿಕ್ಕಮಗಳೂರು:** ಜಿಲ್ಲೆಯ ಮಲೆನಾಡು ಭಾಗದ ದಟ್ಟ ಕಾನನದಲ್ಲಿ ಮತ್ತೆ ಕೆಂಪು ಉಗ್ರರ ಹೆಜ್ಜೆ ಗುರುತುಗಳು ಸದ್ದು ಮಾಡತೊಡಗಿದೆ. 2013-14ರಲ್ಲಿ ಏಳೆಂಟು ಜನ ನಕ್ಸಲರು ಶರಣಾಗತರಾದ ಮೇಲೆ ಮಲೆನಾಡಲ್ಲಿ ಬಹುತೇಕ ನಕ್ಸಲ್ ಚಟುವಟಿಕೆ ಕ್ಷೀಣಗೊಂಡಿತ್ತು. ಇದೀಗ ಮತ್ತೆ ಮಲೆನಾಡ ಕಾಡುಗಳಲ್ಲಿ ನಕ್ಸಲರ ಹೆಜ್ಜೆ ಸದ್ದು ಮಾಡುತ್ತಿದೆ.

ಕಳೆದ ವಾರ ಶೃಂಗೇರಿ ತಾಲೂಕಿನ ಕಾಡಂಚಿನ ಕುಗ್ರಾಮಕ್ಕೆ ಭೇಟಿ ನೀಡಿದ್ದ ನಕ್ಸಲರ ತಂಡ ಮನೆಯೊಂದರಲ್ಲಿ ಊಟ ಮಾಡಿ, ಮಾತನಾಡಿಕೊಂಡು ಹೋಗಿದ್ದಾರೆ ಎಂದು ಹೇಳಲಾಗುತ್ತಿದೆ. ಇದರ ಬೆನ್ನಲ್ಲೇ ಕೊಪ್ಪ ತಾಲೂಕಿನ ಮೇಗೂರು ಸಮೀಪದ ಕುಗ್ರಾಮ ಯಡಗುಂದದ ಇಬ್ಬರು ಯುವಕರನ್ನ ಪೊಲೀಸರು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ. ಇದೀಗ ಡಾಗ್ ಸ್ಕ್ವಾಡ್ ಜೊತೆ ಎಎನ್ ಎಫ್ ಸಿಬ್ಬಂದಿ ಕಾಡಲ್ಲಿ ನಕ್ಸಲ್ ಹೆಜ್ಜೆ ಹುಡುಕುತ್ತಿದ್ದಾರೆ.

ವಶಕ್ಕೆ ಪಡೆಯಲಾದ ಇಬ್ಬರು ಯುವಕರು ಬೆಂಗಳೂರಿಗೆ ಕೇರಳದಿಂದ ಬಂದಿದ್ದ ಹಾರ್ಡ್ ಕೋರ್ ನಕ್ಸಲ್ ನಾಯಕಿ ಮುಂಡಗಾರು ಲತಾಳಿಗೆ ಸಂಬಂಧಪಟ್ಟ ಪತ್ರವನ್ನ ತರಲು ಹೋಗಿದ್ದರು ಎನ್ನಲಾಗಿದೆ. ಇನ್ನೂ ಶೃಂಗೇರಿ, ಕೊಪ್ಪ ಹಾಗೂ ಕಳಸ ತಾಲೂಕಿನಲ್ಲಿ ವ್ಯಾಪಿಸಿಕೊಂಡಿರುವ ಕುದುರೆಮುಖ ರಾಷ್ಟ್ರೀಯ ಉದ್ಯಾನವನದ ವ್ಯಾಪ್ತಿಯಲ್ಲಿ ಎಎನ್‌ಎಫ್ ಸಿಬ್ಬಂದಿ ಕೂಂಬಿಂಗ್ ಕಾರ್ಯಾಚರಣೆ ನಡೆಸುತ್ತಿದ್ದಾರೆ.

## ಪರಿಷೆಗೆ ದಿನಗಣನೆ

ಕಡಲೆ ಪರಿಷೆಯ ಜಾನಪದ ಹಿನ್ನೆಲೆಯಿದು ಎಂದು ಶಿವರಾಂ ವಿವರಿಸಿದ್ದಾರೆ.

**ತಮಿಳುನಾಡು, ಆಂಧ್ರದಿಂದಲೂ ಬರಲಿದ್ದಾರೆ ರೈತರು:** ಬೆಂಗಳೂರು ಗ್ರಾಮಾಂತರ, ತುಮಕೂರು, ಕೋಲಾರ, ಚಿಕ್ಕಬಳ್ಳಾಪುರ ಸೇರಿದಂತೆ ಕರ್ನಾಟಕದ ವಿವಿಧ ಭಾಗಗಳಿಂದ ಹಾಗೂ ತಮಿಳುನಾಡು, ಆಂಧ್ರಪ್ರದೇಶದ ರೈತರು ಕೂಡ ಪರಿಷೆಯಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.

ಅಂದಹಾಗೆ, ಬಸವನಗುಡಿಯ ಕಡಲೆಕಾಯಿ ಪರಿಷೆ ನವೆಂಬರ್ 25ರಿಂದ ಆರಂಭವಾಗಲಿದೆ.

## ತುಂತುರು ಮಳೆ

ಇನ್ನೂ ದಕ್ಷಿಣ ಒಳನಾಡು, ಕರಾವಳಿಯ ಕೆಲ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದ್ದು, ಉತ್ತರ ಒಳನಾಡಿನ ಕೆಲ ಜಿಲ್ಲೆಗಳಲ್ಲಿ ತುಂತುರು ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಪ್ರಿಯಾಂಕಾಗಾಂಧಿಗೆ ಅಗ್ನಿ ಪರೀಕ್ಷೆ

ವಯನಾಡ್ ಲೋಕಸಭಾ ಉಪಚುನಾವಣೆಗೆ ಮತದಾನ ಆರಂಭವಾಗಿದೆ ಕೇರಳದ ವಯನಾಡ್ ಲೋಕಸಭಾ ಕ್ಷೇತ್ರದ ಉಪಚುನಾವಣೆಗೆ ಮತದಾನ ಆರಂಭವಾಗಿದೆ. ಇಲ್ಲಿ ಕಾಂಗ್ರೆಸ್ ಅಭ್ಯರ್ಥಿ ಪ್ರಿಯಾಂಕಾ ಗಾಂಧಿ ಅವರು ಮುಖ್ಯವಾಗಿ ಸಿಪಿಐ(ಎಂ)ನ ಸತ್ಯನ್ ಮೊಕೇರಿ ಮತ್ತು ಬಿಜೆಪಿಯ ನವ್ಯಾ ಹರಿದಾಸ್ ವಿರುದ್ಧ ಸ್ಪರ್ಧಿಸುತ್ತಿದ್ದಾರೆ. ಪ್ರಿಯಾಂಕಾ ಇದೇ ಮೊದಲ ಬಾರಿಗೆ ಲೋಕಸಭೆ ಚುನಾವಣೆಗೆ ಸ್ಪರ್ಧಿಸುತ್ತಿದ್ದಾರೆ. ವಯನಾಡ್ ಸ್ಥಾನವನ್ನು ಯುನೈಟೆಡ್ ಡೆಮಾಕ್ರಟಿಕ್ ಫ್ರಂಟ್ (ಯುಡಿಎಫ್) ನ ಭದ್ರಕೋಟೆ ಎಂದು ಪರಿಗಣಿಸಲಾಗಿದೆ.

2019ರಲ್ಲಿ ರಾಹುಲ್ ಗಾಂಧಿ ವಯನಾಡಿನಿಂದಲೇ ಸಂಸತ್ತನ್ನು ತಲುಪಿದ್ದರು. 2024 ರಲ್ಲಿ ರಾಹುಲ್ ವಯನಾಡ್ ಮತ್ತು ರಾಯ್ ಬರೇಲಿ ಎರಡನ್ನೂ ಗೆದ್ದರು. ಇದರ ನಂತರ ಅವರು ವಯನಾಡ್‌ಗೆ ರಾಜೀನಾಮೆ ನೀಡಿದರು. ಈಗ ಉಪಚುನಾವಣೆಯಲ್ಲಿಯೂ ತನ್ನ ಪ್ರಾಬಲ್ಯವನ್ನು ಉಳಿಸಿಕೊಳ್ಳಲು ಕಾಂಗ್ರೆಸ್ ಬಯಸಿದೆ.

## ರಾಜ್ಯದಲ್ಲಿ ಬಿರುಸಿನ ಮತದಾನ

ಚನ್ನಪಟ್ಟಣ ವಿಧಾನಸಭಾ ಕ್ಷೇತ್ರದಲ್ಲಿ ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಮತ್ತು ಎನ್‌ಡಿಎ ಅಭ್ಯರ್ಥಿಯಾಗಿ ನಿಖಿಲ್ ಕುಮಾರಸ್ವಾಮಿ ನಡುವೆ ಭಾರೀ ಪೈಪೋಟಿ ಇದೆ ಎನ್ನಲಾಗುತ್ತಿದ್ದು, ಇಬ್ಬರಲ್ಲಿ ಯಾರು ಶಾಸಕರಾಗಲಿದ್ದಾರೆ ಎಂಬುದನ್ನು ಮತದಾರರು ನಿರ್ಣಯಿಸಲಿದ್ದಾರೆ.

**ಚನ್ನಪಟ್ಟಣ ವಿಧಾನಸಭಾ ಕ್ಷೇತ್ರ:** ಚನ್ನಪಟ್ಟಣ ಕ್ಷೇತ್ರದ ಒಟ್ಟು ಮತದಾರರ ಸಂಖ್ಯೆ 2,32,836. ಇದರಲ್ಲಿ ಪುರುಷ ಮತದಾರರು 1,12,271 ಮತ್ತು ಮಹಿಳಾ ಮತದಾರರು 1,20,557 ಜನರಿದ್ದು ಇತರೆ 8 ಮತದಾರರಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು 276 ಮತಗಟ್ಟೆಗಳಿದ್ದು, ನಗರವ್ಯಾಪ್ತಿಯಲ್ಲಿ 62 ಮತ್ತು ಗ್ರಾಮಾಂತರ ಪ್ರದೇಶದಲ್ಲಿ 214 ಮತಗಟ್ಟೆಗಳಿವೆ. ಚುನಾವಣಾ ಕಾರ್ಯಕ್ಕೆ 1252 ಮತಗಟ್ಟೆ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದೆ. ಚುನಾವಣಾ ಭದ್ರತೆಗಾಗಿ 8 ಪ್ಯಾರಾ ಮಿಲಿಟರಿ ಪೋರ್ಸ್ ಬಳಕೆ ಮಾಡಿಕೊಳ್ಳಲಾಗಿದ್ದು, 650ಕ್ಕೂ ಹೆಚ್ಚು ಪೊಲೀಸರನ್ನು ನಿಯೋಜನೆ ಮಾಡಲಾಗಿದೆ. ಕಾಂಗ್ರೆಸ್ ಅಭ್ಯರ್ಥಿ ಸಿ.ಪಿ.ಯೋಗೇಶ್ವರ್ ಚಕ್ಕೆರೆ ಗ್ರಾಮದಲ್ಲಿ ಬೆಳಗ್ಗೆ 9ಕ್ಕೆ ಮತದಾನ ಮಾಡಲಿದ್ದಾರೆ ಎನ್ನಲಾಗಿದೆ.

**ಶಿಗ್ಗಾಂವಿ ವಿಧಾನಸಭಾ ಕ್ಷೇತ್ರ:** ಶಿಗ್ಗಾಂವಿ ಕ್ಷೇತ್ರದಲ್ಲಿ ಕಾಂಗ್ರೆಸ್‌ನಿಂದ ಯಾಸೀರ್ ಖಾನ್ ಪಠಾಣ್ ಮತ್ತು ಎನ್‌ಡಿಎ ಅಭ್ಯರ್ಥಿ ಭರತ್ ಬೊಮ್ಮಾಯಿ ನಡುವೆ ಬಿಗ್ ಫೈಟ್ ಇದೆ ಎನ್ನಲಾಗುತ್ತಿದೆ. ಕ್ಷೇತ್ರದಲ್ಲಿ ಒಟ್ಟು 2,37,525 ಮತದಾರರಿದ್ದು, ಈ ಪೈಕಿ 1,21,443 ಪುರುಷರು ಮತ್ತು 1,16,076 ಮಹಿಳೆಯರು ಹಾಗೂ ಇತರ 6 ಮತದಾರರಿದ್ದಾರೆ. ಕ್ಷೇತ್ರದಲ್ಲಿ ಒಟ್ಟು 241 ಮತಗಟ್ಟೆಗಳಿದ್ದು ಅವುಗಳಲ್ಲಿ 92 ಸೂಕ್ಷ್ಮ ಮತಗಟ್ಟೆಗಳಿವೆ. ಭದ್ರತೆಗಾಗಿ ಒಟ್ಟು 716 ಪೊಲೀಸ್ ಸಿಬ್ಬಂದಿ ಜೊತೆಗೆ ಪ್ಯಾರಾ ಮಿಲಿಟರಿ ಪಡೆಯನ್ನು ನಿಯೋಜನೆ ಮಾಡಲಾಗಿದೆ. ಭರತ್ ಬೊಮ್ಮಾಯಿ, ಯಾಸಿರ್ ಪಠಾಣ್, ಕೆಆರ್‌ಎಸ್ ರವಿಕೃಷ್ಣ ರೆಡ್ಡಿ ಸೇರಿ 8 ಅಭ್ಯರ್ಥಿಗಳು ಅಖಾಡದಲ್ಲಿದ್ದಾರೆ.

**ಸಂಡೂರು ವಿಧಾನಸಭಾ ಕ್ಷೇತ್ರ:** ಸಂಡೂರು ಕ್ಷೇತ್ರದಲ್ಲಿ ಎನ್‌ಡಿಎ ಅಭ್ಯರ್ಥಿಯಾಗಿ ಬಂಗಾರು ಹನುಮಂತು ಮತ್ತು ಕಾಂಗ್ರೆಸ್‌ನಿಂದ ಅನ್ನಪೂರ್ಣ ತುಕಾರಾಂ ಸ್ಪರ್ಧೆಗೆ ಇಳಿದಿದ್ದಾರೆ. ಈ ಕ್ಷೇತ್ರದಲ್ಲಿ ಒಟ್ಟು 253 ಮತಗಟ್ಟೆಗಳಿದ್ದು, ಅವುಗಳಲ್ಲಿ 60 ಸೂಕ್ಷ್ಮ ಮತಗಟ್ಟೆಗಳು ಎಂದು ಗುರುತಿಸಲಾಗಿದೆ. ಕ್ಷೇತ್ರದಲ್ಲಿ ಒಟ್ಟು 2,36,402 ಮತದಾರರಿದ್ದಾರೆ. ಈ ಪೈಕಿ 1,17,935 ಪುರುಷ ಮತ್ತು 1,18,438 ಮಹಿಳೆ ಹಾಗೂ 29 ಇತರೆ ಮತದಾರರು ಇದ್ದಾರೆ. ಭದ್ರತೆಗಾಗಿ ಸುಮಾರು 1036 ಪೊಲೀಸ್ ಸಿಬ್ಬಂದಿಯನ್ನು ನಿಯೋಜನೆ ಮಾಡಲಾಗಿದ್ದು, ಸೂಕ್ಷ್ಮ ಮತ್ತು ಅತೀ ಸೂಕ್ಷ್ಮ ಮತಗಟ್ಟೆಗಳಲ್ಲಿ ಹೆಚ್ಚಿನ ನಿಗಾ ವಹಿಸಲಾಗಿದೆ.

### ಮೊದಲನೇ ಪುಟದಿಂದ...

ಕಳೆದ ಕೆಲ ದಿನಗಳಿಂದ ಮೂರೂ ಕ್ಷೇತ್ರಗಳಲ್ಲಿ ಪ್ರಮುಖ ನಾಯಕರು ತಮ್ಮ ಪಕ್ಷದ ಅಭ್ಯರ್ಥಿಗಳ ಪರ ಬಿರುಸಿನ ಪ್ರಚಾರ ನಡೆಸಿದ್ದರು, ಇಂದು ಅಭ್ಯರ್ಥಿಗಳ ಭವಿಷ್ಯ ಮತಪೆಟ್ಟಿಗೆ ಸೇರಲಿದೆ.

## ಗೊಂಬೆ ಮತಗಟ್ಟೆ

ಗೊಂಬೆ ಮತಗಟ್ಟೆ ಒಳಗೆ ಗೊಂಬೆಗಳನ್ನು ಕೂರಿಸಲಾಗಿದೆ. ಚನ್ನಪಟ್ಟಣದ ಸಾಂಪ್ರದಾಯಿಕ ಗೊಂಬೆಗಳ ಪ್ರದರ್ಶನ ಮಾಡಲಾಗುತ್ತಿದೆ. ಮರದಿಂದ ತಯಾರಿಸಿದ ರೈತರ ಜೀವನಾಡಿ ಎತ್ತಿನ ಗಾಡಿ, ರಾಜ, ರಾಣಿ ಗೊಂಬೆಗಳು, ಮಕ್ಕಳ ಆಟಿಕೆಗಳು, ವಿಶ್ವ ವಿಖ್ಯಾತ ಮೈಸೂರು ದಸರಾ ಜಂಬೂಸವಾರಿ, ಅರಮನೆ ಮತ್ತು ಶ್ರೀರಾಮ ಮಂದಿರ ಸೇರಿ ವಿವಿಧ ಗೊಂಬೆಗಳನ್ನು ಪ್ರದರ್ಶನಕ್ಕೆ ಇಡಲಾಗಿದೆ.

## 26 ಮಂದಿ ಸಾವು

ಕಿರಿದಾದ, ಅಂಕುಡೊಂಕಾದ ಮಾರ್ಗಗಳು ಮತ್ತು ಚಾಲಕನ ಆಯಾಸವು ಅಪಾಯವನ್ನು ಇನ್ನಷ್ಟು ಹೆಚ್ಚಿಸುತ್ತದೆ. ಈ ಪ್ರದೇಶಗಳನ್ನು ವಿಶೇಷವಾಗಿ ಅಪಘಾತ-ಪೀಡಿತವಾಗಿಸುತ್ತದೆ.

ಅಕ್ಟೋಬರ್‌ನಲ್ಲಿ ಖೈಬರ್ ಪಖ್ತುಂಖ್ವಾದ ಅಪ್ಪರ್ ಕೊಹಿಸ್ತಾನ್ ಪ್ರದೇಶದಲ್ಲಿ ರಾವಲ್ಪಿಂಡಿಗೆ ತೆರಳುತ್ತಿದ್ದ ಪ್ರಯಾಣಿಕರ ಬಸ್ ಕಂದಕಕ್ಕೆ ಬಿದ್ದಿದ್ದರಿಂದ ಇಬ್ಬರು ಸಾವನ್ನಪ್ಪಿದ್ದರು ಮತ್ತು 36 ಮಂದಿ ಗಾಯಗೊಂಡಿದ್ದರು.

## ಇಬ್ಬರ ಶವ ಪತ್ತೆ

ಒಂದು ದಿನದ ಹಿಂದೆ, ಜಿರಿಬಾಮ್ ಜಿಲ್ಲೆಯಲ್ಲಿ ಶಂಕಿತ ಉಗ್ರರು ಮತ್ತು ಭದ್ರತಾ ಪಡೆಗಳ ನಡುವೆ ಎನ್‌ಕೌಂಟರ್ ನಡೆದಿತ್ತು, ಇದರಲ್ಲಿ 11 ಉಗ್ರರು ಹತರಾಗಿದ್ದರು.ನಾಪತ್ತೆಯಾದವರಿಗಾಗಿ ಆರಂಭಿಸಲಾದ ಶೋಧ ಕಾರ್ಯಾಚರಣೆಯಲ್ಲಿ ಜಕುರಧೋರ್ ಕರೋಂಗ್ ಪ್ರದೇಶದಲ್ಲಿ ಅವಶೇಷಗಳಡಿಯಲ್ಲಿ ಲೈಶ್ರಾಮ್ ಬಾಲೆನ್ ಮತ್ತು ಮೈಬಮ್ ಕೇಶೋ ಅವರ ಶವಗಳು ಪತ್ತೆಯಾಗಿವೆ.

ಸೋಮವಾರ ಈ ಸ್ಥಳದಲ್ಲಿ ಶಂಕಿತ ಉಗ್ರರು ಕೆಲವು ಅಂಗಡಿಗಳಿಗೆ ಬೆಂಕಿ ಹಚ್ಚಿದ್ದಾರೆ. ಜುಕುರಾದೋರ್ ಕರೋಂಗ್ ಪ್ರದೇಶದಲ್ಲಿ ಉಗ್ರರು ಕೆಲವು ಅಂಗಡಿಗಳಿಗೆ ಬೆಂಕಿ ಹಚ್ಚಿದ ನಂತರ ಇಬ್ಬರು ವೃದ್ಧರು ಸಾವನ್ನಪ್ಪಿದ್ದಾರೆ.

ಈ ಪ್ರದೇಶದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಜಿರಿಬಾಮ್ ಜಿಲ್ಲಾಡಳಿತ ನಿಷೇಧಾಜ್ಞೆ ಜಾರಿಗೊಳಿಸಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಭದ್ರತಾ ಸಿಬ್ಬಂದಿಯೊಂದಿಗಿನ ಎನ್ ಕೌಂಟರ್‌ನಲ್ಲಿ ಶಂಕಿತ ಉಗ್ರರನ್ನು ಕೊಂದಿರುವುದನ್ನು ವಿರೋಧಿಸಿ ಕುಕಿ-ಜೋ ಪ್ರಾಬಲ್ಯದ ಗುಡ್ಡಗಾಡು ಪ್ರದೇಶಗಳಲ್ಲಿ ಮಂಗಳವಾರ ಮುಂಜಾನೆ 5 ಗಂಟೆಯಿಂದ ಬಂದ್ ಕೆ ಕರೆ ನೀಡಲಾಗಿದೆ.

ಸೋಮವಾರ ಭದ್ರತಾ ಪಡೆಗಳು ನಡೆಸಿದ ಎನ್‌ಕೌಂಟರ್ ನಲ್ಲಿ 11 ಶಂಕಿತ ಉಗ್ರರು ಹತರಾಗಿದ್ದಾರೆ. ಅತ್ಯಾಧುನಿಕ ಶಸ್ತ್ರಾಸ್ತ್ರಗಳೊಂದಿಗೆ ಶಸ್ತ್ರಸಜ್ಜಿತವಾದ ಉಗ್ರರು ಪೊಲೀಸ್ ಠಾಣೆ ಮತ್ತು ಜಿರಿಬಾಮ್ ಜಿಲ್ಲೆಯ ಹತ್ತಿರದ ಕೇಂದ್ರೀಯ ಮೀಸಲು ಪೊಲೀಸ್ ಪಡೆ (ಸಿಆರ್‌ಪಿಎಫ್) ಶಿಬಿರದ ಮೇಲೆ ಮನಬಂದಂತೆ ಗುಂಡಿನ ದಾಳಿ ನಡೆಸಿದ ನಂತರ ಎನ್‌ಕೌಂಟರ್ ನಡೆದಿದೆ.

## ಸಂಚಾರ ಸ್ಥಗಿತ

ಘಟನೆಯ ಬಗ್ಗೆ ರೈಲ್ವೆ ಆಡಳಿತ ಮಂಡಳಿಗೆ ಮಾಹಿತಿ ಸಿಕ್ಕಿತು ಮತ್ತು ತಕ್ಷಣವೇ ರೈಲ್ವೇ ಅಧಿಕಾರಿಗಳ ತಂಡವು ಸ್ಥಳಕ್ಕೆ ತಲುಪಿತು. ಬೇಗ ರಸ್ತೆ ಕಾರ್ಮಿಕರು ದುರಸ್ತಿ ಕಾರ್ಯ ಆರಂಭಿಸಿದರು. ಪ್ರಯಾಣಿಕರ ಸುರಕ್ಷತೆಯನ್ನು ಗಮನದಲ್ಲಿಟ್ಟುಕೊಂಡು, ಮುಂದಿನ ಕೆಲವೇ ಗಂಟೆಗಳಲ್ಲಿ ಈ ಅಪಘಾತವನ್ನು ಎದುರಿಸಲು ರೈಲ್ವೆ ಆಡಳಿತವು ಹಲವಾರು ಕ್ರಮಗಳನ್ನು ತೆಗೆದುಕೊಂಡಿತು.

ದೇಶದ ವಿವಿಧೆಡೆ ತೈಲು ಹಳಿ ತಪ್ಪಿಸುವ ಯತ್ನ ನಡೆದಿತ್ತು, ಅದೆಲ್ಲಾ ವಿಫಲವಾಗಿತ್ತು, ಆದರೆ ಈ ಘಟನೆ ಹಿಂದೆ ದುಷ್ಕರ್ಮಿಗಳ ಕೈವಾಡವಿದೆಯೇ ಎಂಬುದರ ಮೇಲೆ ಪ್ರಶ್ನೆಗಳೆದ್ದಿವೆ.

ಪಂಜಾಬ್ ನಲ್ಲಿ ರೈಲ್ವೆ ಹಳಿ ಮೇಲೆ ಕಬ್ಬಿಣದ ಸರಳುಗಳಿದ್ದವು ಇತ್ತೀಚಿನ ಕೆಲವು ದಿನಗಳಿಂದ ಕಿಡಿಗೇಡಿಗಳು ರೈಲು ಹಳಿ ತಪ್ಪಿಸುವ ಯತ್ನ ಮಾಡುತ್ತಿದ್ದಾರೆ. ಕೆಲವೆಡೆ ಸಿಲಿಂಡರ್ ಗಳು, ಇನ್ನೂ ಕೆಲವೆಡೆ ಕಬ್ಬಿಣದ ಕಂಬಗಳು, ಸಿಮೆಂಟ್ ಮೈಲಿಗಲ್ಲುಗಳು ಇತ್ಯಾದಿಗಳು ಸಿಕ್ಕಿವೆ. ಅದೃಷ್ಟವಶಾತ್ ಯಾವುದೇ ಪ್ರಾಣಾಪಾಯಗಳು ಸಂಭವಿಸಿಲ್ಲ. ಪಂಜಾಬ್ ನ ಬಟಿಂಡಾದಲ್ಲಿ ರೈಲ್ವೆ ಹಳಿ ಮೇಲೆ ಕಬ್ಬಿಣದ ಸರಳುಗಳು ಪತ್ತೆಯಾಗಿವೆ, ನಿನ್ನೆಯಷ್ಟೇ ಉತ್ತರ ಪ್ರದೇಶದ ಕಾನ್ಪುರದಲ್ಲಿ ಹಳಿ ಮೇಲೆ ಸಿಲಿಂಡರ್ ಪತ್ತೆಯಾಗಿತ್ತು.

ರಾಡ್‌ಗಳು ಕಾಣಿಸಿಕೊಂಡಿದ್ದು, ಸರಕು ಸಾಗಣೆ ರೈಲಿನ ಲೋಕೊ ಪೈಲಟ್‌ಗೆ ಸರಿಯಾದ ಸಮಯಕ್ಕೆ ಕಾಣಿಸಿದ್ದು ಕೂಡಲೇ ಬ್ರೇಕ್ ಹಾಕಿದ್ದರು. ಮುಂಜಾನೆ 3 ಗಂಟೆಗೆ, ಬಟಿಂಡಾ-ದೆಹಲಿ ರೈಲ್ವೆ ಹಳಿಯಲ್ಲಿ ಸರಕು ಸಾಗಣೆ ರೈಲು ಹಾದು ಹೋಗುತ್ತಿತ್ತು. ಇಲ್ಲಿಯವರೆಗೆ 9 ಕಬ್ಬಿಣದ ರಾಡ್‌ಗಳನ್ನು ವಶಪಡಿಸಿಕೊಳ್ಳಲಾಗಿದ್ದು, ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಲಾಗಿದೆ ಎಂದು ಅವರು ತಿಳಿಸಿದ್ದಾರೆ.

## ಆಪ್ತನಿಗೆ ಡ್ರಿಲ್

14 ಸೈಟ್ ವಿಚಾರದಲ್ಲಿ ಪ್ರಶ್ನೆಗಳನ್ನು ಕೇಳಿ ಬೆವರಿಳಿಸಿದ್ದಾರೆ.

ಮುಡಾದಲ್ಲಿ ನಕಲಿ ಸಹಿ ಬಗ್ಗೆ, ಪಾರ್ವತಿ ಅವರ ಪತ್ರಕ್ಕೆ ದಿನೇಶ್ ಕುಮಾರ್ ಸಹಿ ಹಾಕಿದ ಬಗ್ಗೆ ತೀವ್ರ ವಿಚಾರಣೆ ಮಾಡುವ ಮೂಲಕ ಫುಲ್ ಡ್ರಿಲ್ ಮಾಡಿದ್ದಾರೆ.

## ಸರ್ಕಾರ

ಭಾರತದ ವಿದೇಶಾಂಗ ವ್ಯವಹಾರಗಳ ಸಚಿವಾಲಯದ ಅಫ್ಘಾನಿಸ್ತಾನ ವ್ಯವಹಾರಗಳ ಮುಖ್ಯಸ್ಥರು ಇತ್ತೀಚೆಗೆ ತಾಲಿಬಾನ್‌ನ ಹಂಗಾಮಿ ರಕ್ಷಣಾ ಸಚಿವ ಮುಲ್ಲಾ ಮೊಹಮ್ಮದ್ ಯಾಕೋಬ್ ಅವರೊಂದಿಗೆ ಕಾಬೂಲ್‌ನಲ್ಲಿ ಮಾತುಕತೆ ನಡೆಸಿದ ಸಮಯದಲ್ಲಿ ಕಾಮಿಲ್‌ನ ಈ ನೇಮಕ ನಿರ್ಧಾರ ತೆಗೆದುಕೊಳ್ಳಲಾಗಿತ್ತು.

ಅಫ್ಘಾನ್ ಕಾರ್ಯಾಚರಣೆಗಳಲ್ಲಿ ತಾಲಿಬಾನ್ ಆಳ್ವಿಕೆಯು ಬಂದ ನಂತರ, ಭಾರತದಲ್ಲಿ ರಾಜತಾಂತ್ರಿಕ ಸಿಬ್ಬಂದಿಗಳ ಉಪಸ್ಥಿತಿಯು ಅತ್ಯಲ್ಪವಾಗಿದೆ. ಅಶ್ರಫ್ ಘನಿ ಸರ್ಕಾರದಿಂದ ನೇಮಕಗೊಂಡ ಹೆಚ್ಚಿನ ರಾಜತಾಂತ್ರಿಕರು ಭಾರತವನ್ನು ತೊರೆದಿದ್ದಾರೆ. ಮುಂಬೈ ವಿಮಾನ ನಿಲ್ದಾಣದಲ್ಲಿ ಸುಮಾರು 18.6 ಕೋಟಿ ರೂಪಾಯಿ ಮೌಲ್ಯದ ಚಿನ್ನವನ್ನು ಕಳ್ಳಸಾಗಣೆ ಮಾಡಲು ಯತ್ನಿಸಿ ಸಿಕ್ಕಿಬಿದ್ದ ಆರೋಪದ ಮೇಲೆ ಅಫ್ಘಾನಿಸ್ತಾನದ ಹಿರಿಯ ರಾಜತಾಂತ್ರಿಕ ಜಾಕಿಯಾ ವಾರ್ಡಕ್ ಅವರು ಮೇ ತಿಂಗಳಲ್ಲಿ ತಮ್ಮ ಹುದ್ದೆಗೆ ರಾಜೀನಾಮೆ ನೀಡಿದ್ದರು.

ವಾರ್ಡಕ್ ಕಳೆದ ವರ್ಷ ನವೆಂಬರ್‌ನಲ್ಲಿ ನವದೆಹಲಿಯಲ್ಲಿನ ಅಫ್ಘಾನಿಸ್ತಾನದ ರಾಯಭಾರ ಕಚೇರಿಯ ಉಸ್ತುವಾರಿ ವಹಿಸಿಕೊಂಡರು, ಅಲ್ಲಿ ಅವರ ಹಿಂದಿನ ರಾಯಭಾರಿ ಫರೀದ್ ಮಮ್ಮುಂಜೈ ಯುಕೆಗೆ ತೆರಳಿದ್ದರು.

## ಚಿಂತನೆ

ಈ ಆಟಿಕೆಯ ವಸ್ತುಗಳ ನಿರ್ವಹಣೆಯ ಸಲುವಾಗಿ ಟಿಕೆಟ್ ದರ ಏರಿಸಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸದ್ಯದರಲ್ಲೇ ರಾಜ್ಯದ ಎಲ್ಲ ಬಾಲ ಭವನಗಳ ಪ್ರವೇಶ ಶುಲ್ಕ ಏರಿಕೆಯಾಗುವ ಸಾಧ್ಯತೆ ಇದೆ.

ಈಗಾಗಲೇ ಲಾಲ್ ಬಾಗ್ ಒಳಗೆ ಪ್ರವೇಶ ಶುಲ್ಕ ಜಾಸ್ತಿ ಮಾಡಲಾಗಿದೆ. ಇದೀಗ ಬಾಲ ಭವನ ಪ್ರವೇಶ ಶುಲ್ಕ ಏರಿಸಲು ಮುಂದಾಗುತ್ತಿರುವುದು ಸರಿಯಲ್ಲ, ಸರ್ಕಾರ ಈಗಾಗಲೇ ಎಲ್ಲ ಬೆಲೆ ಏರಿಕೆ ಮಾಡಿ ಹಣ ಹೊಡೆಯುತ್ತಿದೆ. ಪ್ರವೇಶ ಶುಲ್ಕ ಕಡಿಮೆ ಮಾಡಿದರೆ ಪರವಾಗಿಲ್ಲ, ಆದರೆ, ಜಾಸ್ತಿ ಮಾಡಿದರೆ ಪ್ರತಿಭಟನೆ ಮಾಡುತ್ತೇವೆ ಎಂದು ಕಬ್ಬನ್ ಪಾರ್ಕ್ ವಾಕರ್ ಅಸೋಸಿಯೇಷನ್ ಎಚ್ಚರಿಕೆ ನೀಡಿದೆ.

ಇನ್ನು, ನವೆಂಬರ್ 14 ಮಕ್ಕಳ ದಿನಾಚರಣೆ ಹಿನ್ನೆಲೆಯಲ್ಲಿ ಸರ್ಕಾರ ಮೂರು ದಿನ ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. ಈ ಹೊತ್ತಿನಲ್ಲೇ ಪ್ರವೇಶ ಶುಲ್ಕ ಏರಿಕೆ ಮಾಡಲು ಮುಂದಾಗಿದ್ದು, ಸರಿಯಲ್ಲ ಎಂದು ಸಾರ್ವಜನಿಕರು ಅಭಿಪ್ರಾಯ ವ್ಯಕ್ತಪಡಿಸಿದ್ದಾರೆ.

## ಬುಲ್ಡೋಜರ್ ಕಾರ್ಯಾಚರಣೆ ಕುರಿತು ಸುಪ್ರೀಂಕೋರ್ಟ್ ಮಹತ್ವದ ತೀರ್ಪು

**ಉತ್ತರ ಪ್ರದೇಶ:** ಬುಲ್ಡೋಜರ್ ಕಾರ್ಯಾಚರಣೆ ಸಂಬಂಧ ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದೆ. ಆಸ್ತಿಯ ಮಾಲೀಕರಿಗೆ 15 ದಿನಗಳ ಮುಂಚಿತವಾಗಿ ನೋಟಿಸ್ ನೀಡದೆ ಯಾವುದೇ ನೆಲಸಮವನ್ನು ನಡೆಸಬಾರದು ಎಂದು ಸುಪ್ರೀಂ ಕೋರ್ಟ್ ಬುಧವಾರ ನಿರ್ದೇಶನ ನೀಡಿದೆ.

ಒಬ್ಬರು ನ್ಯಾಯಮೂರ್ತಿಗಳ ಪೀಠ ಈ ತೀರ್ಪು ನೀಡಿದೆ.ರಾಜ್ಯಗಳಲ್ಲಿ ಕಾನೂನು ಸುವ್ಯವಸ್ಥೆ ಇರಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಯಾರ ಆಸ್ತಿಯನ್ನು ಸ್ವೇಚ್ಛೆಯಿಂದ ತೆಗೆದುಕೊಳ್ಳುವಂತಿಲ್ಲ. ಯಾರಾದರೂ ತಪ್ಪಿತಸ್ಥರಾದರೂ ಕಾನೂನುಬದ್ಧವಾಗಿ ಮನೆ ಕೆಡವಬಹುದು. ಆರೋಪಿಯಾಗಿರುವುದು ಮತ್ತು ತಪ್ಪಿತಸ್ಥರಾಗಿರುವುದು ಮನೆ ಒಡೆಯಲು ಆಧಾರವಲ್ಲ.

ನಿರ್ದಾಕ್ಷಿಣ್ಯ ಕ್ರಮ ಕೈಗೊಂಡ ಅಧಿಕಾರಿಗಳಿಗೆ ಶಿಕ್ಷೆಯಾಗಲಿದೆ ಬುಲ್ಡೋಜರ್‌ಗಳನ್ನು ನಿರಂಕುಶವಾಗಿ ಬಳಸಿದರೆ ಅಧಿಕಾರಿಗಳನ್ನು ಹೊಣೆಗಾರರನ್ನಾಗಿ ಮಾಡಲಾಗುವುದು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಅಪರಾಧಕ್ಕೆ ಶಿಕ್ಷೆ ನೀಡುವುದು ನ್ಯಾಯಾಲಯದ ಕೆಲಸ. ಆರೋಪಿ ಮತ್ತು ಶಿಕ್ಷೆಗೊಳಗಾದವರಿಗೂ ಕೆಲವು ಹಕ್ಕುಗಳಿವೆ. ಆರೋಪಿ ಎಂಬ ಕಾರಣಕ್ಕೆ ಮನೆ ಕೆಡವುವುದು ಕಾನೂನು ಉಲ್ಲಂಘನೆಯಾಗುತ್ತದೆ.

ಮನಬಂದಂತೆ ಮನೆ ಕೆಡವಿದರೆ ಪರಿಹಾರ ನೀಡಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ಕಾನೂನು ಪ್ರಕ್ರಿಯೆ ಇಲ್ಲದೆ ಬುಲ್ಡೋಜರ್‌ಗಳನ್ನು ನಡೆಸುವುದು ಸಂವಿಧಾನ



ಬಾಹಿರ. ಒಬ್ಬ ವ್ಯಕ್ತಿಯ ತಪ್ಪಿಗೆ ಇಡೀ ಕುಟುಂಬವನ್ನು ಶಿಕ್ಷಿಸಲು ಸಾಧ್ಯವಿಲ್ಲ. ಒಬ್ಬನೇ ಆರೋಪಿಯಾಗಿದ್ದರೆ ಇಡೀ ಕುಟುಂಬದಿಂದ ಮನೆಯನ್ನು ಏಕೆ ಕಳೆದುಕೊಳ್ಳಬೇಕು.

ಬುಲ್ಡೋಜರ್ ಕ್ರಮಕ್ಕೆ ಮುನ್ನ ಆರೋಪಿಗಳ ಪರ ಆಲಿಸಬೇಕು ಎಂದು ಸುಪ್ರೀಂ ಕೋರ್ಟ್ ಹೇಳಿದೆ. ನಿಯಮಾನುಸಾರ ನೋಟಿಸ್ ಜಾರಿ ಮಾಡಬೇಕು. ನೋಟಿಸ್ ಅನ್ನು ನೋಂದಾಯಿತ ಅಂಚೆ ಮೂಲಕ ಕಳುಹಿಸಬೇಕು ಮತ್ತು ಮನೆಯ ಮೇಲೆ ಅಂಟಿಸಬೇಕು.

ಕ್ರಮ ತೆಗೆದುಕೊಳ್ಳುವ ಮೊದಲು 15 ದಿನಗಳ ಸಮಯವನ್ನು ಪಡೆಯಿರಿ. ನೋಟಿಸ್ ಬಗ್ಗೆ ಜಿಲ್ಲಾಧಿಕಾರಿಗಳಿಗೂ ಮಾಹಿತಿ ನೀಡಬೇಕು. ಅಕ್ರಮ ಕಟ್ಟಡ ತೆಗೆಯಲು ಆರೋಪಿಗಳಿಗೆ ಅವಕಾಶ ಸಿಗಬೇಕು. ಸಾರ್ವಜನಿಕ ಭೂಮಿಯನ್ನು ಒತ್ತುವರಿ ಮಾಡಿಕೊಂಡರೆ ಸೂಚನೆಗಳು ಅನ್ವಯವಾಗುವುದಿಲ್ಲ ಎಂದು ಸುಪ್ರೀಂ ಕೋರ್ಟ್ ಹೇಳಿದೆ.

## ವಾಹನ ಸವಾರರರೇ ಎಚ್ಚರ ನಿಧಿ ಹುಡುಕುವ ಸಲುವಾಗಿ ರಾಜ್ಯ ಸರ್ಕಾರ ಅಲ್ಲಲ್ಲಿ ರಸ್ತೆ ಮಧ್ಯೆ ಗುಂಡಿ ತೋಡಿದೆ

**ಮಂಗಳೂರು:** ಎಲ್ಲಿ ನೋಡಿದ್ರೂ ರಸ್ತೆ ಗುಂಡಿಗಳದ್ದೇ ಸಮಸ್ಯೆ ಅದರಲ್ಲೂ ದಕ್ಷಿಣ ಕನ್ನಡ ಜಿಲ್ಲೆಯ ಕುಕ್ಕೆ ಸುಬ್ರಮಣ್ಯದಿಂದ ಹಿಡಿದು ಕೈಕಂಬದವರೆಗಿನ ರಸ್ತೆಯ ಅವಸ್ಥೆಗಳನ್ನು ಕೇಳುವುದೇ ಬೇಡ. ಈ ಗುಂಡಿ ಬಿದ್ದ ರಸ್ತೆಯಲ್ಲಿ ವಾಹನ ಸವಾರರು ಪ್ರಾಣವನ್ನು ಕೈಯಲ್ಲಿ ಹಿಡಿದುಕೊಂಡು ವಾಹನ ಚಲಾಯಿಸುವಂತ ಪರಿಸ್ಥಿತಿ ಬಂದಿದೆ. ರಸ್ತೆ ಗುಂಡಿಗಳನ್ನು ಸರಿ ಪಡಿಸಿ ಎಂದು ಮನವಿ ಮಾಡಿದರೂ ಸಂಬಂಧಪಟ್ಟವರು ಇದಕ್ಕೆ ಕ್ಯಾರೇ ಅನ್ನುತ್ತಿಲ್ಲ. ಇದರಿಂದ ಹೈರಾಣದ ಅಲ್ಲಿನ ಜನ ಇದಕ್ಕೆ ಸಂಬಂಧಪಟ್ಟವರು ಆದಷ್ಟು ಬೇಗ ಕಣ್ತೆರೆಯಲಿ ಎಂದು ರಸ್ತೆಯ ಪಕ್ಕದಲ್ಲಿಯೇ ನಿಧಿ ಹುಡುಕುವ ಸಲುವಾಗಿ ರಾಜ್ಯ ಸರ್ಕಾರ ಅಲ್ಲಲ್ಲಿ ರಸ್ತೆ ಮಧ್ಯೆ ಗುಂಡಿ ತೋಡಿ ಹಾಗೇ ಬಿಟ್ಟಿವೆ ಹಾಗಾಗಿ ವಾಹನ ಸವಾರರು ನಿಧಾನವಾಗಿ ಚಲಿಸಿ ಎಂಬ ಎಚ್ಚರಿಕೆಯ ಫಲಕವನ್ನು ಅಳವಡಿಸಿದ್ದಾರೆ. ಈ ಬ್ಯಾನರ್ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಸಖತ್ ವೈರಲ್ ಆಗುತ್ತಿದೆ.

ಕೈಕಂಬದಿಂದ ಕುಕ್ಕೆ ಸುಬ್ರಮಣ್ಯದವರೆಗಿನ ಹೊಂಡ ಬಿದ್ದ ಹಾಗೂ ಹದಗೆಟ್ಟ ರಸ್ತೆಯನ್ನು ಇನ್ನೂ ಕೂಡಾ ಸರಿ ಪಡಿಸದೇ ಇರುವ ಕಾರಣ ಇದರಿಂದ ಬೇಸತ್ತ ಸ್ಥಳೀಯ ಜನ ''ನಿಧಿ ಹುಡುಕುವ ಸಲುವಾಗಿ ರಾಜ್ಯ ಸರ್ಕಾರ ರಸ್ತೆಯ ಅಲ್ಲಲ್ಲಿ ಗುಂಡಿಗಳನ್ನು ತೋಡಿವೆ. ಹೀಗಾಗಿ ರಸ್ತೆಯಲ್ಲಿ ಗುಂಡಿಗಳಿರುವ ಕಾರಣ ಪ್ರಯಾಣಿಕರು ನಿಧಾನವಾಗಿ ಎಚ್ಚರಿಕೆಯಿಂದ ಚಲಿಸಿ'' ಎಂದು ರಸ್ತೆಯ ಪಕ್ಕದಲ್ಲಿಯೇ ದೊಡ್ಡದಾಗಿ ಬ್ಯಾನರ್ ಅಳವಡಿಸಿದ್ದಾರೆ. ಈ ಬ್ಯಾನರ್ ಅಂತೂ ಇದೀಗ ಸೋಷಿಯಲ್ ಮೀಡಿಯಾದಲ್ಲಿ ಸಿಕ್ಕಾಪಟ್ಟೆ ವೈರಲ್ ಆಗುತ್ತಿದೆ.

ಈ ಕುರಿತ ಪೋಸ್ಟ್ ಒಂದನ್ನು mangalore_today_ ಹೆಸರಿನ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಹಂಚಿಕೊಳ್ಳಲಾಗಿದ್ದು, ''ವಾಹನ ಸವಾರರೇ ನಿಧಾನವಾಗಿ ಚಲಿಸಿ, ನಿಧಿ ಹುಡುಕಲು ರಾಜ್ಯ ಸರ್ಕಾರ ರಸ್ತೆ ಮಧ್ಯೆಯೇ ಅಲ್ಲಲ್ಲಿ ದೊಡ್ಡ ಹೊಂಡ




ತೋಡಿದೆ'' ಎಂಬ ಶೀರ್ಷಿಕೆಯನ್ನು ಬರೆದುಕೊಳ್ಳಲಾಗಿದೆ.

ವೈರಲ್ ಆಗುತ್ತಿರುವ ಫೋಟೋದಲ್ಲಿ ''ಎಚ್ಚರಿಕೆಯ ಫಲಕ; ಯಾರೋ ಮಾಂತ್ರಿಕರು ಕೈಕಂಬದಿಂದ-ಕುಕ್ಕೆ ಸುಬ್ರಮಣ್ಯವರೆಗಿನ ರಸ್ತೆಯಲ್ಲಿ ನಿಧಿ ಇದೆ ಎಂದು ಹೇಳಿದ ಕಾರಣ ಎಚ್ಚೆತ್ತ ರಾಜ್ಯ ಸರ್ಕಾರ ಈ ರಸ್ತೆಯಲ್ಲಿ ನಿಧಿಯನ್ನು ಹುಡುಕಿಸುವ ಕಾರಣದಿಂದ ಅಲ್ಲಲ್ಲಿ ರಸ್ತೆ ಮಧ್ಯೆಯೇ ದೊಡ್ಡ ಹೊಂಡಗಳನ್ನು ತೋಡಿಸಿ ಹಾಗೆಯೇ ಬಿಟ್ಟಿದ್ದಾರೆ, ಹಾಗಾಗಿ ನಿಧಾನವಾಗಿ ಚಲಿಸಿ'' ಎಂಬ ಬರಹವನ್ನು ಬರೆದಿರುವುದನ್ನು ಕಾಣಬಹುದು.

ಒಂದು ದಿನದ ಹಿಂದೆ ಹಂಚಿಕೊಳ್ಳಲಾದ ಈ ಪೋಸ್ಟ್ 4,800 ಕ್ಕೂ ಹೆಚ್ಚು ಲೈಕ್ಸ್ ಮತ್ತು ಹಲವಾರು ಕಾಮೆಂಟ್ಸ್‌ಗಳನ್ನು ಪಡೆದುಕೊಂಡಿದೆ. ಒಬ್ಬ ಬಳಕೆದಾರರು ನಿಧಿ ಇದ್ದರೂ ಇರಬಹುದು ಎಂಬ ಕಾಮೆಂಟ್ ಬರೆದುಕೊಂಡಿದ್ದಾರೆ. ಮತ್ತೊಬ್ಬ ಬಳಕೆದಾರರು ತಳ ಭಾಗದಲ್ಲಿ ಚಿನ್ನ ಸಿಗುವ ಸಾಧ್ಯತೆ ಇರುವುದರಿಂದ ಮೈನಿಂಗ್ ಕಾರ್ಯಾಚರಣೆ ಮುಂದುವರೆಯುವ ಸಾಧ್ಯತೆಯಿದೆ ಎಂದು ತಮಾಷೆ ಮಾಡಿದ್ದಾರೆ.

# ಜ್ಞಾನೋದಯ ಪ.ಪೂ. ಕಾಲೇಜಿಗೆ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ಬಹುಮಾನ



**ಮೈಸೂರು:** ನಗರದ ಸರಸ್ವತಿಪುರಂನಲ್ಲಿರುವ ಜ್ಞಾನೋದಯ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಪದವಿ ಪೂರ್ವ ಶಿಕ್ಷಣ ಇಲಾಖೆಯ ವತಿಯಿಂದ ಆಯೋಜಿಸಿದ ವಿವಿಧ ಸಾಂಸ್ಕೃತಿಕ ಮತ್ತು ಕ್ರೀಡಾ ಸ್ಪರ್ಧೆಗಳಲ್ಲಿ ಭಾಗವಹಿಸಿ ಹಲವು ಬಹುಮಾನಗಳನ್ನು ಪಡೆದಿರುತ್ತಾರೆ. ರಾಜ್ಯ ಮಟ್ಟದ ಕ್ರೀಡಾಕೂಟದ ಚೆಸ್ ಸ್ಪರ್ಧೆಯಲ್ಲಿ ಶರದಿ ಶಾಸ್ತ್ರಿ ದ್ವಿತೀಯ ಸ್ಥಾನ ಪಡೆದು ರಾಷ್ಟ್ರ ಮಟ್ಟಕ್ಕೆ ಆಯ್ಕೆಯಾಗಿರುತ್ತಾರೆ. ಬಾಸ್ಕೆಟ್ ಬಾಲ್‌ನಲ್ಲಿ ಶ್ಲೋಕ್ ಸಿ.ಗೌಡ ದ್ವಿತೀಯ ಸ್ಥಾನ, ಕಾರ್ತಿಕ್ ಚೆಸ್‌ನಲ್ಲಿ ನಾಲ್ಕನೇ ಸ್ಥಾನ ಪಡೆದರು. ಜಿಲ್ಲಾ ಮಟ್ಟದ ಕ್ರೀಡಾಕೂಟದಲ್ಲಿ ವಿದ್ಯಾರ್ಥಿನಿ ಸ್ಪೂರ್ತಿ ಈಜು ಸ್ಪರ್ಧೆಯಲ್ಲಿ 50 ಮೀಟರ್ ಬ್ಯಾಕ್ ಸ್ಟ್ರೋಕ್, 100 ಮೀಟರ್ ಫ್ರೀ ಸ್ಟೈಲ್, ಬಟರ್ಫ್ಲೈನಲ್ಲಿ ಪ್ರಥಮ ಸ್ಥಾನ, ರಿವರ್ ಮಾನ್ಯ ಎಂ. 50 ಮೀಟರ್ ಫ್ರೀ ಸ್ಟೈಲ್‌ನಲ್ಲಿ ಪ್ರಥಮ ಸ್ಥಾನ, 100 ಮೀಟರ್ ಬ್ರೆಸ್ಟ್ ಸ್ಟ್ರೋಕ್ ಪ್ರಥಮ 100 ಮೀಟರ್ ಫ್ರೀ ಸ್ಟೈಲ್ ದ್ವಿತೀಯ, ಕರಾಟೆಯಲ್ಲಿ ಅಜಯ್ ಸಿಲಬಂ ಪ್ರಥಮ, ಧಾರ್ಮಿಕ ಗೌಡ ಟೆನ್ನಿಸ್‌ನಲ್ಲಿ ದ್ವಿತೀಯ, ಕಾರ್ತಿಕ್ ಶೆಟ್ಟಿ ಚೆಸ್‌ನಲ್ಲಿ ತೃತೀಯ, ಜೀವಿತ ಕರಾಟೆಯಲ್ಲಿ ತೃತೀಯ ಸ್ಥಾನ ಪಡೆದು ರಾಜ್ಯ ಮಟ್ಟದ ಸ್ಪರ್ಧೆಗಳಿಗೆ ಆಯ್ಕೆಯಾಗಿರುತ್ತಾರೆ. ಜಿಲ್ಲಾ ಮಟ್ಟದ ಸಾಂಸ್ಕೃತಿಕ ಮತ್ತು ಸಹಪಠ್ಯ ಸ್ಪರ್ಧೆಗಳಲ್ಲಿ ಚೈತ್ರಾ ವೈ.ಡಿ. ಕನ್ನಡ ಚರ್ಚಾ ಸ್ಪರ್ಧೆ ಪ್ರಥಮ, ಧೃತಿ ಎಂ. ಇಂಗ್ಲೀಷ್ ಚರ್ಚಾ ಸ್ಪರ್ಧೆ ಪ್ರಥಮ, ವೈಭವಿ ಕೆ. ಭಕ್ತಿಗೀತೆ ಪ್ರಥಮ, ಭಾವಗೀತೆ ದ್ವಿತೀಯ, ಕಿರಣ್‌ಕುಮಾರ್ ಎಸ್. ಮತ್ತು ಮಂಜುನಾಥ್ ಎಚ್.ಆರ್. ರಸಪ್ರಶ್ನೆ ಸ್ಪರ್ಧೆ ದ್ವಿತೀಯ, ಕಾವ್ಯಶ್ರೀ ಇಂಗ್ಲೀಷ್ ಚರ್ಚಾ ಸ್ಪರ್ಧೆ ತೃತೀಯ ಸ್ಥಾನ ಪಡೆದು ಮುಂದಿನ ವಿಭಾಗ ಮಟ್ಟದ ಸ್ಪರ್ಧೆಗಳಿಗೆ ಆಯ್ಕೆಯಾಗಿರುತ್ತಾರೆ. ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜು ಆಡಳಿತ ಮಂಡಳಿ, ಪ್ರಾಂಶುಪಾಲರು, ಬೋಧಕ, ಬೋಧಕೇತರ ವರ್ಗ ಹಾಗೂ ವಿದ್ಯಾರ್ಥಿಗಳು ಅಭಿನಂದನೆ ಸಲ್ಲಿಸಿರುತ್ತಾರೆ.

# ಪತ್ರಿಕೋದ್ಯಮ ಅಪ್ರೆಂಟಿಸ್ ತರಬೇತಿಗೆ ಅರ್ಜಿ




**ಮೈಸೂರು:** ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ವತಿಯಿಂದ 2024-25ನೇ ಸಾಲಿನ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಪರಿಶಿಷ್ಟ ಜಾತಿಯ 01 ಮತ್ತು ಪರಿಶಿಷ್ಟ ಪಂಗಡದ 01 ಅಭ್ಯರ್ಥಿಗಳ ಆಯ್ಕೆಗೆ ಪತ್ರಿಕೋದ್ಯಮ ಪದವೀಧರ ಅಥವಾ ಸ್ನಾತಕೋತ್ತರ ಪದವೀಧರರಿಗೆ ಮೈಸೂರು ಜಿಲ್ಲಾ ಕಚೇರಿಯಲ್ಲಿ 12 ತಿಂಗಳ ಅವಧಿಯ ಅಪ್ರೆಂಟಿಸ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸುವವರು ಕರ್ನಾಟಕದಲ್ಲಿ ಕಾನೂನಾತ್ಮಕವಾಗಿ ಸ್ಥಾಪಿತಗೊಂಡ ವಿಶ್ವವಿದ್ಯಾನಿಲಯದಿಂದ ಪತ್ರಿಕೋದ್ಯಮದಲ್ಲಿ ಪದವಿ ಅಥವಾ ಸ್ನಾತ್ತಕೋತ್ತರ ಪದವಿ ಪೂರ್ಣಗೊಳಿಸಿರುವ ಹಾಗೂ ಕಂಪ್ಯೂಟರ್ ಜ್ಞಾನವಿರುವ ಕನ್ನಡ ಭಾ?ಯಲ್ಲಿ ಪ್ರಬುದ್ಧತೆ ಇರುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದಾಗಿದೆ. ಅಭ್ಯರ್ಥಿಗಳನ್ನು ಮೆರಿಟ್ ಹಾಗೂ ಸಂದರ್ಶನದ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳಿಗೆ 35 ವರ್ಷ ಒಳಗಿರಬೇಕು. ತರಬೇತಿಯ ಅವಧಿ ವೇಳೆ ಮಾಹೆಯಾನ 15 ಸಾವಿರ ರೂಪಾಯಿ ಸ್ಟೈಪೆಂಡ್ ನೀಡಲಾಗುವುದು. ಒಮ್ಮೆ ಫಲಾನುಭವಿಯಾದವರನ್ನು ಈ ಯೋಜನೆಯಡಿ ಮತ್ತೊಂದು ಅವಧಿಗೆ ಆಯ್ಕೆ ಮಾಡಲು ಅವಕಾಶವಿರುವುದಿಲ್ಲ. ವಿಶೇಷ ಘಟಕ ಯೋಜನೆಯಡಿ ಹಾಗೂ ಗಿರಿಜನ ಉಪಯೋಜನೆಯಡಿ ಯಾವುದೇ ಜಿಲ್ಲೆಯಲ್ಲಿ ಅರ್ಹ ಅಭ್ಯರ್ಥಿಗಳು ದೊರೆಯದೆ ಇದ್ದಲ್ಲಿ ನೆರೆಯ ಜಿಲ್ಲೆಗಳಿಂದ ಅಭ್ಯರ್ಥಿಗಳನ್ನು ಆಯ್ಕೆ ಮಾಡಿಕೊಳ್ಳಲಾಗುವುದು. ಅರ್ಜಿ ಸಲ್ಲಿಸಲು ನವೆಂಬರ್ 30 ಕೊನೆಯ ದಿನಾಂಕವಾಗಿದ್ದು, ಅರ್ಜಿಯನ್ನು ಧನ್ವಂತರಿ ರಸ್ತೆಯಲ್ಲಿರುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಉಪನಿರ್ದೇಶಕರ ಕಚೇರಿಯಲ್ಲಿ ಪಡೆದು ಭರ್ತಿ ಮಾಡಿದ ಅರ್ಜಿಯನ್ನು ಅಗತ್ಯ ದಾಖಲೆಗಳೊಂದಿಗೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ರಮೇಶ್ ಅವರ ದೂ.ಸಂ: 9844393691 ಅನ್ನು ಸಂಪರ್ಕಿಸಬಹುದು ಎಂದು ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಸಹಾಯಕ ನಿರ್ದೇಶಕರಾದ ಹರೀಶ್ ಟಿ.ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಅವಿರೋಧ ಆಯ್ಕೆ

**ಬೆಂಗಳೂರು:** ನವೆಂಬರ್ 11 ರಂದು ನಡೆದ ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತದ ಅಧ್ಯಕ್ಷರ ಹಾಗೂ ಉಪಾಧ್ಯಕ್ಷರ ಚುನಾವಣೆಯಲ್ಲಿ ಮಾಜಿ ಸಚಿವರಾದ ವೆಂಕಟ್‌ರಾವ್ ನಾಡಗೌಡ ಅವರು ಅಧ್ಯಕ್ಷರಾಗಿ ಪುನರಾಯ್ಕೆಯಾಗಿದ್ದಾರೆ. ಹಾಗೂ ಎನ್ ಸೂಗನಗೌಡ ಅವರು ಉಪಧ್ಯಕ್ಷರಾಗಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಕರ್ನಾಟಕ ಸಹಕಾರ ಎಣ್ಣೆಬೀಜ ಬೆಳೆಗಾರರ ಮಹಾಮಂಡಳ ನಿಯಮಿತದ ಪ್ರಭಾರ ವ್ಯವಸ್ಥಾಪಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೆ.ಎ.ಎಸ್ ಪರೀಕ್ಷೆಗೆ ತರಬೇತಿ

**ಬೆಂಗಳೂರು:** ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ವತಿಯಿಂದ, ಕರ್ನಾಟಕ ಲೋಕ ಸೇವಾ ಆಯೋಗದವರು 2024ರ ಡಿಸೆಂಬರ್ 29ರಂದು ನಡೆಸಲಿರುವ ಕೆಎಎಸ್ ಪರೀಕ್ಷೆಗೆ 30 ದಿನಗಳ ತರಬೇತಿಯನ್ನು ಮೈಸೂರಿನ ಕೇಂದ್ರ ಕಛೇರಿಯಲ್ಲಿ ನಡೆಸಲು ನಿರ್ಧರಿಸಲಾಗಿದೆ. ಆಸಕ್ತರು ನವೆಂಬರ್ 16 ರೊಳಗಾಗಿ ಮೈಸೂರಿನ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರದ ಕಛೇರಿಯಲ್ಲಿ ಬೆಳಗ್ಗೆ 10.00 ಗಂಟೆಯಿಂದ ಸಂಜೆ 5.00 ಗಂಟೆಯೊಳಗಾಗಿ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳಬಹುದು. ಹೆಚ್ಚಿನ ವಿವರಗಳಿಗೆ 0821-2515944 ದೂರವಾಣಿ ಸಂಖ್ಯೆಯನ್ನು ಸಂಪರ್ಕಿಸುವಂತೆ ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ ಕುಲಸಚಿವ ಪ್ರೊ. ಕೆ.ಬಿ. ಪ್ರವೀಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 15ರಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆ

**ಮೈಸೂರು:**' ನವೆಂಬರ್ 15 ರಂದು ಬೆಳಿಗ್ಗೆ 11 ಗಂಟೆಗೆ ಸಿದ್ದಾರ್ಥ ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳು ಇವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಸಭೆಯನ್ನು ಹಮ್ಮಿಕೊಂಡಿದ್ದು, ಸಭೆಗೆ ಸಂಬಂಧಪಟ್ಟ ಅರ್ಜಿದಾರರು ಹಾಗೂ ಸಂಬಂಧಿಸಿದ ವಿಷಯಗಳಲ್ಲಿ ಆಸಕ್ತಿಯುಳ್ಳವರು ಹಾಜರಾಗಬಹುದು ಎಂದು ಪ್ರಾದೇಶಿಕ ಸಾರಿಗೆ ಪ್ರಾಧಿಕಾರದ ಕಾರ್ಯದರ್ಶಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮ

**ಮೈಸೂರು:** ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಇಲಾಖೆ, ಕರ್ನಾಟಕ ಉದ್ಯಮಶೀಲತಾ ಅಭಿವೃದ್ಧಿ ಕೇಂದ್ರ(ಸಿಡಾಕ್) ಇವರು ಸ್ವಂತ ಉದ್ಯೋಗವನ್ನು ಸ್ಥಾಪಿಸಲು ಇಚ್ಚಿಸುವವರಿಗಾಗಿ 10 ದಿನಗಳ ಉದ್ಯಮಶೀಲತಾ ಅಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ನವೆಂಬರ್ 19 ರಂದು ಆಯೋಜಿಸಲಾಗಿದೆ. ತರಬೇತಿಯಲ್ಲಿ ಸ್ವಂತ ಉದ್ಯಮವನ್ನು ಸ್ಥಾಪಿಸಲು ಅನುಸರಿಸಬೇಕಾದ ಕ್ರಮಗಳು, ಸರ್ಕಾರದ ಸ್ವಂತ ಉದ್ಯೋಗ ಯೋಜನೆಗಳು, ಬ್ಯಾಂಕಿನ ವ್ಯವಹಾರ, ಮಾರುಕಟ್ಟೆ ಸಮೀಕ್ಷೆ, ಯೋಜನಾ ವರದಿ ತಯಾರಿಕೆ ಹಾಗೂ ಉದ್ಯಮ ನಿರ್ವಹಣೆ, ಇತ್ಯಾದಿ ವಿಷಯಗಳ ಕುರಿತು ತರಬೇತಿಯನ್ನು ನೀಡಲಾಗುವುದು. 18 ವರ್ಷದಿಂದ 45 ವರ್ಷ ವಯಸ್ಸಿನ ಪುರುಷಮತ್ತು ಮಹಿಳೆ ಇಬ್ಬರಿಗೂ ಆದ್ಯತೆ ನೀಡಲಾಗಿದ್ದು, ಆಸಕ್ತ ಅಭ್ಯರ್ಥಿಗಳು ಸಯ್ಯಾಜಿರಾವ್ ರಸ್ತೆಯಲ್ಲಿರುವ ಸಿ.ಟಿ.ಐ ಕಟ್ಟಡದ ಸಿಡಾಕ್ ಜಂಟಿ ನಿರ್ದೇಶಕರ ಕಛೇರಿಯಲ್ಲಿ ಅರ್ಜಿ ಪಡೆದು, ನವೆಂಬರ್ 16 ರ ರೊಳಗೆ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ದೂ.ಸಂ: 6361611136 ಅಥವಾ 7353474649 ಅನ್ನು ಸಂಪರ್ಕಿಸಬಹುದು ಎಂದು ಸಿಡಾಕ್‌ನ ಜಂಟಿ ನಿರ್ದೇಶಕರು ಪ್ರಕಟಣೆಯನ್ನು ತಿಳಿಸಿದ್ದಾರೆ.

## ಹಲವೆಡೆ ವಿದ್ಯುತ್ ವ್ಯತ್ಯಯ

**ಮಂಡ್ಯ:** ಮಂಡ್ಯ ವಿದ್ಯುತ್ ವಿತರಣಾಕೇಂದ್ರದಲ್ಲಿ ತ್ರೈಮಾಸಿಕ ಕಾರ್ಯನಿರ್ವಹಣೆ ಹಮ್ಮಿಕೊಂಡಿರುವುದರಿಂದ ನವೆಂಬರ್ 13 ರಂದು ಬೆಳಿಗ್ಗೆ 09 ರಿಂದ ಸಂಜೆ 5 ಗಂಟೆಯವರೆಗೆ ವಿದ್ಯುತ್‌ನಲ್ಲಿಅಡಚಣೆಉಂಟಾಗಲಿದೆ. ಚಿಕ್ಕ ಮಂಡ್ಯ



ವಿದ್ಯುತ್ ವಿತರಣಾಕೇಂದ್ರದ ನಗರ ಪ್ರದೇಶಗಳಾದ ಶಂಕರಪುರ, ಜೈನ್ ಸ್ಟ್ರೀಟ್, ಬೀಡಿ ಕಾಲೋನಿ, ಜಬರ್ ಸರ್ಕಲ್, ವಿನಾಯಕಾನಂದ ಬಡಾವಣೆ ಹಾಗೂ ಗ್ರಾಮಾಂತರ ಪ್ರದೇಶಗಳಾದ ಗೋಪಾಲಪುರ, ಚಿಕ್ಕಮಂಡ್ಯ, ಸಾತನೂರು, ಕೊಮ್ಮೇರಹಳ್ಳಿ, ಹುಲಿವಾನ, ಕೆ. ಗೌಡಗೆರೆ, ಹೆಚ್.ಮಲ್ಲಿಗೆರೆ, ಎಸ್ .ಐ.ಕೋಡಿಹಳ್ಳಿ, ಹೆಚ್.ಕೋಡಿಹಳ್ಳಿ, ಸಂಪಹಳ್ಳಿ, ಗೊರವಾಲೆ, ಬಿ. ಹೊಸಹಳ್ಳಿ, ಬೀರಗೌಡನಹಳ್ಳಿ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯಉಂಟಾಗುತ್ತದೆಎಂದು ಮಂಡ್ಯಚಾಮುಂಡೇಶ್ವರಿ ವಿದ್ಯುತ್ ಸರಬರಾಜು ನಿಗಮ ನಿಯಮಿತದ ಕಾ ಮತ್ತು ಪಾ ಮಂಡ್ಯ ವಿಭಾಗದಕಾರ್ಯ ನಿರ್ವಾಹಕಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ

**ಚಿಕ್ಕಬಳ್ಳಾಪುರ:** ಪಿಂಚಣಿ ಮತ್ತು ಪಿಂಚಣಿ ದಾರರ ಕಲ್ಯಾಣ ಇಲಾಖೆ ನಡೆಸುತ್ತಿರುವ ರಾಷ್ಟ್ರ ವ್ಯಾಪಿ ಡಿಜಿಟಲ್ ಲೈಫ್ ಸರ್ಟಿಫಿಕೇಟ್ ಅಭಿಯಾನ 30 ದಲ್ಲಿ ಸರಿಸುಮಾರು 800 ನಗರಗಳು ಹಾಗೂ ಪಟ್ಟಣಗಳನ್ನು ಒಳಗೊಂಡಂತೆ ನವೆಂಬರ್ 1 ರಿಂದ ನವಂಬರ್ 30, 2024ರ ವರೆಗೆ ನಡೆಯಲಿದ್ದು, ಇದರಲ್ಲಿ ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ ಸಹಭಾಗಿತ್ವವನ್ನು ಹೊಂದಿದೆ. ಈ ಉಪಕ್ರಮವು ಮುಖ ಚಹರೆ ಮತ್ತು ಬೆರಳಚ್ಚು ದೃಢೀಕರಣದ ಮೂಲಕ ಡಿಜಿಟಲ್ ಪಕ್ರಿಯೆಯ ಹಚ್ಚಿದ ಬಳಕೆಯನ್ನು ಉತ್ತೇಜಿಸುವ ಗುರಿಯನ್ನು ಹೊಂದಿದೆ, ದೂರದ ಪ್ರದೇಶಗಳಲ್ಲಿರುವವರು ಸೇರಿದಂತೆ ಎಲ್ಲಾ ಪಿಂಚಣಿದಾರರನ್ನು ಗುರಿಯಾಗಿಸಿಕೊಂಡು, ಹಿರಿಯ ನಾಗರಿಕ ಪಿಂಚಣಿ ದಾರರಿಗೆ ಅನುಕೂಲವಾಗುವಂತೆ ಅವರ ಮನ/ಬಾಗಿಲಿನ ಹತ್ತಿರ ಸೇವೆಯನ್ನು ಒದಗಿಸುತ್ತದೆ. ಆಐಅ ಕ್ಯಾಂಪೇನ್ 3.0 ಎಲ್ಲಾ ಪಿಂಚಣಿದಾರರು, ವಿಶೇಷವಾಗಿ ಗ್ರಾಮೀಣ ಪ್ರದೇಶಗಳಲ್ಲಿ ವಾಸಿಸುವವರು, ತಮ್ಮ ಜೀವನ ಪ್ರಮಾಣಪತ್ರಗಳನ್ನು ಸುಲಭವಾಗಿ ಸಲ್ಲಿಸಲು ಸಾಧ್ಯವಾಗುತ್ತದೆ ಎಂದು ಖಚಿತಪಡಿಸಿಕೊಳ್ಳುವ ಗುರಿಯನ್ನು ಹೊಂದಿದೆ. ಇದನ್ನು ಸಾಧಿಸಲು, ಪೋಸ್ಟ್ ಮ್ಯಾನ್ ಮತ್ತು ಗ್ರಾಮೀಣ ಡಾಕ್ ಸೇವಕರ ವ್ಯಾಪಕ ನೆಟ್‌ವರ್ಕ್ ಅನ್ನು ಸದುಪಯೋಗಪಡಿಸಿಕೊಳ್ಳುವ ಮೂಲಕ ಪೋಸ್ಟ್ ಆಫೀಸ್‌ಗಳು/ಪಿಂಚಣಿದಾರರ ಮನಬಾಗಿಲು/ಡಿಎಲ್‌ಸಿ ಕ್ಯಾಂಪ್‌ಗಳಲ್ಲಿ, ಡಿಎಲ್‌ಸಿ ಸೇವೆಯನ್ನು ಒದಗಿಸಲು ಅಂಚೆ ಇಲಾಖೆ ಮತ್ತು ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ (ಐಪಿಪಿಬಿ) ನೊಂದಿಗೆ DoPPW ಸಹಭಾಗಿತ್ವವನ್ನು ಹೊಂದಿದೆ.

ಈ ಅಭಿಯಾನವನ್ನು ಪಿಂಚಣಿದಾರರ ಕಲ್ಯಾಣ ಸಂಘಗಳು UIDAI ಇತ್ಯಾದಿ ಸೇರಿದಂತೆ ವಿವಿಧ ಇನ್ನಿತರರು ಬೆಂಬಲಿಸುತ್ತಿದ್ದಾರ. ಈ ಅಭಿಯಾನವು DLC ಪ್ರಕ್ರಿಯೆಯು, ಪಿಂಚಣಿದಾರರಿಗೆ ಸಾಂಪ್ರದಾಯಿಕ ಕಾಗದ ಆಧಾರಿತ ಪ್ರಮಾಣಪತ್ರಗಳನ್ನು ಸಲ್ಲಿಸುವ ಅಗತ್ಯವನ್ನು ನಿವಾರಿಸುತ್ತದೆ ಮತ್ತು ಜೀವನ ಪ್ರಮಾಣಪತ್ರ ಸಲ್ಲಿಕೆಗೆ ಸುಲಭವಾದ ಪ್ರಕ್ರಿಯೆಯನ್ನು ಒದಗಿಸುತ್ತದೆ.

ಇಂಡಿಯಾ ಪೋಸ್ಟ್ ಪೇಮೆಂಟ್ ಬ್ಯಾಂಕ್ 2020 ರಲ್ಲಿ, ಎಲ್ಲಾ ಕೇಂದ್ರ, ರಾಜ್ಯ ಮತ್ತು ಉದ್ಯೋಗಿಗಳ ಭವಿಷ್ಯ ನಿಧಿಯ ಸಂಸ್ಥೆ ಪಿಂಚಣಿದಾರರಿಗೆ ಜೀವನ್ ಪ್ರಮಾಣ ಪತ್ರವನ್ನು ನೀಡಲು ಡಿಜಿಟಲ್ ಲೈಫ್ ಸರ್ಟಿಫಿಕೇಟ್‌ನ ಡೋರ್ ಸ್ಟೈಪ್ ಸೇವೆಯನ್ನು ಪಿಂಚಣಿ ಮತ್ತು ಪಿಂಚಣಿದಾರರ ಕಲ್ಯಾಣ ಇಲಾಖೆಯ ಮತ್ತು ರಾಷ್ಟ್ರೀಯ ಮಾಹಿತಿ ಕೇಂದ್ರ ಸಮನ್ವಯದೊಂದಿಗೆ ಪರಿಚಯಿಸಿದ. ಈ ಸೇವೆಯು ಆಧಾರ್ ದೃಢೀಕರಣವನ್ನು ಆಧಾರವಾಗಿಟ್ಟುಕೊಂಡು ನೀಡುವುದರಿಂದ ಮತ್ತು ಭೌತಿಕವಾಗಿ ಪಿಂಚಣಿ ಕಚೇರಿಗೆ ಭೇಟಿ ನೀಡುವ ಅಗತ್ಯವನ್ನು ಕಡಿಮೆ ಮಾಡುವುದರಿಂದ, ವಯಸ್ಸಾದ ಪಿಂಚಣಿ ದಾರಿಗೆ ತುಂಬಾ ಉಪಯುಕ್ತವಾಗಿದ್ದು, ಕಡಿಮೆ ಸಮಯದಲ್ಲಿ ಜೀವನ ಪ್ರಮಾಣ ಪತ್ರವನ್ನು ನೀಡಲು ಸಾಧ್ಯವಾಗುತ್ತದೆ.. ಜೀವನ ಪ್ರಮಾಣಪತ್ರ ಸೇವೆಯನ್ನು ಇಂಡಿಯಾ ಪೋಸ್ಟ್ ಪೇಮೆಂಟ್ಸ್ ಬ್ಯಾಂಕ್ ಅಥವಾ ಹತ್ತಿರದ ಪೋಸ್ಟ್ ಆಫೀಸ್‌ಗೆ ಭೇಟಿ ನೀಡುವ ಮೂಲಕ ಪಡೆಯಬಹುದು ಅಲ್ಲದ ಪಿಂಚಣಿದಾರರು ಡೋರ್ ಸ್ಟೈಪ್ ಸೇವೆ ಮೂಲಕವೂ ಡಿಜಿಟಲ್ ಜೀವನ ಪ್ರಮಾಣಪತ್ರವನ್ನು ಪಡೆಯಬಹುದು.

ಪಿಂಚಣಿದಾರರು ಮಾಡಬೇಕಾದ ಕೆಲಸವೇನೆಂದರೆ, ಹತ್ತಿರದ ಅಂಚೆ ಕಛೇರಿ ಅಥವಾ ಹತ್ತಿರದ ಪೋಸ್ಟ್‌ಮ್ಯಾನ್/ ಗ್ರಾಮೀಣ ಡಾಕ್ ಸೇವಕರನ್ನು ಸಂಪರ್ಕಿಸುವುದು, ಮತ್ತು ಅವರಲ್ಲಿ ಮನೆ ಬಾಗಿಲಿಗೆ ಡಿಜಿಟಲ್ ಲೈಫ್ ಪ್ರಮಾಣಪತ್ರ ನೀಡುವ ಸೇವೆಯನ್ನು ವಿನಂತಿಸಬಹುದು. ಪೋಸ್ಟ್‌ಮ್ಯಾನ್/ಗ್ರಾಮಿನ್ ಡಾಕ್ ಸೇವಕ್ ರಿಂದ DLC ಸೇವೆಗೆ GST ಸೇರಿದಂತೆ ರೂ.70/- ಗಳ ವಹಿವಾಟು ಶುಲ್ಕವನ್ನು ವಿಧಿಸಲಾಗುತ್ತದೆ. ಈ ಸೇವೆಗಾಗಿ ಪಿಂಚಣಿದಾರರು ಆಧಾರ್ ಸಂಖ್ಯೆ ಮತ್ತು ಪಿಂಚಣಿಯ ವಿವರಗಳನ್ನು ಒದಗಿಸಬೇಕು. ಪ್ರಮಾಣಪತ್ರ ಪ್ರಕ್ರಿಯೆಯು ಪೂರ್ಣಗೊಂಡ ನಂತರ, ಪಿಂಚಣಿದಾರರು ದೃಢೀಕರಣ ಖಿಐಖಿ ಅನ್ನು ಅವರ ಮೊಬೈಲ್ ಸಂಖ್ಯೆಯಲ್ಲಿ ಸ್ವೀಕರಿಸುತ್ತಾರೆ ಮತ್ತು ಆ ಪ್ರಮಾಣಪತ್ರವನ್ನು T+1 ದಿನದ ನಂತರ https://jeevanpramaan.gov.in/ppouser/login ಆನ್ ಲೈನ್ ನಲ್ಲಿ ವೀಕ್ಷಿಸಬಹುದು.

## ರೈತರು ಸದುಪಯೋಗ ಮಾಡಿಕೊಳ್ಳಲು ಜಿಲ್ಲಾಧಿಕಾರಿ ಕರೆ

# ಕನಿಷ್ಠ ಬೆಂಬಲ ಬೆಲೆ ರಾಗಿ, ಜೋಳ, ಭತ್ತ ಖರೀದಿ




**ಕೋಲಾರ:** ಕನಿಷ್ಠಬೆಂಬಲ ಬೆಲೆ ಯೋಜನೆಯಡಿಯಲ್ಲಿ 2024-25ನೇ ಸಾಲಿನಲ್ಲಿ ಭತ್ತ, ರಾಗಿ, ಜೋಳ ಬೆಳೆಗಳನ್ನು ರೈತರಿಂದ ನೇರವಾಗಿ ಖರೀದಿಸಲು ಡಿ.01ರಿಂದ ರೈತರ ನೊಂದಣಿ ಪ್ರಕ್ರಿಯೆ ಆರಂಭಿಸಲಾಗಿದೆ ಎಂದು ಜಿಲ್ಲಾ ಟಾಸ್ಕ್ ಫೋರ್ಸ್ ಸಮಿತಿಯ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿ ಅಕ್ರಂ ಪಾಷ ಅವರು ತಿಳಿಸಿದ್ದಾರೆ.

ರೈತರ ನೊಂದಣಿ ಪ್ರಕ್ರಿಯೆಯು ರಾಗಿ ಮತ್ತು ಜೋಳ ಮತ್ತು ಭತ್ತ ಬೆಳೆಗಳಿಗೆ ಡಿ.01ರಿಂದ ನಡೆಯಲಿದ್ದು, ಕೃಷಿ ಉತ್ಪನ್ನಗಳ ಖರೀದಿ ಪ್ರಕ್ರಿಯೆಯು 2025ನೇ ಜನವರಿ 1ರಿಂದ 2025ನೇ ಮಾರ್ಚ್ 31ರವರೆಗೆ ನಡೆಯಲಿದೆ.

ಕೃಷಿ ಉತ್ಪನ್ನಗಳಾದ ಸಾಮಾನ್ಯ ಭತ್ತಕ್ಕೆ (ಪ್ರತಿ ಕ್ವಿಂಟಲ್‌ಗೆ) ರೂ.2300, ಗ್ರೇಡ್ ಎ-ಭತ್ತಕ್ಕೆ ರೂ.2320, ರಾಗಿಗೆ ರೂ.4290, ಹೈಬ್ರೀಡ್-ಬಿಳಿ ಜೋಳಕ್ಕೆ ರೂ.3371, ಮಾಲ್ದಂಡಿ-ಬಿಳಿ ಜೋಳಕ್ಕೆ ರೂ.3421 ಕನಿಷ್ಠಬೆಂಬಲ ಬೆಲೆಗಳಾಗಿವೆ ಎಂದರು.

ಬೆಂಬಲ ಬೆಲೆ ಯೋಜನೆಯಡಿ ಕೃಷಿ ಉತ್ಪನ್ನವನ್ನು ಮಾರಾಟ ಮಾಡಲು ರೈತರು ಮೊದಲು ಕೃಷಿ ಇಲಾಖೆಯಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೊಂದಣಿ ಮಾಡಿಕೊಳ್ಳಬೇಕು. ಆಯಾ ತಾಲ್ಲೂಕುಗಳ ಕೃಷಿ ಉತ್ಪನ್ನ ಮಾರುಕಟ್ಟೆಯಲ್ಲಿ, ತಾಲೂಕು ಕೃಷಿ ಉತ್ಪನ್ನ ಸಹಕಾರ ಮಾರಾಟ ಸಂಘ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘ ತಾಲೂಕು ಕೇಂದ್ರ ಕಚೇರಿಗಳಲ್ಲಿ ತೆರೆಯಲಾಗುವ ಖರೀದಿ ಕೇಂದ್ರಗಳಲ್ಲಿ ಭತ್ತ, ರಾಗಿ, ಜೋಳ ಮಾರಾಟ ಮಾಡಲು ನೊಂದಾಯಿಸಿಕೊಳ್ಳಬೇಕು ಎಂದು ತಿಳಿಸಿದರು.

ಎಲ್ಲಾ ಹೋಬಳಿ ಮಟ್ಟದ ಖರೀದಿ ಕೇಂದ್ರಗಳಲ್ಲಿ ಆನ್‌ಲೈನ್ ಮುಖಾಂತರ ರೈತರ ನೊಂದಣಿಯನ್ನು ಮಾಡಲಾಗುವುದು. ಖರೀದಿ ಕೇಂದ್ರಕ್ಕೆ ರೈತರು ಕೃಷಿ ಇಲಾಖೆಯಿಂದ ಪಡೆದಿರುವ ಅವರ ಫ್ರೂಟ್ಸ್ ಐ.ಡಿ. (ರೈತರ ನೊಂದಣಿ ಮತ್ತು ಏಕೀಕೃತ ಫಲಾನುಭವಿ ಮಾಹಿತಿ ವ್ಯವಸ್ಥೆ (Farmer Registration and Unified Beneficiary Information System- FRUITS)ಮತ್ತು ಆಧಾರ್‌ನೊಂದಿಗೆ ನೊಂದಣಿ ಕೇಂದ್ರಕ್ಕೆ ಬರಬೇಕು. ಬೆಂಬಲ ಬೆಲೆಗಾಗಿ ರೈತರನ್ನು ಪ್ರತ್ಯೇಕವಾಗಿ ನೊಂದಾಯಿಸದೇ ಕೇವಲ ಅವರ ಫ್ರೂಟ್ಸ್ ಐ.ಡಿ.ಯ ಮೂಲಕ ಖರೀದಿಗೆ ನೊಂದಾಯಿಸಲಾಗುತ್ತದೆ.

ರೈತರ ಫ್ರೂಟ್ಸ್ ಐ.ಡಿ ಯನ್ನು ಪ್ರಸ್ತಕ ಸಾಲಿನಲ್ಲಿ ರೈತರಿಂದ ಫ್ರೂಟ್ಸ್ ಐ.ಡಿ ಪಡೆಯುವುದು ಕಡ್ಡಾಯ. ರೈತರ ಬಳಿ ಫ್ರೂಟ್ಸ್ ಐ.ಡಿ ಇಲ್ಲದಿದ್ದಲ್ಲಿ ಅಥವಾ ಅವರ ಫ್ರೂಟ್ಸ್ ಐ.ಡಿ ಮಾಹಿತಿ ಪರಿ?ಕರಿಸಲು ಕೃಷಿ ಇಲಾಖೆಯನ್ನು ಸಂಪರ್ಕಿಸಿ ಸರಿಪಡಿಸಿಕೊಳ್ಳಬೇಕು.

ಪ್ರತಿಯೊಬ್ಬ ರೈತರ ಫ್ರೂಟ್ಸ್ ಐ.ಡಿ. ನಮೂದಿಸಿದ ನಂತರ ಫ್ರೂಟ್ಸ್ ದತ್ತಾಂಶದಿಂದ ರೈತರ ಅಗತ್ಯ ಮಾಹಿತಿ ಲಭ್ಯವಾಗಲಿದೆ. ಮಾಹಿತಿಯಲ್ಲಿ ರೈತರ ಹೆಸರು, ವಿಳಾಸ, ಜಾತಿ, ವಯಸ್ಸು, ಮೊಬೈಲ್ ಸಂಖ್ಯೆ, ಜಮೀನು ಮತ್ತು ಬೆಳೆದಿರುವ ಬೆಳೆಯ ವಿವರಗಳು ಹಾಗೂ ರೈತರ ಬ್ಯಾಂಕ್ ಖಾತೆಯ ವಿವರಗಳು ಲಭ್ಯವಿರುತ್ತವೆ. ಹಾಗಾಗಿ ಪ್ರತ್ಯೇಕವಾಗಿ ಬೇರೆ ಯಾವುದೇ ದಾಖಲೆ ನೀಡುವ ಅವಶ್ಯಕತೆ ಇರುವುದಿಲ್ಲ. ಫ್ರೂಟ್ಸ್ ದತ್ತಾಂಶದನ್ವಯ ರೈತರ ಬೆಳೆ ಸಮೀಕ್ಷೆ ವಿವರದಂತೆ ಬೆಳೆ ವಿಸ್ತೀರ್ಣಕ್ಕನುಗುಣವಾಗಿ ಬೆಂಬಲ ಬೆಲೆ ಯೋಜನೆಯಡಿ ಖರೀದಿಸಬಹುದಾದ ಗರಿ?ಪ್ರಮಾಣವನ್ನು ತೋರಿಸಲಾಗುವುದು.

ಖರೀದಿ ಕೇಂದ್ರಗಳಲ್ಲಿ ನೊಂದಣಿ ಮಾಡಿದಾಗ ರೈತರಿಗೆ ತಮ್ಮ ಜಮೀನು ಮತ್ತು ಬೆಳೆ ವಿವರ ನೋಡಲು ಅವಕಾಶವಿದೆ. ರೈತರು ಖರೀದಿ ವಿವರಗಳನ್ನು ಒಪ್ಪಿ ನಮೂದಿಸಿದ ನಂತರ ಸ್ವೀಕೃತಿಯನ್ನು ಮುದ್ರಿಸಿ ರೈತರರಿಗೆ ನೀಡಲಾಗುವುದು. ರೈತರು ಭತ್ತ, ರಾಗಿ, ಜೋಳ ಸರಬರಾಜು ಮಾಡುವಾಗ ಎಫ್ .ಎ.ಕ್ಯೂ ಗುಣಮಟ್ಟವನ್ನು ಪರಿಶೀಲಿಸಿ ಖರೀದಿಸಲಾಗುವುದು.

### ಹಣಪಾವತಿ

**ಬೆಂಬಲ ಬೆಲೆ ಯೋಜನೆಯಡಿ ಭತ್ತ, ರಾಗಿ, ಜೋಳ ಸರಬರಾಜು ಮಾಡಿದ ರೈತರಿಗೆ ಅವರು ಕೃಷಿ ಇಲಾಖೆಯಲ್ಲಿ ನೊಂದಾಯಿಸಿಕೊಂಡಿರುವ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್ ಮೂಲಕ ಹಣ ಪಾವತಿಸಲಾಗುವುದು. ಮಧ್ಯವರ್ತಿಗಳು, ಏಜೆಂಟರ್‌ಗಳು ಖರೀದಿ ಕೇಂದ್ರಗಳಿಗೆ ಭತ್ತವನ್ನು ತಂದಲ್ಲಿ ಅಂತಹವರ ವಿರುದ್ಧ ಕ್ರಿಮಿನಲ್ ಮೊಕದ್ದಮೆ ದಾಖಲಿಸಲಾಗುವುದು ಎಂದು ಜಿಲ್ಲಾಧಿಕಾರಿ ಅವರು ಎಚ್ಚರಿಸಿದ್ದಾರೆ. ಬೆಂಬಲ ಬೆಲೆ ಯೋಜನೆ ಬಗ್ಗೆ ರೈತರಿಗೆ ಯಾವುದೇ ಸಮಸ್ಯೆಗಳಿದ್ದರೆ ತಾಲ್ಲೂಕಿನ ತಹಶೀಲ್ದಾರ್, ಕೃಷಿ ಅಧಿಕಾರಿ, ಎ.ಪಿ.ಎಂ.ಸಿ ಕಾರ್ಯದರ್ಶಿ, ರೈತ ಸಂಪರ್ಕ ಕೇಂದ್ರಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಅಧ್ಯಕ್ಷರೂ ಆದ ಜಿಲ್ಲಾಧಿಕಾರಿ ಅಕ್ರಂ ಪಾಷ ತಿಳಿಸಿದರು. ಸಭೆಯಲ್ಲಿ ಅಪರ ಜಿಲ್ಲಾಧಿಕಾರಿ ಮಂಗಳ, ಕೃಷಿ ಜಂಟಿ ನಿರ್ದೇಶಕರು ಸುಮಾ ಸೇರಿದಂತೆ ಪ್ರಮುಖ ಇಲಾಖೆಗಳ ಮುಖ್ಯಸ್ಥರುಗಳು ಹಾಜರಿದ್ದರು.**

### ಬೆಳೆಗಳ ಖರೀದಿ ಮಿತಿ

**ಭತ್ತವನ್ನು ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 25 ಕ್ವಿಂಟಾಲ್ ನಂತೆ ಗರಿಷ್ಠ 40 ಕ್ವಿಂಟಾಲ್ ಮೀರದಂತೆ ಖರೀದಿಸಲಾಗುವುದು. ಜೋಳವನ್ನು ಪ್ರತಿ ರೈತರಿಂದ ಉತ್ಪಾದನೆಗೆ ಅನುಗುಣವಾಗಿ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಎಲ್ಲಾ ರೈತರಿಂದ ಅವರು ಹೊಂದಿರುವ ಜಮೀನಿಗೆ ಅನುಗುಣವಾಗಿ ಖರೀದಿಸಲಾಗುವುದು. ರಾಗಿಯನ್ನು ಸಣ್ಣ ಮತ್ತು ಅತಿ ಸಣ್ಣ ರೈತರಿಂದ ಪ್ರತಿ ಎಕರೆಗೆ 10 ಕ್ವಿಂಟಾಲ್‌ನಂತೆ ಎಲ್ಲಾ ರೈತರಿಂದ ಅವರು ಹೊಂದಿರುವ ಜಮೀನಿಗೆ ಅನುಗುಣವಾಗಿ ಖರೀದಿಸಲಾಗುವುದು ಎಂದು ಜಿಲ್ಲಾಧಿಕಾರಿ ಅವರು ತಿಳಿಸಿದರು.**

## ಬೆಂಬಲ ಬೆಲೆ ನಿಗದಿ

# ನೋಂದಣಿ ಪ್ರಕ್ರಿಯೆಯಲ್ಲಿ ಪಾಲ್ಗೊಳ್ಳಿ



**ಮೈಸೂರು:** 2024-25ನೇ ಸಾಲಿನ ಬೆಂಬಲ ಬೆಲೆ ಯೋಜನೆಯ ಅಡಿಯಲ್ಲಿ ರೈತರಿಂದ ಎಫ್ ಎಕ್ಯು ಗುಣಮಟ್ಟದ ರಾಗಿ, ಭತ್ತ, ಖರೀದಿಸಲು ಬೆಂಬಲ ಬೆಲೆ ನಿಗದಿಪಡಿಸಲಾಗಿದೆ. ಸಾಮಾನ್ಯ ಭತ್ತ ಕ್ವಿಂಟಾಲ್ ಗೆ ರೂ.2300, ರಾಗಿ ಕ್ವಿಂಟಾಲ್ ಗೆ ರೂ. 4290 ಇದ್ದುನೋಂದಣಿ ಪ್ರಕ್ರಿಯೆಯಲ್ಲಿ ರೈತರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳಲು ಕ್ರಮ ವಹಿಸಬೇಕು ಎಂದು ಜಿಲ್ಲಾಧಿಕಾರಿ ಲಕ್ಷ್ಮೀಕಾಂತ ರೆಡ್ಡಿ ತಿಳಿಸಿದರು.

ಜಿಲ್ಲಾಧಿಕಾರಿ ಕಚೇರಿಯಲ್ಲಿ 2024-25ನೇ ಸಾಲಿನ ಮುಂಗಾರು ಋತುವಿನಲ್ಲಿ ಕನಿಷ್ಠ ಬೆಂಬಲ ಬೆಲೆ ಯೋಜನೆಯ ಕುರಿತು ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಗೆ ಭತ್ತ ಮತ್ತು ರಾಗಿ ಖರೀದಿಸಲು ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿ ಯನ್ನು ಖರೀದಿ ಏಜೆನ್ಸಿಯನ್ನಾಗಿ ಸರಕಾರ ನೇಮಕ ಮಾಡಿದ್ದು ಖರೀದಿ ಪ್ರಕ್ರಿಯೆಯು ಇವರ ಮುಖಾಂತರ ನಡೆಯುತ್ತದೆ. ಸರ್ಕಾರದ ಮಾನದಂಡಗಳ ಅನ್ವಯ ಎಫ್‌ಎಕ್ಯು ಗುಣಮಟ್ಟವನ್ನು ದೃಢೀಕರಿಸಲು ಕ್ರಮ ವಹಿಸಬೇಕು. ಖರೀದಿ ಏಜೆನ್ಸಿಯ ಹಿರಿಯ ಅಧಿಕಾರಿಗಳು ಮೇಲುಸ್ತುವಾರಿ ತಪಾಸಣೆ ಕೈಗೊಳ್ಳಬೇಕು ಎಂದು ಅವರು ತಿಳಿಸಿದರು.

ಸೂಕ್ತ ದಾಸ್ತಾನಿಗಾಗಿ ಭತ್ತ/ರಾಗಿ ಖರೀದಿ ಕೇಂದ್ರಗಳಲ್ಲಿ ಭತ್ತದ ಗುಣಮಟ್ಟವನ್ನು ಪರೀಕ್ಷಿಸಲು ಗ್ರೇಡರ್‌ಗಳನ್ನು ನಿಯೋಜಿಸುವಂತೆ ಹಾಗೂ ಖರೀದಿಸಿದ ಭತ್ತ/ರಾಗಿಯನ್ನು ಸೂಕ್ತ ರೀತಿಯಲ್ಲಿ ದಾಸ್ತಾನು ಮಾಡಲು ಅಗತ್ಯವಿರುವ ದಾಸ್ತಾನು ಕೇಂದ್ರಗಳನ್ನು ಗುರುತಿಸುವಂತೆ ಸೂಚನೆ ನೀಡಿದರು. ಭತ್ತ/ರಾಗಿ ಮಾರಾಟ ಮಾಡಬೇಕಾದ ರೈತರು ಈಗಾಗಲೇ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿಯಾಗಿರಬೇಕು.

ಒಂದು ವೇಳೆ ರೈತರು ನೋಂದಣಿ ಮಾಡದಿದ್ದಲ್ಲಿ ಫ್ರೂಟ್ಸ್ ತಂತ್ರಾಂಶದಲ್ಲಿ ನೋಂದಣಿ ಮಾಡಿಕೊಂಡು ತಾವು ಬೆಳೆದ ಭತ್ತ/ರಾಗಿಯನ್ನು ಖರೀದಿ ಕೇಂದ್ರಗಳಲ್ಲಿ ಮಾರಾಟ ಮಾಡಬಹುದಾಗಿದೆ. ಖರೀದಿ ಕೇಂದ್ರಗಳಲ್ಲಿ ರೈತರಿಂದ ಖರೀದಿ ಮಾಡಿದ ಭತ್ತ/ರಾಗಿ ಮೊತ್ತವನ್ನು ನೇರವಾಗಿ ರೈತರ ಬ್ಯಾಂಕ್ ಖಾತೆಗೆ ಜಮೆ ಮಾಡಲಾಗುತ್ತದೆ. ನೊಂದಣಿ ಕೇಂದ್ರದಲ್ಲಿ ರೈತರು ಫ್ರೂಟ್ ಐಡಿ, ಆಧಾರ್ ಸಂಖ್ಯೆಗೆ ಜೋಡಣೆಯಾದ ತಮ್ಮ ಬ್ಯಾಂಕ್ ಖಾತೆಯ ವಿವರಗಳನ್ನು ನೀಡಬೇಕಿದೆ ಎಂದು ಅವರು ತಿಳಿಸಿದರು.

ಭತ್ತದ /ರಾಗಿ ಖರೀದಿ ನೋಂದಣಿ ಪ್ರಾರಂಭವಾಗುವ ದಿನಾಂಕ ಕುರಿತು ಗ್ರಾಮೀಣ ಭಾಗದಲ್ಲಿ ರೈತರಿಗೆ ಹಾಗೂ ರೈತ ಮುಖಂಡರಿಗೆ ರೈತ ಸಂಪರ್ಕ ಕೇಂದ್ರಗಳ ಮೂಲಕ ಹೆಚ್ಚಿನ ಮಾಹಿತಿ ನೀಡುವಂತೆ ಹಾಗೂ ರೈತರ ನೊಂದಣಿ ಕೇಂದ್ರಗಳು ಹಾಗೂ ಭತ್ತ /ರಾಗಿ ಖರೀದಿ ಕೇಂದ್ರಗಳ ಕುರಿತು ವಿವರಗಳನ್ನು ನೀಡುವಂತೆ ಜಿಲ್ಲಾಧಿಕಾರಿಗಳು ತಿಳಿಸಿದರು. ಸಭೆಯಲ್ಲಿ ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಇಲಾಖೆಯ ಜಂಟಿ ನಿರ್ದೇಶಕರಾದ ಕುಮುದಾ ಶರತ್, ಕೃಷಿ ಇಲಾಖೆಯ ಜಂಟಿ ನಿರ್ದೇಶಕರಾದ ರವಿ, ವಾರ್ತಾಧಿಕಾರಿ ಹರೀಶ್, ಕರ್ನಾಟಕ ರಾಜ್ಯ ಕೃಷಿ ಮಾರಾಟ ಮಂಡಳಿಯ ಅಧಿಕಾರಿಗಳು, ಸೇರಿದಂತೆ ಇತರರು ಹಾಜರಿದ್ದರು.

# ಯುವನಿಧಿ ನೋಂದಣಿಗೆ ಅರ್ಜಿ ಆಹ್ವಾನ

**ಮೈಸೂರು:** ಯುವನಿಧಿ ಯೋಜನೆಯ ನೋಂದಣಿ ಕಾರ್ಯಕ್ರಮ ಪ್ರಕ್ರಿಯೆಯಲ್ಲಿದ್ದು, 2024-25 ನೇ ಸಾಲಿನಲ್ಲಿ ಪದವಿ/ಡಿಪ್ಲೋಮ ಉತ್ತೀರ್ಣರಾದ ವಿದ್ಯಾರ್ಥಿಗಳು, ಪದವಿ/ಡಿಪ್ಲೋಮ ನಂತರ ಕನಿಷ್ಟ 6 ತಿಂಗಳ ಅವಧಿಯವರೆಗೆ ಸರ್ಕಾರಿ/ ಖಾಸಗಿ ಉದ್ಯೋಗ ಹೊಂದಿಲ್ಲದವರು, ಸ್ವಯಂ ಉದ್ಯೋಗ ಹೊಂದಿಲ್ಲದವರು, ಉನ್ನತ ವಿದ್ಯಾಭ್ಯಾಸ ಮುಂದುವರೆಸದೇ ಇರುವವರು, ಕರ್ನಾಟಕದಲ್ಲಿ ವಾಸವಿರುವ (ಕನಿಷ್ಟ 6 ವರ್ಷಗಳವರೆಗೆ ಪದವಿ/ ಡಿಪ್ಲೋಮಾದವರೆಗೆ ಅಧ್ಯಯನ ಮಾಡಿದವರು), ಇದರ ಪ್ರಯೋಜನವನ್ನು ಪಡೆಯಬಹುದಾಗಿದೆ.

ಎಸ್.ಎಸ್.ಎಲ್.ಸಿ., ಪಿ.ಯು.ಸಿ, ಪದವಿ/ ಡಿಪ್ಲೋಮ ಪ್ರಮಾಣ ಪತ್ರಗಳು ನೋಂದಣಿಗೆ ಕಡ್ಡಾಯವಾಗಿದ್ದು, ಅಭ್ಯರ್ಥಿಗಳು ಸೇವಾ ಸಿಂಧು ಪೋರ್ಟಲ್ https://sevasindhugs.karnataka.gov.in, , ಕರ್ನಾಟಕ ಒನ್, ಬೆಂಗಳೂರು ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು, ಹೆಚ್ಚಿನ ಸಂಖ್ಯೆಯಲ್ಲಿ ನಿರುದ್ಯೋಗ ಅಭ್ಯರ್ಥಿಗಳು ನೋಂದಾಯಿಸಿಕೊಂಡು ಇದರ ಪ್ರಯೋಜನವನ್ನು ಪಡೆದುಕೊಳ್ಳಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯವಾಣಿ ಸಂ: 1800-5999918, 8748984360, 9036356862, 9113982513, 8217485689 ಅನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಛೇರಿಯ ಸಹಾಯಕ ನಿರ್ದೇಶಕರಾದ ಡಿ.ಎಂ.ರಾಣಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಕೋಲಾರದಲ್ಲಿ ಕನ್ನಡ ಜ್ಯೋತಿ ಹೊತ್ತ ಕನ್ನಡ ರಥ ಯಾತ್ರೆ

**ಕೋಲಾರ:** ಕೋಲಾರದಲ್ಲಿ ನ.21, 22 ಮತ್ತು 23 ರಂದು ಕನ್ನಡ ಜ್ಯೋತಿ ರಥ ಹೊತ್ತ ಕನ್ನಡ ರಥ ಯಾತ್ರೆಯು ಕೋಲಾರ-ಬಂಗಾರಪೇಟೆ-ಕೆ.ಜಿ.ಎಫ್ ತಾಲ್ಲೂಕುಗಳಲ್ಲಿ ಸಂಚರಿಸಲಿದ್ದು, ರಥ ಸಂಚರಿಸುವ ವೇಳೆಯಲ್ಲಿ ಜಿಲ್ಲೆಯ ಎಲ್ಲಾ ಅಧಿಕಾರಿಗಳು ಮತ್ತು ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ಸ್ಥಳೀಯ ಶಾಸಕರು ಜನಪ್ರತಿ ನಿಧಿಗಳು, ಕನ್ನಡ ಸಾಹಿತ್ಯ ಪರಿ?ತ್ತಿನ ಅಧ್ಯಕ್ಷರು ಪಾಧಾಧಿಕಾರಿಗಳು, ನಗರ ಸಭೆಯ ಅಧ್ಯಕ್ಷರು ಮತ್ತು ಸದಸ್ಯರು, ಜಿಲ್ಲಾ ಪಂಚಾಯತ್, ತಾಲ್ಲೂಕು ಪಂಚಾಯತ್, ಗ್ರಾಮ ಪಂಚಾಯತ್, ಸದಸ್ಯರುಗಳು ಕನ್ನಡ ಪರ, ರೈತ ಪರ.ಕಾರ್ಮಿಕ ಸಂಘಟನೆಗಳು, ವಿದ್ಯಾಸಂಸ್ಥೆಗಳು, ಎನ್.ಸಿ.ಸಿ/ಎನ್.ಎಸ್.ಎಸ್.ಸ್ಕೌಟ್ ಮತ್ತು ಗೈಡ್ಸ್ ಗಳು, ರೋಟರಿ/ಲಯನ್ಸ್ ಕ್ಲಬ್,ರೆಡ್ ಕ್ರಾಸ್ ಸೇರಿದಂತೆ ಅನೇಕ ಸೇವಾಸಂಸ್ಥೆಗಳು, ಸ್ತ್ರೀಶಕ್ತಿ ಸಂಘಟನೆಗಳು ಇನ್ನಿತರೆ ಸಂಸ್ಥೆಗಳು ಹಾಗೂ ಸಾರ್ವಜನಿಕರು ಗೌರವಯುತವಾಗಿ ಸ್ವಾಗತಿಸಿ, ಜಿಲ್ಲೆಗಳಲ್ಲಿ ಸಂಚರಿಸುವ ವೇಳೆಯಲ್ಲಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ನಂತರ ಜಿಲ್ಲೆ ಗಡಿಭಾಗಗಳಲ್ಲಿ ಬೀಳ್ಕೊಡುವುದು ಹಾಗೂ ಸದರಿ ಸಂದರ್ಭದಲ್ಲಿ ಸಂಚರಿಸುವಾಗ ಹಾಗೂ ವಾಸ್ತವ್ಯದ ಸ್ಥಳದಲ್ಲಿ ಸೂಕ್ತ ಭದ್ರತೆ ಒದಗಿಸಬೇಕಾಗಿರುವುದರಿಂದ ಈ ಬಗ್ಗೆ ಚರ್ಚಿಸಲು ನವೆಂಬರ್ 13 ರಂದು ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಸಭೆಯನ್ನು ಜಿಲ್ಲಾಧಿಕಾರಿಗಳ ನ್ಯಾಯಾಂಗ ಸಭಾಂಗಣದಲ್ಲಿ ಏರ್ಪಡಿಸಿದೆ.

## ಕಟ್ಟಡಗಳ ಭಗ್ನ ಅವಶೇಷಗಳ ಸೂಕ್ತ ವಿಲೇವಾರಿಗೆ ಆದೇಶ

**ಕೋಲಾರ:** ಶ್ರೀನಿವಾಸಪುರ ಪಟ್ಟಣ ಕಟ್ಟಡಗಳ ಭಗ್ನ ಅವಶೇಷಗಳನ್ನು ಎಲ್ಲೆಂದರಲ್ಲಿ ಹಾಕುತ್ತಿರುವುದರಿಂದ ಸಾರ್ವಜನಿಕರಿಗೆ ಹಾಗೂ ವಾಹನಗಳ ಓಡಾಟಕ್ಕೆ ತುಂಬಾ ತೊಂದರೆ ಉಂಟಾಗುತ್ತಿದ್ದು, ಪುರಸಭೆಗಳ ಅಧಿನಿಯಮ 1964 ಹಾಗೂ (CONSTRUCTION AND DEMOLITION WASTE MANAGEMENT RULES 2016) ರೀತ್ಯಾ ದಂಡಕ್ಕೆ ಅರ್ಹವಾದ ಕೃತ್ಯವಾಗಿರುತ್ತದೆ. ಆದ್ದರಿಂದ ಕಟ್ಟಡಗಳ ಭಗ್ನ ಅವಶೇಷಗಳನ್ನು ಎಲ್ಲೆಂದರಲ್ಲಿ ಎಸೆಯದೆ/ಹಾಕದೆ ತಾತ್ಕಾಲಿಕವಾಗಿ ಪುರಸಭೆ ಒಣತ್ಯಾಜ್ಯ ನಿರ್ವಹಣಾ ಘಟಕದ ಪಕ್ಕದಲ್ಲಿ (ಹೆಬ್ಬಟ ಕೆರೆಯ ತ್ಯಾಜ್ಯ ಸಂಸ್ಕರಣ ಘಟಕ) ಜಾಗವನ್ನು ನಿಗಧಿಪಡಿಸಿದ್ದು, ನಿಗದಿತ ಶುಲ್ಕ ಪಾವತಿಸಿ ವಾಹನವನ್ನು ಅಗತ್ಯವಿದ್ದಲ್ಲಿ ಪಡೆಯಬಹುದು ಅಥವಾ ಶ್ರೀನಿವಾಸಪುರ ಪುರಸಭೆಯಲ್ಲಿ ನೋಂದಾಯಿಸಿ ತಮ್ಮ ಸ್ವಂತ ವೆಚ್ಚದಲ್ಲಿ ಖಾಸಗಿ ವಾಹನವನ್ನು ಉಪಯೋಗಿಸಿಕೊಂಡು ನಿಗಧಿತ ಸ್ಥಳದಲ್ಲಿ ವಿಲೇವಾರಿ ಮಾಡುವುದು ಸದರಿ ಆದೇಶವನ್ನು ಉಲ್ಲಂಘಿಸಿ ಪಟ್ಟಣ ವ್ಯಾಪ್ತಿಯಲ್ಲಿಯ ಸಾರ್ವಜನಿಕ ಸ್ಥಳ ಅಥವಾ ರಸ್ತೆಗಳಲ್ಲಿ ಹಾಕಿದಲ್ಲಿ ರೂ.1000/- ವರೆಗೆ ದಂಡ ವಿಧಿಸಲಾಗುವುದು ಹಾಗೂ ಸೂಕ್ತ ಕಾನೂನು ಅಡಿ ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಪುರಸಭೆಯ ಆರೋಗ್ಯ ಶಾಖೆಯಲ್ಲಿ ಪಡೆಯಬಹುದೆಂದು ಪುರಸಭೆಯ ಮುಖ್ಯಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


## ಪುರಸಭಾ ಕಾರ್ಯಾಲಯ, ಬೊಮ್ಮಸಂದ್ರ

ಆನೇಕಲ್ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ-560099.
ದೂರವಾಣಿ ಸಂಖ್ಯೆ: 080-27834655, ಇ-ಮೇಲ್: itstaff_ulb_bommasandra@yahoo.com

ಸಂಖ್ಯೆ: ಪುಕಾಬೊ/ಆಶಾ/ಸಿಆರ್/80/2024-25 ದಿನಾಂಕ: 11.11.2024

**ಟೆಂಡರ್ ಪ್ರಕಟಣೆ (ಕೆಪಿಪಿಪಿ ಪೋರ್ಟಲ್ ಮುಖಾಂತರ)**

ಮುಖ್ಯಾಧಿಕಾರಿ, ಪುರಸಭೆ, ಬೊಮ್ಮಸಂದ್ರರವರಿಂದ ಕರ್ನಾಟಕ ಪಾರದರ್ಶಕತೆ ಅಧಿನಿಯಮ 1999 & 2000 ರ ಪ್ರಕಾರ ಸ್ವಚ್ಛ ಭಾರತ ಮಿಷನ್ 2.0 ಮತ್ತು ಪುರಸಭಾ ನಿಧಿ ಅನುದಾನದಡಿ ಈ ಕೆಳಕಂಡ ವಿವರಗಳಂತೆ ಟೆಂಡರ್ ಕರೆಯಲಾಗಿರುತ್ತದೆ. ತಾಂತ್ರಿಕವಾಗಿ ಅರ್ಹತೆ ಹೊಂದಿರುವ ಇಚ್ಛೆಯುಳ್ಳ ಗುತ್ತಿಗೆದಾರರು ಕೆಪಿಪಿಪಿ ಪೋರ್ಟಲ್‌ನ ಮುಖಾಂತರ ಟೆಂಡರ್‌ನಲ್ಲಿ ಭಾಗವಹಿಸಬಹುದು. "ಹೆಚ್ಚಿನ ವಿವರಗಳನ್ನು ಆರೋಗ್ಯ ಶಾಖೆಯಿಂದ ಮತ್ತು ಕಛೇರಿ ವೆಬ್‌ಸೈಟ್ **www.bommasandratown.mrc.gov.in** ನಲ್ಲಿ ಪಡೆಯಬಹುದಾಗಿರುತ್ತದೆ".

| ಕ್ರ ಸಂ | ವಿವರ | ಟೆಂಡರಿಗಿಟ್ಟ ಮೊತ್ತ (ರೂ.ಗಳಲ್ಲಿ) | ಇಎಂಡಿ ಮೊತ್ತ (ರೂ.ಗಳಲ್ಲಿ) |
|---|---|---|---|
| 1 | ಬೊಮ್ಮಸಂದ್ರ ಪುರಸಭೆಯ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ PVC Flat Belt Conveyor 45 ft ಖರೀದಿಸುವ ಕುರಿತು. Indent no: DMA/2024-25/IND3843 | ರೂ. 6,48,000.00 | ರೂ. 16,200.00 |
| 2 | ಬೊಮ್ಮಸಂದ್ರ ಪುರಸಭೆಯ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ PVC Inclined Belt Conveyor (15ft) ಖರೀದಿಸುವ ಕುರಿತು. Indent no: DMA/2024-25/IND3846 | ರೂ. 3,55,000.00 | ರೂ. 8,875.00 |
| 3 | ಬೊಮ್ಮಸಂದ್ರ ಪುರಸಭೆಯ ಘನತ್ಯಾಜ್ಯ ವಸ್ತು ನಿರ್ವಹಣೆಗಾಗಿ Pallet truck – 2500 kg, Weighing Scale – 1000 kg, Semi Electric Stacker – 1000 kg ಖರೀದಿಸುವ ಕುರಿತು. Indent no: DMA/2024-25/IND3849 | ರೂ. 2,09,500.00 | ರೂ. 5,238.00 |
| 4 | ಬೊಮ್ಮಸಂದ್ರ ಪುರಸಭೆಯ ಮುಖ್ಯಾಧಿಕಾರಿಗಳು ಹಾಗೂ ಪರಿಸರ ಅಭಿಯಂತರರ ಕಛೇರಿ ಕೆಲಸಕ್ಕೆ ಒಂದು ಸಂಖ್ಯೆಯ ಎ.ಸಿ ಕಾರ್ ವಾಹನವನ್ನು ಬಾಡಿಗೆ ಮೂಲಕ ಸರಬರಾಜು ಮಾಡುವ ಬಗ್ಗೆ Indent no: DMA/2024-25/SE4045 | ರೂ. 4,80,000.00 | ರೂ. 12,000.00 |
| 5 | ಬೊಮ್ಮಸಂದ್ರ ಪುರಸಭೆಯು ಎಲ್ಲಾ ಪೌರಕಾರ್ಮಿಕರಿಗೆ ಹಾಗೂ ಇತರೆ ಸ್ವಚ್ಛತಾ ಸಿಬ್ಬಂದಿಗಳಿಗೆ ಬೆಳಗಿನ ಉಪಾಹಾರದ ಜೊತೆಗೆ ಮೊಟ್ಟೆಯನ್ನು ನೀಡುವ ಬಗ್ಗೆ. Indent no: DMA/2024-25/SE4046 | ರೂ. 8,95,000.00 | ರೂ. 22,375.00 |

**ಟೆಂಡರ್ ಶೆಡ್ಯೂಲ್ ದಿನಾಂಕಗಳು ಈ ಕೆಳಕಂಡಂತಿವೆ.**

1. ಕೆಪಿಪಿಪಿ ಪೋರ್ಟಲ್‌ನಲ್ಲಿ ಟೆಂಡರ್ ಸಲ್ಲಿಸುವ ಕೊನೆಯ **ದಿನಾಂಕ: 29.11.2024ರ 16:00 ಘಂಟೆವರೆಗೆ.**
2. ಕೆಪಿಪಿಪಿ ಪೋರ್ಟಲ್‌ನಲ್ಲಿ ಟೆಂಡರ್‌ನ್ನು ತೆರೆಯುವ **ದಿನಾಂಕ: 30.11.2024 ರ 16.30 ಘಂಟೆಗೆ.**

ಸಹಿ/- ಮುಖ್ಯಾಧಿಕಾರಿ
ಪುರಸಭೆ ಬೊಮ್ಮಸಂದ್ರ

ಸಹಿ/- ಆಡಳಿತಾಧಿಕಾರಿಗಳು
ಪುರಸಭೆ, ಬೊಮ್ಮಸಂದ್ರ

ವಾಸಾಸಂಇ/ವಾ.ಪ್ರ/3154/ಎಸ್‌ಎಸ್‌ಸಿ/2024-25

### 443.35 ಕೋಟಿ ಮೌಲ್ಯದ ವಿವಿಧ ಕಾಮಗಾರಿಗಳಿಗೆ ಶಂಕು ಸ್ಥಾಪನೆ: ಸಿದ್ದರಾಮಯ್ಯ

# ಅಭಿವೃದ್ಧಿ ಕಾರ್ಯಕ್ರಮಗಳಿಗೆ ಅಗತ್ಯ ಅನುದಾನ

**ಮೈಸೂರು:** ನಮ್ಮ ಸರ್ಕಾರವು 5 ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ. ಗ್ಯಾರೆಂಟಿ ಯೋಜನೆಗಳಿಗೆ ವಾರ್ಷಿಕ 58 ಸಾವಿರ ಖರ್ಚು ಮಾಡುತ್ತಿದ್ದರೂ ಅಭಿವೃದ್ಧಿ ಯೋಜನೆಗಳಿಗೆ ಅಗತ್ಯ ಅನುದಾನವನ್ನು ನೀಡಲಾಗುತ್ತಿದೆ ಇದಕ್ಕೆ ಇಂದು ಶಂಕುಸ್ಥಾಪನೆ ಮಾಡುತ್ತಿರುವ ಕಾಮಗಾರಿಗಳೇ ಸಾಕ್ಷಿ ಎಂದು ಮಾನ್ಯ ಮುಖ್ಯಮಂತ್ರಿಗಳಾದ ಸಿದ್ದರಾಮಯ್ಯ ತಿಳಿಸಿದರು.

ಹೆಚ್.ಡಿ ಕೋಟೆ ಪದವಿ ಪೂರ್ವ ಕಾಲೇಜು ಆವರಣದಲ್ಲಿ ಹಮ್ಮಿಕೊಂಡಿದ್ದ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಜಯಂತಿ ಹಾಗೂ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ರೂ. 443.35 ಕೋಟಿಗಳ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಶಂಕು ಸ್ಥಾಪನೆ ಹಾಗೂ ಉದ್ಘಾಟನಾ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಇಡೀ ರಾಜ್ಯದಲ್ಲಿ ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದಲ್ಲಿ ಮಹರ್ಷಿ ವಾಲ್ಮೀಕಿ ಜಯಂತಿಯನ್ನು ಆಚರಣೆ ಮಾಡುತ್ತಾ ಬಂದಿದ್ದೇವೆ. ಕಲೆ ಸಾಹಿತ್ಯ ಹಾಗೂ ವಿವಿಧ ಕ್ಷೇತ್ರಗಳಲ್ಲಿಸಾಧನೆ ಮಾಡಿರುವ ಜನಾಂಗದವರಿಗೆ ಪ್ರಶಸ್ತಿಗಳನ್ನು ನೀಡಿ ಗೌರವಿಸಲಾಗುತ್ತಿದೆ. 24 ಸಾವಿರ ಶ್ಲೋಕಗಳು ಇರುವ ರಾಮಾಯಣ ಮಹಾಗ್ರಂಥವನ್ನು ಮಹರ್ಷಿ ವಾಲ್ಮೀಕಿ ಅವರು ಸಂಸ್ಕೃತದಲ್ಲಿ ಗ್ರಂಥವನ್ನು ರಚನೆ ಮಾಡಿದರು. ಆ ಕಾಲದಲ್ಲಿ ತಳ ಸಮುದಾಯಕ್ಕೆ ಸೇರಿದವರು ಸಂಸ್ಕೃತವನ್ನು ಕಲಿಯಲು ಅವಕಾಶ ಇರಲಿಲ್ಲ ಅಂತ ಕಾಲದಲ್ಲಿಯೂ ಸಂಸ್ಕೃತ ಕಲಿತು ರಾಮಾಯಣ ರಚನೆ ಮಾಡಿರುವುದು ನಮ್ಮೆಲ್ಲರ ಹೆಮ್ಮೆಯ ವಿಷಯ ಎಂದರು.

ವಿದ್ಯೆ ಯಾರಪ್ಪನ ಸ್ವತ್ತು ಅಲ್ಲ. ವಿದ್ಯಾವಂತರಾಗಲು ಯಾವುದೇ ಜಾತಿ ಅವಶ್ಯಕತೆ ಇಲ್ಲ. ವಿದ್ಯೆ ಕಲಿಯಲು ಪ್ರತಿಯೊಬ್ಬರಿಗೂ ಸಮಾನ ಅವಕಾಶ ಸಿಗಬೇಕು. ನಿಮ್ಮ ಜೀವನವನ್ನು ರೂಪಿಸಿಕೊಳ್ಳುವ ಶಿಲ್ಪಿ ನೀವೇ ಎಂದು ಮಹರ್ಷಿ ವಾಲ್ಮೀಕಿ ಅವರು ತಿಳಿಸಿದ್ದಾರೆ ಎಂದರು.

ಜೀವನದ ತತ್ವ ಆದರ್ಶಗಳನ್ನು ಕಲಿಯಲು ರಾಮಾಯಣ ಮಹಾ ಗ್ರಂಥದಿಂದ ಸಾಧ್ಯ. ರಾಮರಾಜ್ಯ ಎಂದು ಮಹಾತ್ಮಾ ಗಾಂಧೀಜಿ ಅವರು ಕರೆದರು. ರಾಮ ರಾಜ್ಯದಲ್ಲಿ ಯಾವುದೇ ಜಾತಿ, ಮೇಲು ಕೀಳು ಭಾವನೆ ಇರಬಾರದು. ಸಮಸಮಾಜದ ನಿರ್ಮಾಣಕ್ಕೆ ಪ್ರತಿಯೊಬ್ಬರೂ ಕೈಜೋಡಿಸಿ ಎಂದರು.

443.35 ಕೋಟಿ ವೆಚ್ಚದ ಅಭಿವೃದ್ಧಿ ಕಾಮಗಾರಿಗಳ ಶಂಕು ಸ್ಥಾಪನೆ ಹಾಗೂ ಉದ್ಘಾಟನೆ ಮಾಡಲಾಗುತ್ತಿದೆ. ನಾವು ಗ್ಯಾರೆಂಟಿ ಯೋಜನೆಗಳನ್ನು ಜಾರಿಗೆ ತಂದಿದ್ದರು ಅಭಿವೃದ್ಧಿ ಕಾರ್ಯಗಳಿಗೆ ಅನುದಾನವನ್ನು ನೀಡಲಾಗುತ್ತಿದೆ. ಶಕ್ತಿ ಯೋಜನೆಯಡಿ 324 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದಾರೆ.

1.64 ಕೋಟಿ ಕುಟುಂಬಗಳಿಗೆ ಉಚಿತ ವಿದ್ಯುತ್ ನೀಡಲಾಗುತ್ತಿದೆ. 1.22 ಕೋಟಿ ಮನೆಯ ಯಜಮಾನಿಯರಿಗೆ ಮಾಸಿಕ 2000 ರೂ ನೀಡಲಾಗುತ್ತಿದೆ. ಅನ್ನ ಭಾಗ್ಯ ಯೋಜನೆಯಡಿ ಬಿಪಿಎಲ್ ಕುಟುಂಬದ ಸದಸ್ಯರಿಗೆ 5 ಅಕ್ಕಿ ಹಾಗೂ 5 ಅಕ್ಕಿಗೆ ಹಣ ನೀಡಲಾಗುತ್ತಿದೆ. ಯುವ ನಿಧಿ ಯೋಜನೆಯಡಿ ಡಿಗ್ರಿ ಮಾಡಿದವರಿಗೆ 3 ಸಾವಿರ ಹಾಗೂ ಡಿಪ್ಲಾಮೊ ಮಾಡಿದವರಿಗೆ 1500 ರೂ ನೀಡಲಾಗುತ್ತಿದೆ ಎಂದು ಮಾಹಿತಿ ನೀಡಿದರು.

ಪರಿಶಿಷ್ಟಜಾತಿ ಹಾಗೂ ಪರಿಶಿಷ್ಟಪಂಗಡದ ಅಭಿವೃದ್ಧಿಗೆ 2013 ರಲ್ಲಿ ಎಸ್ ಸಿ ಪಿ ಹಾಗೂ ಟಿ ಎಸ್ ಪಿ ಕಾನೂನನ್ನು ಜಾರಿಗೆ ತಂದು ಅಭಿವೃದ್ಧಿಗೆ ಅನುದಾನವನ್ನು ಮೀಸಲು ಇಟ್ಟು ಬಳಕೆ ಮಾಡಲಾಗುತ್ತಿದೆ. ಬಸವ ಬುದ್ಧ ಮಹಾತ್ಮಾ ಗಾಂಧೀಜಿ, ಅಂಬೇಡ್ಕರ್ ಅವರ ತತ್ವ ಗಳಲ್ಲಿ ನಂಬಿಕೆ ಇಟ್ಟುಕೊಂಡು ಬಡವರ ಅಭಿವದ್ಧಿಗೆ ಶ್ರಮಿಸುವುದು ನನ್ನ ಗುರಿಯಾಗಿದೆ. ಹೆಚ್ ಡಿ ಕೋಟೆಯಲ್ಲಿ ವಾಲ್ಮೀಕಿ ಭವನ ನಿರ್ಮಾಣಕ್ಕೆ 2 ಕೋಟಿ ಅನುದಾನವನ್ನು ನೀಡಲಾಗುವುದು ಎಂದು ತಿಳಿಸಿದರು.

ಚಾಮರಾಜನಗರ ಲೋಕಸಭಾ ಕ್ಷೇತ್ರದ ಸಂಸದರಾದ ಸುನೀಲ್ ಬೋಸ್ ಅವರು ಮಾತನಾಡಿ ಈ ಭಾಗದ ಶಾಸಕರಾದ ಅನಿಲ್ ಕುಮಾರ್.ಸಿ ಅವರು ಉತ್ತಮ ಅಭಿವೃದ್ಧಿ ಕಾರ್ಯಗಳನ್ನು ಮಾಡುತ್ತಾ ಇದ್ದಾರೆ. ಇವರು ಸತತವಾಗಿ 2 ಬಾರಿ ಗೆದ್ದು ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದಲ್ಲಿ ಇತಿಹಾಸ ಸೃಷ್ಟಿಸಿದ್ದಾರೆ. ಈ ಕ್ಷೇತ್ರದಲ್ಲಿ ಯಾರು ಸತತವಾಗಿ 2 ಬಾರಿ ಗೆದ್ದಿದ್ದಾರೆ. ಇವರು ಟೇಬಲ್ ಟು ಟೇಬಲ್ ಹೋಗಿ ತಮ್ಮ ಕ್ಷೇತ್ರದ ಕೆಲಸವನ್ನು ಮಾಡಿಸಿಕೊಂಡು ಬಂದು ಕ್ಷೇತ್ರವನ್ನು ಮಾದರಿ ಕ್ಷೇತ್ರ ಮಾಡುವ ಗುರಿಯನ್ನು ಹೊಂದಿದ್ದಾರೆ ಎಂದರು.

ವಾಲ್ಮೀಕಿ ಮಹರ್ಷಿ ಅವರ ಜಯಂತಿಯನ್ನು ಆಚರಿಸುತ್ತಾ ಇದ್ದೇವೆ. ಇವರು ರಾಮಾಯಣ ಮಹಾ ಗ್ರಂಥವನ್ನು ರಚಿಸಿದರು. ವಾಲ್ಮೀಕಿ ಅವರು ಹಿಂದೆ ಬೇಡ ಆಗಿದ್ದರು. ನಂತರ ಇವರು ತಪಸ್ಸು ಮಾಡಿ ಇವರ ಸುತ್ತ ಹುತ್ತ ಬೆಳೆದುಕೊಳ್ಳುತ್ತದೆ. ಇವರಿಗೆ ಜ್ಞಾನೋದಯ ಆಗಿ ರಾಮಾಯಣ ಮಹಾ ಗ್ರಂಥವನ್ನು ರಚಿಸಿದರು. ಇವರ ಉತ್ತಮ ಅಂಶಗಳನ್ನು ನಾವೆಲ್ಲರೂ ಜೀವನದಲ್ಲಿ ಅಳವಡಿಸಿಕೊಂಡು ಉತ್ತಮ ಸಮಾಜ ನಿರ್ಮಾಣದಲ್ಲಿ ಭಾಗಿಯಾಗೋಣ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಹೆಚ್.ಡಿ ಕೋಟೆ ವಿಧಾನಸಭಾ ಕ್ಷೇತ್ರದ ಶಾಸಕರಾದ ಅನಿಲ್ ಕುಮಾರ್.ಸಿ ನನಗೆ ಎರಡು ಬಾರಿ ಶಾಸಕನಾಗಿ ಆಯ್ಕೆ ಮಾಡಿ ಆಶೀರ್ವಾದ ಮಾಡಿರುವ ಕ್ಷೇತ್ರದ ಜನತೆಗೆ ನನ್ನ ಧನ್ಯವಾದಗಳು. ಮಾನ್ಯ ಮುಖ್ಯ ಮಂತ್ರಿಗಳಾದ ಸಿದ್ದರಾಮಯ್ಯ ಅವರು ಕ್ಷೇತ್ರಕ್ಕೆ ಅತಿ ಹೆಚ್ಚು ಅನುದಾನವನ್ನು ನೀಡಿ ಅಭಿವೃದ್ಧಿಗೆ ಸಹಕರಿಸಿದ್ದಾರೆ ಎಂದರು.

ಮಹರ್ಷಿ ವಾಲ್ಮೀಕಿ ಅವರು ರಾಮಾಯಣ ರಚಿಸಿದರು. ಇದರಿಂದ ಶ್ರೀರಾಮ ಅವರ ಬಗ್ಗೆ ಜಗತ್ತಿಗೆ ತಿಳಿಸಿದರು ಇದರಿಂದ ಅಯೋಧ್ಯೆಯಲ್ಲಿ ರಾಮಮಂದಿರ ನಿರ್ಮಾಣದಲ್ಲಿ ಪರೋಕ್ಷವಾಗಿ ವಾಲ್ಮೀಕಿ ಅವರು ಕಾರಣರಾಗಿದ್ದಾರೆ. ಸಿದ್ದರಾಮಯ್ಯ ಅವರು ಬೆಂಗಳೂರಿನಲ್ಲಿ ವಾಲ್ಮೀಕಿ ಅವರ ಪ್ರತಿಮೆಯನ್ನು ನಿರ್ಮಾಣ ಮಾಡಿದರು. ಪರಿವಾರ ತಳವಾರ ಸಮುದಾಯವನ್ನು ಪರಿಶಿಷ್ಟಪಂಗಡಕ್ಕೆ ಸೇರಿದವರು. ಹೆಚ್ ಡಿ ಕೋಟೆಯಲ್ಲಿ ಮಹರ್ಷಿ ವಾಲ್ಮೀಕಿ ಭವನ ನಿರ್ಮಾಣಕ್ಕೆ 2 ಕೋಟಿ ಅನುದಾನದ ಅವಶ್ಯಕತೆ ಇದೆ. ಮೈಸೂರು ಮಾನಂದವಾಡಿ ರಸ್ತೆಯನ್ನು ಮೇಲ್ದರ್ಜೆಗೆ ಏರಿಸಬೇಕು. ರಾಷ್ಟ್ರೀಯ ಹೆದ್ದಾರಿ ಮಾಡಲು ಕೇಂದ್ರ ಸರಕಾರಕ್ಕೆ ಮನವಿ ಸಲ್ಲಿಸಲಾಗಿದೆ. ಕ್ಷೇತ್ರದ ಅಭಿವೃದ್ಧಿಗೆ ಇನ್ನೂ ಹೆಚ್ಚಿನ ಅನುದಾನವನ್ನು ನೀಡಬೇಕು ಎಂದು ಮುಖ್ಯಮಂತ್ರಿ ಅವರಿಗೆ ಮನವಿ ಮಾಡಿದರು.

ರಾಜಮನೆ ಮಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿ ಅವರು ಮಾತನಾಡಿ ರತ್ನಾಕರ ಮೂಲತಃ ಬೇಡ ಇವರು ತಮ್ಮನ್ನು ಪರಿವರ್ತನೆ ಮಾಡಿಕೊಂಡು ಮಹರ್ಷಿ ವಾಲ್ಮೀಕಿ ಆಗಿ ರಾಮಾಯಣವನ್ನು ರಚನೆ ಮಾಡಿದರು.ರಾಮಾಯಣ ನಮ್ಮ ಜೀವನದಲ್ಲಿ ಹಾಸು ಹೊಕ್ಕಾಗಿ ಇದೆ. ರಾಮಾಯಣ ಎಂದರೆ ಅಣ್ಣ ತಮ್ಮಂದಿರ ಆಸ್ತಿ ಮತ್ತು ಅಧಿಕಾರ ತ್ಯಾಗಕ್ಕಾಗಿ ನಡೆದದ್ದು. ಪರಿಶಿಷ್ಟಜಾತಿ ಮತ್ತು ಪರಿಶಿಷ್ಟಪಂಗಡದ ಸಮುದಾಯಕ್ಕೆ ಇನ್ನೂ ಹೆಚ್ಚಿನ ಅನುದಾನವನ್ನು ನೀಡಿ ಅಭಿವೃದ್ಧಿಗೆ ಸಹಕರಿಸಬೇಕು ಎಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು.

ಕಾರ್ಯಕ್ರಮದಲ್ಲಿ ಕೆ. ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ ರವಿಶಂಕರ್, ನಂಜನಗೂಡು ವಿಧಾನಸಭಾ ಕ್ಷೇತ್ರದ ಶಾಸಕರಾದ ದರ್ಶನ್ ಧ್ರುವನಾರಾಯಣ್, ವಿಧಾನ ಪರಿಷತ್ ಸದಸ್ಯರಾದ ಡಾ. ಡಿ.ತಿಮ್ಮಯ್ಯ, ಯತೀಂದ್ರ ಸಿದ್ದರಾಮಯ್ಯ, ಪ್ರಾದೇಶಿಕ ಆಯುಕ್ತರಾದ ರಮೇಶ್, ದಕ್ಷಿಣ ವಲಯದ ಐಜಿಪಿ ಬೋರಲಿಂಗಯ್ಯ, ಅವರು ಸೇರಿದಂತೆ ವಿವಿಧ ಮುಖಂಡರು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು




**ಬಡವರ ಪರ ನಾವು**

**ವಿಧಾನ ಪರಿಷತ್‌ನ ಶಾಸಕರಾದ ಯತಿಂದ್ರ ಸಿದ್ದರಾಮಯ್ಯ ಅವರು ಮಾತನಾಡಿ ವಾಲ್ಮೀಕಿ ಮಹರ್ಷಿ ಅವರು ಬೇಡ ಜನಾಂಗಕ್ಕೆ ಸೇರಿದವರು. ಇವರು ತಪಸ್ಸು ಮಾಡಿ ಅವರ ಸುತ್ತ ಹುತ್ತ ಬೆಳೆಯಿತು. ಸಂಸ್ಕೃತದಲ್ಲಿ ಹುತ್ತಕ್ಕೆ ವಲ್ಮೀಕಿ ಎಂದು ಕರೆಯುತ್ತಾರೆ. ಇವರು ತಳ ಸಮುದಾಯಕ್ಕೆ ಸೇರಿದವರು. ಹೀಗೆ ತಳ ಸಮುದಾಯಕ್ಕೆ ಸೇರಿದವರ ಜಯಂತಿಗಳನ್ನು ಆಚರಿಸಬೇಕು. ಇದರಿಂದ ತಳ ಸಮುದಾಯಕ್ಕೆ ಆತ್ಮ ವಿಶ್ವಾಸ ಬೆಳಸಲು ಸಾಧ್ಯವಾಗುತ್ತದೆ. ಮಹನೀಯರ ಜಯಂತಿ ಆಚರಣೆ ಮಾಡುವ ಮೂಲಕ ಅವರ ತತ್ವ ಸಿದ್ಧಾಂತಗಳನ್ನು ನಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ನಾವು ಅಧಿಕಾರಕ್ಕೆ ಬರುವ ಮುಂಚೆ 5 ಗ್ಯಾರಂಟಿ ಯೋಜನೆಗಳ ಭರವಸೆ ನೀಡಿದ್ದವು ಅಧಿಕಾರಕ್ಕೆ ಬಂದ 10 ತಿಂಗಳಲ್ಲಿ ಎಲ್ಲಾ 5 ಗ್ಯಾರಂಟಿ ಯೋಜನೆಗಳನ್ನು ಯಶಸ್ವಿಯಾಗಿ ಜಾರಿಗೆ ತಂದು ನುಡಿದಂತೆ ನಡೆದಿದ್ದೇವೆ. ಈ ಗ್ಯಾರೆಂಟಿ ಯೋಜನೆಗಳಿಗೆ ವಾರ್ಷಿಕ 58 ಸಾವಿರ ಕೋಟಿ ವೆಚ್ಚವಾಗುತ್ತಿದೆ. ಬಡವರ ಪರ ನಾವು ಇಡುವುದಕ್ಕೆ ಸಾಕ್ಷಿ ಗ್ಯಾರೆಂಟಿ ಯೋಜನೆಗಳೇ ಆಗಿವೆ ಎಂದು ತಿಳಿಸಿದರು.**

## ವಿಮಾ ಕಂಪನಿಗೆ 25 ಸಾವಿರ ದಂಡ: ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಆದೇಶ

**ಚಿಕ್ಕಬಳ್ಳಾಪುರ:** ಬಾಗೇಪಲ್ಲಿ ನಗರದ ಬಿ.ಎಸ್. ಶೇಷಾದ್ರ ರವರು ಐಸಿಐಸಿಐ ಪ್ರೂಡೆನ್ ಶಿಯಲ್ ಲೈಫ್ ಇನ್ ಶೂರೆನ್ಸ್ ಲಿಮಿಟೆಡ್ ನಲ್ಲಿ ಯು.ಎಲ್.ಐ.ಪಿ ಪಾಲಿಸಿ ತೆಗೆದುಕೊಂಡಿದ್ದು, ಪ್ರಿಮಿಯಮ್ ಹಣವನ್ನು ಐದು ವರ್ಷದವರೆಗೆ ನಿಗದಿತ ಸಮಯದಲ್ಲಿ ಪಾವತಿಸಿದ್ದು, ವಿಮಾ ಕಂಪನಿಯವರು ಬಿ.ಎಸ್. ಶೇಷಾದ್ರಿ ಅವರಿಗೆ ಪರಿಪಕ್ವವಾದ ವಿಮಾ ಹಣವನ್ನು 2022ರ ಮಾರ್ಚ್ 31 ರಂದು ನೀಡುವ ಬದಲು 2022ರ ಆಗಸ್ಟ್ 23 ರಂದು ನೀಡಿದ್ದು, ತಮಗಾದ ಅನ್ಯಾಯವನ್ನು ಸರಿಪಡಿಸಲು ಚಿಕ್ಕಬಳ್ಳಾಪುರ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ದೂರು ನೀಡಿರುತ್ತಾರೆ. ಸದರಿ ದೂರನ್ನು ವಿಚಾರಣೆ ಕೈಗೊಂಡ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷ ಎನ್. ಕುಮಾರ್, ಸದಸ್ಯರಾದ ಹೆಚ್. ಜನಾರ್ಧನ್ ಅವರು ವಿಮಾ ಕಂಪನಿಯು ಬಿ.ಎಸ್. ಶೇಷಾದ್ರಿ ಅವರಿಗೆ ನಿಗದಿತ ಸಮಯದಲ್ಲಿ ವಿಮಾ ಹಣವನ್ನು ನೀಡದಿದಕ್ಕಾಗಿ ರೂ. 15,000 ಗಳ ದಂಡ ಮತ್ತು ಪಕ್ವವಾದ ವಿಮಾ ಹಣಕ್ಕೆ ಶೇ. 9 ರಷ್ಟು ಬಡ್ಡಿ ಹಾಕಿ ರೂ. 46,225/- ಮತ್ತು ದಾವೆ ವೆಚ್ಚ ರೂ. 8,000/- ಗಳನ್ನು ಪಾವತಿಸಲು ವಿಮಾ ಕಂಪನಿಗೆ ಆದೇಶ ನೀಡಲಾಗಿದೆ. ವಕೀಲರಾದ ಬಿ.ಎನ್. ದತ್ತಾತ್ರೇಯ ಅವರು ದೂರುದಾರರ ಪರವಾಗಿ ವಾದ ಮಂಡನೆ ಮಾಡಿದರು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 14 ರಿಂದ 26 ರವರೆಗೆ ಪರವಾನಗಿ/ನೊಂದಣಿಯ ವಿಶೇಷ ಅಭಿಯಾನ

**ಮೈಸೂರು:** ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ನವೆಂಬರ್ 14 ರಿಂದ 26 ರವರೆಗೆ ಹಣ್ಣು ಮತ್ತು ತರಕಾರಿ ಮಾರಾಟಗಾರರಿಗೆ ಪರವಾನಗಿ/ನೊಂದಣಿಯ ವಿಶೇಷಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ. ನವೆಂಬರ್ 14 ರಂದು ಬೆಳಿಗ್ಗೆ 7 ಗಂಟೆಯಿಂದ 1 ಗಂಟೆಯವರೆಗೆ ಹಣ್ಣು ಮತ್ತು ತರಕಾರಿ ಮಾರಾಟಗಾರರಿಗೆ ಸಯ್ಯಾಜಿ ರಾವ್ ರಸ್ತೆಯ ಸಬ್-ಯಾರ್ಡ್ ಎಪಿಎಂಸಿಯಲ್ಲಿ ಹಾಗೂ ನವೆಂಬರ್ 16 ರಂದು ಬೆಳಿಗ್ಗೆ 7 ಗಂಟೆಯಿಂದ 1 ಗಂಟೆಯವರೆಗೆ ಹಣ್ಣು ಮತ್ತು ತರಕಾರಿ ಮಾರಾಟಗಾರರು ಮಾಲ್ ಆಫ್ ಮೈಸೂರು ಹತ್ತಿರದ ತರಕಾರಿ ಮಾರುಕಟ್ಟೆಯಲ್ಲಿ, ನವೆಂಬರ್ 21 ಮತ್ತು 22 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 12 ಗಂಟೆಯವರೆಗೆ ಹಾಪ್‌ಕಾಮ್ಸ್ ಮತ್ತು ಅಂಗಡಿ ಮಳಿಗೆಯಲ್ಲಿ ಹಣ್ಣು, ತರಕಾರಿ ಮಾರುವವರಿಗೆ ತಿಲಕ್ ನಗರದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರದ ಅಂಕಿತ ಅಧಿಕಾರಿಗಳ ಕಛೇರಿಯಲ್ಲಿ ಹಾಗೂ ನವೆಂಬರ್ 26 ರಂದು ಬೆಳಿಗ್ಗೆ 7 ಗಂಟೆಯಿಂದ 11 ಗಂಟೆಯವರೆಗೆ ಬೀದಿ ಬದಿ ಹಣ್ಣು ಮತ್ತು ತರಕಾರಿ ವ್ಯಾಪಾರಸ್ಥರಿಗೆ ಹೆಬ್ಬಾಳ್ ಮಾರುಕಟ್ಟೆಯಲ್ಲಿ ಪರವಾನಗಿ/ ನೊಂದಣಿಯನ್ನು ಮಾಡಿಸುವ ವಿಶೇಷ ಅಭಿಯಾನವನ್ನು ಹಮ್ಮಿಕೊಳ್ಳಲಾಗಿದೆ ಎಂದು ಮೈಸೂರು ಮಹಾನಗರ ಪಾಲಿಕೆ ವ್ಯಾಪ್ತಿಯ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಕಾಯ್ದೆಯ ಅಂಕಿತ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## 19 ರವರೆಗೆ ಉಚಿತ ಆರೋಗ್ಯ ಶಿಬಿರ

**ಮೈಸೂರು:** 7ನೇ ರಾಷ್ಟ್ರೀಯ ಪ್ರಕೃತಿ ಚಿಕಿತ್ಸಾ ದಿನಾಚರಣೆ ಪ್ರಯುಕ್ತ ಬೃಂದಾವನ ಬಡಾವಣೆಯಲ್ಲಿರುವ ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಬೋಧಕ ಆಸ್ಪತ್ರೆಯ ವತಿಯಿಂದ 'ಪ್ರಕೃತಿ ಚಿಕಿತ್ಸಾ ಸಪ್ತಾಹ' ದ ಅಂಗವಾಗಿ ನವೆಂಬರ್ 13 ರಿಂದ 19 ರವರೆಗೆ ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 1 ಗಂಟೆಯವರೆಗೆ ಏಳು ದಿನಗಳ ಉಚಿತ ಆರೋಗ್ಯ ಶಿಬಿರವನ್ನು ಏರ್ಪಡಿಸಲಾಗಿದ್ದು, ಸ್ಥೂಲಕಾಯ, ಅಧಿಕ ರಕ್ತದೊತ್ತಡ, ಮಧುಮೇಹ, ಅಸ್ಥಿ ಸಂಧಿವಾತ ವ್ಯಾದಿಗಳಿಗೆ ಪ್ರಕೃತಿ ಚಿಕಿತ್ಸೆ ಹಾಗೂ ಯೋಗ ಚಿಕಿತ್ಸಾ ಪದ್ಧತಿಗಳಿಂದ ಚಿಕಿತ್ಸೆಯನ್ನು ನೀಡಲಾಗುವುದು. ಸಾರ್ವಜನಿಕರು ಇದರ ಸದುಪಯೋಗವನ್ನು ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ಸಂಚಾಲಕರ ದೂ.ಸಂ: 9535415399, 0821-2512121 ಅಥವಾ 0821-2410120 ಅನ್ನು ಸಂಪರ್ಕಿಸಬಹುದು ಎಂದು ಎಂದು ಸರ್ಕಾರಿ ಪ್ರಕೃತಿ ಚಿಕಿತ್ಸೆ ಮತ್ತು ಯೋಗ ಬೋಧನಾ ಆಸ್ಪತ್ರೆಯ ಪ್ರಾಚಾರ್ಯರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮೈಸೂರು ಮಹಾನಗರ ಪಾಲಿಕೆ: ಉಚಿತ ಹೊಲಿಗೆ ಯಂತ್ರ, ಲ್ಯಾಪ್ ಟಾಪ್ ವಿತರಣೆ

**ಮೈಸೂರು:** ಮೈಸೂರು ಮಹಾನಗರ ಪಾಲಿಕೆಯ ವತಿಯಿಂದ 2023-24 ಹಾಗೂ 2024-25 ನೇ ಸಾಲಿನ ಶೇ.24.10 ಪರಿಶಿಷ್ಟಜಾತಿ/ಪಂಗಡ ಹಾಗೂ ಪೌರಕಾರ್ಮಿಕರ ಫಲಾನುಭವಿಗಳು, ಶೇ 7.25 ಇತರೆ ಹಿಂದುಳಿದ ಬಡಜನರಿಗೆ ಮತ್ತು ಶೇ.5 ರಷ್ಟು ವಿಶೇಷಚೇತನ ಅಭ್ಯರ್ಥಿಗಳಿಗೆ ಉಚಿತವಾಗಿ ಹೊಲಿಗೆ ಯಂತ್ರ, ಲ್ಯಾಪ್‌ಟಾಪ್,(ಬಿ.ಇ. ವಿದ್ಯಾರ್ಥಿಗಳಿಗೆ ಮಾತ್ರ) ವಿಶೇಷಚೇತನರಿಗೆ ಸ್ಕೂಟರ್ ಮತ್ತು ಸ್ಮಾರ್ಟ್ ವಾಕಿಂಗ್ ಸ್ಟಿಕ್ ಗಳನ್ನು ವಿತರಿಸಲಾಗುವುದು. ವಿಶೇಷವಾಗಿ ಕಲಾವಿದರಿಗೆ ಪ್ರೋತ್ಸಾಹಧನವನ್ನು ನೀಡಲಾಗುತ್ತಿದ್ದು, ಆಸಕ್ತರು ಮೈಸೂರು ಮಹಾನಗರ ಪಾಲಿಕೆಯ ವಲಯ ಕಛೇರಿಗಳಲ್ಲಿ ದೊರೆಯುವ ಅರ್ಜಿಗಳನ್ನು ಉಚಿತವಾಗಿ ಪಡೆದು ಸಲ್ಲಿಸಬಹುದು. ಸೌಲಭ್ಯಗಳಿಗೆ ಅನುಗುಣವಾಗಿ ಅಗತ್ಯ ದಾಖಲಾತಿಗಳನ್ನು ಮತ್ತು ಹೆಚ್ಚಿನ ಮಾಹಿತಿಗಾಗಿ ಮೈಸೂರು ಮಹಾನಗರ ಪಾಲಿಕೆಯ ಎಲ್ಲಾ 09 ವಲಯ ಕಛೇರಿಗಳನ್ನು ಸಂಪರ್ಕಿಸಬಹುದು ಎಂದು ಮೈಸೂರು ಮಹಾನಗರ ಪಾಲಿಕೆಯ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪುಸ್ತಕ ಪ್ರಶಸ್ತಿಗೆ ಅರ್ಜಿ ಆಹ್ವಾನ

**ಮೈಸೂರು:** ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ, ಬೆಂಗಳೂರು ಇವರ ವತಿಯಿಂದ 2023-24 ನೇ ಸಾಲಿನ ಪುಸ್ತಕ ಪ್ರಶಸ್ತಿಗಾಗಿ ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಪ್ರಶಸ್ತಿಗೆ ಬಂಜಾರ ಸಮುದಾಯದ ಲೇಖಕರು ಸ್ವತಃ ತಾವೇ ಬರೆದಿರುವ ಪ್ರಕಾರದಲ್ಲಿ ವರ್ಷದಲ್ಲಿ ಕನಿಷ್ಠ 03 ಶೀರ್ಷಿಕೆಗಳಾದರೂ ಪ್ರಕಟವಾಗಿದ್ದಲ್ಲಿ ಮಾತ್ರ ಬಹುಮಾನಕ್ಕೆ ಪರಿಗಣಿಸಲಾಗುವುದು. ಈ ಕೃತಿಗಳು 2022-23(ಪ್ರಸಕ್ತ ಸಾಲಿಗೆ ಮಾತ್ರ ಸೀಮಿತವಾಗಿ) ರ ಹಿಂದೆ ಮುದ್ರಣಗೊಂಡ ಕೃತಿಗಳು ಹಾಗೂ 2023-24 ರ ಸಾಲಿನಲ್ಲಿ ಪ್ರಕಟವಾಗಿರಬೇಕು.

ಬಂಜಾರ ಸಮುದಾಯದ ಸಂಸ್ಕೃತಿ, ಭಾಷೆ, ಸಾಹಿತ್ಯ, ಕಲೆಗಳು, ಕಲಾವಿದರು, ಸಾಂಸ್ಕೃತಿಕ ವೀರರು/ನಾಯಕರು ಹಾಗೂ ಸಾಧಕರು, ಈ ವಿಷಯಗಳಿಗೆ ಪೂರಕವಾಗಿರಬೇಕು. ಬಂಜಾರ ಸಮುದಾಯದ ಲೇಖಕರು ಸ್ವತಃ ತಾವೇ ಬರೆದಿರುವ ಸೃಜನಶೀಲ, ಜನಪರ ಬರಹಗಳಾದ ಕಥಾ ಸಂಕಲನ, ಕಾದಂಬರಿ, ಕವನ ಸಂಕಲನ, ಜೀವನ ಚರಿತ್ರೆ ಹಾಗೂ ಪ್ರಬಂಧ ಸಂಕಲನ ಕುರಿತ ಪುಸ್ತಕಗಳನ್ನೂ ಸಹ ಪ್ರಶಸ್ತಿಗಾಗಿ ಪರಿಗಣಿಸಲಾಗುತ್ತದೆ.

ಆಸಕ್ತರು ತಾವು ಪ್ರಕಟಿಸಿದ ಕೃತಿಯ 03 ಪ್ರತಿಗಳೊಂದಿಗೆ ಸ್ವ ವಿವರಗಳನ್ನು ಒಳಗೊಂಡ ಅರ್ಜಿಯನ್ನು ನವೆಂಬರ್ 30 ರೊಳಗಾಗಿ ಬೆಂಗಳೂರಿನ ಜೆ.ಸಿ ರಸ್ತೆಯಲ್ಲಿರುವ ಕನ್ನಡ ಭವನದ ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ರಿಜಿಸ್ಟ್ರಾರ್ ಅವರ ಕಚೇರಿಗೆ ಖುದ್ದಾಗಿ ಅಥವಾ ಅಂಚೆ, ಕೋರಿಯರ್ ಮೂಲಕ ಕಳುಹಿಸಿಕೊಡಬಹುದು. ಮಾಹಿತಿಗಾಗಿ ದೂ.ಸಂ: 080-29917745 ಅನ್ನು ಸಂಪರ್ಕಿಸಬಹುದು ಎಂದು ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿಯ ಅಧ್ಯಕ್ಷರು ತಿಳಿಸಿದ್ದಾರೆ.

# ಓಬವ್ವನ ಸಾಹಸ ಆದರ್ಶ



**ಚಿಕ್ಕಬಳ್ಳಾಪುರ:** ಒನಕೆ ಓಬವ್ವರ ಹೆಸರು ಕರ್ನಾಟಕದ ಇತಿಹಾಸದಲ್ಲಿ ಮರೆಯಲಾಗದ ಸಾಹಸ ಚರಿತ್ರೆ, ಅವರನ್ನು ಕರ್ನಾಟಕದ ವೀರ ವನಿತೆಯರಾದ ಕಿತ್ತೂರಿನ ರಾಣಿ ಚೆನ್ನಮ್ಮ, ರಾಣಿ ಅಬ್ಬಕ್ಕರ ಸಾಲಿನಲ್ಲಿ ಒಬ್ಬರೆಂದು ಪರಿಗಣಿಸಲಾಗಿದೆ. ಇವರ ಸಾಧನೆಯನ್ನು ಮುಂದಿನ ಪೀಳಿಗೆಗೆ ತಿಳಿಸಲು ಸರ್ಕಾರ ಓಬವ್ವನ ಜಯಂತಿಯನ್ನು ಆಚರಿಸುತ್ತಿದೆ ಎಂದು ಜಿಲ್ಲಾಧಿಕಾರಿ ಪಿ.ಎನ್. ರವೀಂದ್ರ ತಿಳಿಸಿದರು.

ಸೋಮವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವರ ಸಂಯುಕ್ತಾಶ್ರದಲ್ಲಿ ವೀರವನಿತೆ ಒನಕೆ ಓಬವ್ವ ಜಯಂತಿಯನ್ನು ನಗರದ ಡಾ. ಬಿ.ಆರ್ ಅಂಬೇಡ್ಕರ್ ಸರ್ಕಾರಿ ಪದವಿ ಬಾಲಕರ ವಿದ್ಯಾರ್ಥಿ ನಿಲಯದ ಆವರಣದಲ್ಲಿ ಡಾ. ಬಿ.ಆರ್. ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪ ನಮನ ಸಲ್ಲಿಸಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ವೀರವನಿತೆ ಒನಕೆ ಓಬವ್ವ ಅವರ ಶೌರ್ಯ, ಸಾಹಸ ಮತ್ತು ಸ್ಫೂರ್ತಿಯಾಗಿ ಸಮಾಜದ ಎಲ್ಲರಿಗೂ ಆದರ್ಶವಾಗಬೇಕು. ವೀರವನಿತೆ ಎಂಬ ಹೆಸರಿನಲ್ಲಿ ಸ್ಫೂರ್ತಿ ಮತ್ತು ಧೈರ್ಯ ಅಡಕವಾಗಿದೆ. ಸ್ವತಂತ್ರಕ್ಕಾಗಿ ಹೋರಾಟ ಮಾಡಿದಂತಹ ನಾಡಿನ ಕಣ್ಮಣಿಗಳಲ್ಲಿ ವೀರವನಿತೆ ಒನಕೆ ಓಬವ್ವ ಅವರಲ್ಲಿ ಒಬ್ಬರಾಗಿದ್ದಾರೆ. ಮಹಿಳೆಯರ ಮೇಲೆ ಆಗುವ ದೌರ್ಜನ್ಯವನ್ನು ತಡೆಯಲು ಪೊಲೀಸ್ ಇಲಾಖೆಯಲ್ಲಿ ವಿಶೇಷವಾಗಿ ಓಬವ್ವ ಪಡೆಯನ್ನು ರಚಿಸಲಾಗಿದೆ ಎಂದು ತಿಳಿಸಿದರು.

ಉಪನ್ಯಾಸಕ ಅರಿಕೆರೆ ಎಂ ಮುನಿರಾಜು ಅವರು ವೀರವನಿತೆ ಒನಕೆ ಓಬವ್ವ ಜಯಂತಿಯಲ್ಲಿ ವಿಶೇಷ ಉಪನ್ಯಾಸ ನೀಡಿ ಮಾತನಾಡಿ, ರಾಜನಿಷ್ಠೆ, ನಾಡಪ್ರೇಮ, ಸಮಯಪ್ರಜ್ಞೆ,ಅಪರಿಮಿತ ಧೈರ್ಯ,ಸಾಹಸ, ತ್ಯಾಗದ ಪ್ರತೀಕವಾಗಿ ಚರಿತ್ರೆಯಲ್ಲಿ ಓಬವ್ವ ಕಾಣಿಸಿಕೊಂಡಿದ್ದಾಳೆ. ಈಕೆಯ ಕಾಲ 1754 ರಿಂದ 1779 ಆಗಿದ್ದು ಹೈದರಾಲಿ ಕೋಟೆಯನ್ನು ವಶಮಾಡಿಕೊಳ್ಳಲು ಪದೇ ಪದೇ ದಾಳಿ ಮಾಡಲು ತೊಡಗುವ ಸಂದರ್ಭದಲ್ಲಿ ಆ ಸೈನ್ಯಕ್ಕೆ ತಕ್ಕ ಪಾಠಕಲಿಸುವ ಮೂಲಕ ಚರಿತ್ರೆಯಲ್ಲಿ ಅಳಿಗೂ ಸ್ಥಾನವಿದೆ ಎಂದು ತೋರಿಸಿಕೊಟ್ಟ ಧೀಮಂತ ವ್ಯಕ್ತಿತ್ವ ಓಬವ್ವನದಾಗಿದೆ ಎಂದರು.

5ನೇ ಮದಕರಿನಾಯಕನ ಆಡಳಿತದಲ್ಲಿ ಕೋಟೆಕಾವಲು ಕಾಯಕದ ಮುದ್ದಹನುಮಪ್ಪನ ಮಡದಿಯಾದ ಈ ವೀರವನಿತೆ ಓಬವ್ವ. ದುರ್ಗದ ಕೋಟೆಯಲ್ಲಿದ್ದ 35ಕ್ಕೂ ಹೆಚ್ಚು ಗುಪ್ತದ್ವಾರಗಳಿದ್ದು ಇವುಗಳನ್ನು ಕಾಯಲು ಕಹಳೆಯ ಕಾಯಕದ ಮೂಲಕ ಸೇವೆಸಲ್ಲಿಸುತ್ತಿದ್ದ ವಂಶದ ಸೊಸೆಯಾಗಿದ್ದಾಳೆ.ಇಂತಹ ಮಹತ್ವದ ಕಾಯಕದಲ್ಲಿದ್ದ ಓಬವ್ವನ ಕುಟುಂಬದ ಮೇಲೆ ವೀರಮದಕರಿಗೆ ಅಪಾರ ವಿಶ್ವಾಸ ಇತ್ತು. ಇದನ್ನು ಸಾಬೀತು ಪಡಿಸಿದ್ದೇ ಕಳ್ಳಗಿಂಡಿಯ ಪ್ರಸಂಗವಾಗಿದೆ ಎಂದರು.

ಈ ವೇಳೆಯಲ್ಲಿ ಸಮುದಾಯದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮಾಡಲಾಯಿತು ಹಾಗೂ ಸರ್ಕಾರಿ ಸೇವೆಯಿಂದ ನಿವೃತ್ತರಾಗಿರುವ ಜನಾಂಗದ ಅಧಿಕಾರಿಗಳಿಗೆ ಮತ್ತು ಸಮುದಾಯದ ಪ್ರಮುಖ ಮುಖಂಡರಿಗೆ ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್, ಮುಖ್ಯ ಕಾರ್ಯನಿರ್ವಹಣಾಧಿಕಾರಿ ಪ್ರಕಾಶ್ ಜಿ.ಟಿ ನಿಟ್ಟಾಲಿ, ಅಪರ ಜಿಲ್ಲಾಧಿಕಾರಿ ಡಾ. ಎನ್ ಭಾಸ್ಕರ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ರವಿ ಕುಮಾರ್, ನಗರ ಸಭೆ ಅಧ್ಯಕ್ಷ ಎ. ಗಜೇಂದ್ರ, ನಗರ ಸಭೆ ಉಪಾಧ್ಯಕ್ಷ ನಾಗರಾಜು, ಉಪವಿಭಾಗಾಧಿಕಾರಿ ಡಿ.ಎಚ್ ಅಶ್ವಿನ್, ತಹಶೀಲ್ದಾರ್ ಅನಿಲ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವೆಂಕಟೇಶ್ ರೆಡ್ಡಿ, , ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕ ಶೇಷಾದ್ರಿ, ಸಮುದಾಯದ ಮುಖಂಡರಾದ ಮಮತ ಮೂರ್ತಿ, ಛಲವಾದಿ ಜನಾಂಗದ ಸಮುದಾಯದ ಮುಖಂಡರು, ಪದಾಧಿಕಾರಿಗಳು ಹಾಗೂ ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಉಪಸ್ಥಿತರಿದ್ದರು.

# ಸಣ್ಣ ಮತ್ತು ಅತೀಸಣ್ಣ ಜವಳಿ ಘಟಕಗಳನ್ನು ಸ್ಥಾಪಿಸಲು ಅರ್ಜಿ ಆಹ್ವಾನ

**ಚಿಕ್ಕಬಳ್ಳಾಪುರ:** 2024-25ನೇ ಸಾಲಿನ ಎಸ್.ಎಂ.ಇ ಯೋಜನೆಯಡಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ವೈಯಕ್ತಿಕ ಫಲಾನುಭವಿ, ಪಾಲುದಾರಿಕೆ ಸಂಸ್ಥೆ, ಕಂಪನಿ, ಜವಳಿ ಸಹಕಾರಿ ಸಂಘ, ಸಂಸ್ಥೆಗಳು ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತೀಸಣ್ಣ (ಎಸ್.ಎಂ.ಇ) ಘಟಕಗಳನ್ನು ಪ್ರಾರಂಭಿಸುವುದನ್ನು ಉತ್ತೇಜಿಸಲು ಯಂತ್ರೋಪಕರಣಗಳೊಂದಿಗೆ ಸ್ಥಾಪಿಸುವ ಜವಳಿ ಘಟಕಗಳಿಗೆ ಸರ್ಕಾರದಿಂದ ಶೇ.75 ರಷ್ಟು ಹೂಡಿಕೆ ಸಹಾಯಧನ ಹಾಗು ವಾರ್ಷಿಕ ಶೇಕಡ 5 ರಷ್ಟು ಬಡ್ಡಿ ಸಹಾಯಧನ ಒದಗಿಸುವ ಯೋಜನೆಯನ್ನು ಕೈಮಗ್ಗ ಮತ್ತು ಜವಳಿ ಇಲಾಖೆಯಿಂದ ಅನುಷ್ಠಾನಗೊಳಿಸಲಾಗುತ್ತಿದೆ. ಈ ಯೋಜನೆಯಡಿ ಚಿಕ್ಕಬಳ್ಳಾಪುರ ಜಿಲ್ಲೆಗೆ 2024-25ನೇ ಸಾಲಿಗೆ ವಿಶೇಷ ಘಟಕ ಯೋಜನೆಯಡಿ ಭೌತಿಕ 3 ಹಾಗೂ ಗಿರಿಜನ ಉಪ ಯೋಜನೆಯಡಿ ಭೌತಿಕ 1 ಹೀಗೆ ಒಟ್ಟು 4 ಭೌತಿಕ ಗುರಿಯನ್ನು ನಿಗದಿಪಡಿಸಲಾಗಿದ್ದು ಪರಿಶಿಷ್ಟ ಜಾತಿ ಪರಿಶಿಷ್ಟ ಪಂಗಡಕ್ಕೆ ಸೇರಿದ ವೈಯಕ್ತಿಕ ಫಲಾನುಭವಿ, ಪಾಲುದಾರಿಕೆ ಸಂಸ್ಥೆ, ಕಂಪನಿ, ಜವಳಿ ಸಹಕಾರಿ ಸಂಘ, ಸಂಸ್ಥೆಯ ವತಿಯಿಂದ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದ ಸಣ್ಣ ಮತ್ತು ಅತೀಸಣ್ಣ (ಎಸ್.ಎಂ.ಇ) ಘಟಕಗಳನ್ನು ಸ್ಥಾಪಿಸಲು ಆಸಕ್ತ ಉದ್ದಿಮೆದಾರರಿಂದ ಪೂರ್ಣ ಪ್ರಮಾಣದ ದಾಖಲಾತಿಗಳೊಂದಿಗೆ ಪ್ರಸ್ತಾವನೆಗಳನ್ನು ಡಿಸೆಂಬರ್ 16 ರ ಒಳಗಾಗಿ ಉಪ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ: ಎಸ್.ಎ-14, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿಗೆ ಸಲ್ಲಿಸಲು ತಿಳಿಸಿದೆ,

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕರ ಕಚೇರಿ, ಕೈಮಗ್ಗ ಮತ್ತು ಜವಳಿ ಇಲಾಖೆ, ಕೊಠಡಿ ಸಂಖ್ಯೆ: ಎಸ್.ಎ-14, ಎರಡನೇ ಮಹಡಿ, ಜಿಲ್ಲಾಡಳಿತ ಭವನ, ಚಿಕ್ಕಬಳ್ಳಾಪುರ ಇಲ್ಲಿ ಕಚೇರಿ ವೇಳೆಯಲ್ಲಿ ಸಂಪರ್ಕಿಸಿ ಮಾಹಿತಿ ಪಡೆಯಲು ಅಥವಾ ಕಚೇರಿಯ ದೂರವಾಣಿ ಸಂಖ್ಯೆ: 08156-277031 ಗೆ ಸಂಪರ್ಕಿಸಬಹುದು ಎಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಜಿಲ್ಲಾ ಮಟ್ಟದ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳ ಆಯೋಜನೆ

**ಮೈಸೂರು:** 2024-25 ನೇ ಸಾಲಿನಲ್ಲಿ ತಾಲ್ಲೂಕು ಮಟ್ಟದಲ್ಲಿ ಪ್ರಥಮ ಸ್ಥಾನ ಪಡೆದ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ಜಿಲ್ಲಾ ಮಟ್ಟದ ಶಿಕ್ಷಕರ ಸಹಪಠ್ಯ ಚಟುವಟಿಕೆಗಳ ಸ್ಪರ್ಧೆಗಳನ್ನು ನವೆಂಬರ್ 12 ರಂದು ಬೆಳಿಗ್ಗೆ 10 ಗಂಟೆಗೆ ಸರಸ್ವತಿಪುರಂನಲ್ಲಿರುವ ಜೆ.ಎಸ್.ಎಸ್. ಬಾಲಕಿಯರ ಪ್ರೌಢಶಾಲೆ ಆಯೋಜಿಸಲಾಗಿದೆ. ಶಿಕ್ಷಕರು ಭಾವಗೀತೆ, ಆಶುಭಾಷಣ (ಕನ್ನಡ ಮಾಧ್ಯಮದಲ್ಲಿ), ಪ್ರಬಂಧ (ಕನ್ನಡ ಮಾಧ್ಯಮದಲ್ಲಿ), ಸ್ಥಳದಲ್ಲೇ ಪಾಠೋಪಕರಣಗಳ ತಯಾರಿಕೆ ಸ್ಪರ್ಧೆ (ಖಿಐಒ), ಸ್ಥಳದಲ್ಲೇ ಚಿತ್ರ ಬರೆಯುವ ಸ್ಪರ್ಧೆ, ರಸಪ್ರಶ್ನೆ (ಸಾಮಾನ್ಯ ಜ್ಞಾನ) ಮತ್ತು ರಸಪ್ರಶ್ನೆ (ವಿಜ್ಞಾನ) ಸ್ಪರ್ಧೆಗಳಲ್ಲಿ ಭಾಗವಹಿಸಬಹುದಾಗಿದ್ದು, ಸದರಿ ವಿಜೇತ ಶಿಕ್ಷಕರು ಅಂದು ಬೆಳಿಗ್ಗೆ 10 ಗಂಟೆಗೆ ನಿಗಧಿತ ಶಾಲೆಯಲ್ಲಿ ಹಾಜರಾಗಿ ನೋಂದಣಿ ಮಾಡಿಕೊಳ್ಳಬೇಕು ಎಂದು ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರು(ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ವಿಶ್ವ ಪರಂಪರೆ ಸಪ್ತಾಹ: ವಿವಿಧ ಸ್ಪರ್ಧೆ ಆಯೋಜನೆ

**ಮೈಸೂರು:** ವಿಶ್ವ ಪರಂಪರೆ ಸಪ್ತಾಹದ ಅಂಗವಾಗಿ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ಹಾಗೂ ಮೈಸೂರು ಸ್ಕೂಲ್ ಆಫ್ ಆರ್ಕಿಟೆಕ್ಚರ್ (ಒಖಂ) ವಿದ್ಯಾಸಂಸ್ಥೆಯ ಸಹಯೋಗದೊಂದಿಗೆ ನವೆಂಬರ್ 19 ರಿಂದ 25 ರವರೆಗೆ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ವಿವಿಧ ಸ್ಪರ್ಧೆಗಳನ್ನು ಹಾಗೂ ವಸ್ತುಪ್ರದರ್ಶನವನ್ನು ಆಯೋಜಿಸಲಾಗಿದೆ. ನೈಸರ್ಗಿಕ ಪರಂಪರೆ, ಪಾರಂಪರಿಕ ಸ್ಮಾರಕ ಹಾಗೂ ಪಾರಂಪರಿಕ ಕಲೆ ಎಂಬುದು ಸ್ಪರ್ಧೆಯ ವಿ?ಯಗಳಾಗಿದ್ದು, ಕರ್ನಾಟಕ ವಸ್ತುಪ್ರದರ್ಶನ ಪ್ರಾಧಿಕಾರದ ಆವರಣದಲ್ಲಿರುವ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಲ್ಲಿ ಕಾರ್ಯಕ್ರಮ ನಡೆಯಲಿದೆ.

ನವೆಂಬರ್ 22 ರಂದು ಪಿ.ಯು.ಸಿ. ಹಾಗೂ ನವೆಂಬರ್ 23 ರಂದು 8 ನೇ ತರಗತಿಯಿಂದ 10ನೇ ತರಗತಿ ವಿದ್ಯಾರ್ಥಿಗಳಿಗೆ ಬೆಳಗ್ಗೆ 9 ಗಂಟೆಗೆ ನೊಂದಣಿ ನಡೆಯಲಿದ್ದು, ಬೆಳಗ್ಗೆ 9:45 ರಿಂದ 11 ಗಂಟೆಯವರೆಗೆ ಚಿತ್ರಕಲೆ, ಬೆಳಗ್ಗೆ 11:30 ರಿಂದ ಮಧ್ಯಾಹ್ನ 12:30 ರವರೆಗೆ ಸ್ಕೆಚಿಂಗ್ (ರೇಖಾ ಚಿತ್ರ), ಕನ್ನಡ ಹಾಗೂ ಇಂಗ್ಲೀಷ್ ಭಾಷೆಯಲ್ಲಿ ರಸಪ್ರಶ್ನೆಯಲ್ಲಿ ಮೊದಲ ಸುತ್ತು (ಬರವಣಿಗೆ) ಬೆಳಗ್ಗೆ 10:30 ರಿಂದ 11:30 ರವರೆಗೆ, ಕೊನೆಯ ಸುತ್ತು (ಮೌಖಿಕ) ಮಧ್ಯಾಹ್ನ 12:15 ರಿಂದ 1:30 ರವರೆಗೆ ನಡೆಯಲಿದೆ. ಛಾಯಾಗ್ರಹಣ ಸ್ಪರ್ಧೆಯಲ್ಲಿ ನವೆಂಬರ್ 22 ರ 11:59 ರಾತ್ರಿಯವರಿಗೆ ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಬಹುದು. ಇಮೇಲ್ ವಿಳಾಸ social@msa.edu.in ವಿದ್ಯಾರ್ಥಿಗಳು ಶೀರ್ಷಿಕೆ, ಕ್ಯಾಮೆರಾ / ಮೊಬೈಲ್, ಫೋಟೋದ ದಿನಾಂಕ, ಶೂಟಿಂಗ್ ಮೋಡ್, ಶಟರ್ ವೇಗ, ಅಪೆರ್ಚುರ್ ವ್ಯಾಲ್ಯೂ, ಫೋಕಲ್ ಲೆಂತ್, ISOವೇಗ, ಫ್ಲ್ಯಾಶ್‌ನ ಸ್ವರೂಪ ಡೇಟಾವನ್ನು ಸಲ್ಲಿಸಬೇಕು. ಸಾಫ್ಟ್‌ಕಾಪಿ ಫಾರ್ಮ್ಯಾಟ್ ಗರಿಷ್ಠ ಗಾತ್ರ 10MB ಮತ್ತು 150 dpi ಅಥವಾ ಹೆಚ್ಚಿನ ರೆಸಲ್ಯೂಶನ್ ಹೊಂದಿರುವ JPEG ಫಾರ್ಮ್ಯಾಟ್ ಹೊಂದಿರಬೇಕು.

ಭಾಗವಹಿಸುವ ವಿದ್ಯಾರ್ಥಿಗಳು ಹಾಗೂ ಶಿಕ್ಷಕ ವೃಂದದವರು ತಮ್ಮ ಹೆಸರು, ವಿಳಾಸ ಹಾಗೂ ದೂರವಾಣಿ ಸಂಖ್ಯೆಗಳನ್ನು ವೆಬ್‌ಸೈಟ್ www.msa.edu.in ಮೂಲಕ ಅಥವಾ ಮುರಳೀಧರ್ ಕಾಳಾಚಾರ್ ಅವರ ದೂ.ಸಂ: 9113870169 ಸಂಖ್ಯೆಗೆ ಕರೆ ಮಾಡಿ ನೋಂದಾಯಿಸಿ ಕೊಳ್ಳಬಹುದು.

ನವೆಂಬರ್ 25 ರಂದು ಬೆಳಗ್ಗೆ 10:30 ಗಂಟೆಗೆ ಕರ್ನಾಟಕ ವಸ್ತು ಪ್ರದರ್ಶನ ಪ್ರಾಧಿಕಾರ ಆವರಣದ ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯಲ್ಲಿ ವಿವಿಧ ಸ್ಪರ್ಧೆಗಳಲ್ಲಿ ವಿಜೇತರಾದವರಿಗೆ ಬಹುಮಾನ ವಿತರಿಸಲಾಗುವುದು. ಹೆಚ್ಚಿನ ಮಾಹಿತಿಗಾಗಿ ಕಛೇರಿ ದೂ.ಸಂ: 0821-2424671 ಹಾಗೂ ಉಪ ನಿರ್ದೇಶಕರಾದ (ಪರಂಪರೆ) ಡಾ.ಸಿ.ಎನ್.ಮಂಜುಳಾ ಅವರ ಮೊ: 83102 50733 ಮತ್ತು ಪ್ರಥಮ ದರ್ಜೆ ಸಹಾಯಕರಾದ ಶಶಿಧರ.ಎಸ್ ಅವರ ಮೊ. ಸಂ: 7349057976 ಅನ್ನು ಸಂಪರ್ಕಿಸಬಹುದು ಎಂದು ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಪರ ಜಿಲ್ಲಾಧಿಕಾರಿ ಡಾ ಹೆಚ್‌ಎಲ್ ನಾಗರಾಜು ಸಲಹೆ

# ಒನಕೆ ಓಬವ್ವನ ಆದರ್ಶ ಮೈಗೂಡಿಸಿಕೊಳ್ಳಬೇಕು

**ಮಂಡ್ಯ:** ಪ್ರತಿಯೊಬ್ಬ ಹೆಣ್ಣುಮಕ್ಕಳು ಕೂಡ ವೀರ ವನಿತೆ ಒನಕೆ ಓಬವ್ವನ ಆದರ್ಶಗಳನ್ನು ತಮ್ಮಜೀವನದಲ್ಲಿ ಮೈಗೂಡಿಸಿಕೊಂಡು ಅವರಂತೆಧೈರ್ಯಶಾಲಿಯಾಗಿ ಬದುಕಬೇಕು ಎಂದು ಅಪರ ಜಿಲ್ಲಾಧಿಕಾರಿ ಡಾ ಹೆಚ್‌ಎಲ್ ನಾಗರಾಜು ತಿಳಿಸಿದರು.

ಮಂಡ್ಯ ಸರ್ಕಾರಿ ಮಹಿಳಾ ಕಾಲೇಜಿನಲ್ಲಿ ನಡೆದ ಮಂಡ್ಯ ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಇವರುಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಳ್ಳಲಾಗಿದ್ದ ವೀರವನಿತೆ ಒನಕೆ ಓಬವ್ವಜಯಂತಿಕಾರ್ಯಕ್ರಮವನ್ನು ಉದ್ಘಾಟಿಸಿ, ಒನಕೆ ಓಬವ್ವ ಭಾವಚಿತ್ರಕ್ಕೆ ಪು?ಪಾರ್ಚನೆ ನೆರವೇರಿಸಿ ಮಾತನಾಡಿದರು.

18 ನೇ ಶತಮಾನದಲ್ಲಿಒಬ್ಬ ಪ್ರಸಿದ್ಧ ಮಹಿಳೆಯಾಗಿ ಕನ್ನಡ ನಾಡಿನ ಸ್ವಾಭಿಮಾನವನ್ನುಎತ್ತಿಹಿಡಿದ ವೀರವನಿತೆ ಒನಕೆ ಓಬವ್ವನಜಯಂತಿ ಯನ್ನುಇಂದುಇಡೀರಾಜ್ಯಾದ್ಯಂತಆಚರಿಸಲಾಗುತ್ತಿದೆ. ಸರ್ಕಾರವು ನಾಡಿಗೆಕೊಡುಗೆ ನೀಡಿದ ಅನೇಕ ಮಹಾನೀಯರ ಜಯಂತಿಗಳನ್ನು ಆಚರಿಸುತ್ತಿದ್ದು, ಇತಿಹಾಸವನ್ನುಯಾರುಕೂಡ ಮರೆಯಬಾರದುಎಂ ಬುದುಇದರಉದ್ದೇಶವಾಗಿದೆಎಂದರು.

ಅಂದಿನ ಕಾಲದಲ್ಲಿಚಿತ್ರದುರ್ಗದ ಮದಕರಿ ನಾಯಕ ಆಳ್ವಿಕೆ ನಡೆಸುತ್ತಿದ್ದಕೋಟೆಯನ್ನು ಹೈದರಾಲಿ ಸೈನ್ಯ ಸುತ್ತುವರೆದುಆಕ್ರಮಣ ಮಾಡುವ ಸಂದರ್ಭದಲ್ಲಿ ವೈರಿಗಳನ್ನು ಧೈರ್ಯದಿಂದ ಮೆಟ್ಟಿನಿಂತವರು ಒನಕೆ ಓಬವ್ವನವರು.ಓಬವ್ವ ಮದಕರಿ ನಾಯಕನಕೋಟೆಯಕಾವಲು ಗಾರನಾಗಿದ್ದ ಕಹಳೆ ಮದ್ದ ಹನುಮಪ್ಪನ ಪತ್ನಿಯಾಗಿದ್ದು, ಶತ್ರುಗಳನ್ನು ಸದೆಬಡಿಯಲುತನ್ನ ಪ್ರಾಣವನ್ನು ಲೆಕ್ಕಿಸದೆ ಹೋರಾಡಿತನ್ನಧೈರ್ಯ ಹಾಗೂ ರಾಜ ನಿ?ೆಯನ್ನು ಮೆರೆದರು.ಈಕೆಯುಯಾವುದೇ



ವಿದ್ಯಾಭ್ಯಾಸವನ್ನಾಗಲಿ ಅಥವಾಯಾವುದೇ ಹುದ್ದೆಯನ್ನು ಪಡೆದವಳಲ್ಲ. ಆದರೂತನ್ನ ಪತಿಯಕರ್ತವ್ಯವನ್ನುತನ್ನದೆಂದು ಭಾವಿಸಿ ವಿರಾವೇಶದಿಂದ ಶತ್ರು ನಾಶ ಮಾಡಿದಆಕೆಯ ಸಾಧನೆಯನ್ನುಎಲ್ಲರೂ ಮೆಚ್ಚುವಂತದ್ದುಎಂದರು.

ತದನಂತರ ಬೆಂಗಳೂರು ಶ್ರೀ ಶಾರದ ಪ್ರಥಮದರ್ಜೆಕಾಲೇಜಿನ ಪ್ರಾಂಶುಪಾಲರಾದಡಾ ಟಿ ಬಿ ಅನುಸೂಯ ಹೊಂಬಾಳೆ ಅವರು ಮಾತನಾಡಿಚೆನ್ನಪ್ಪ ಹಾಗೂ ಚೆನ್ನಮ್ಮ ಎಂಬ ದಂಪತಿಗಳಿಗೆ ಸಾಮಾನ್ಯ ಹೆಣ್ಣು ಮಗಳಾಗಿ ಜನಿಸಿದ ಓಬವ್ವಇಂದುಚರಿತ್ರೆಯಲ್ಲಿ ಹೆಸರಾಗಿದ್ದಾಳೆ. ಮದಕರಿ ನಾಯಕನಕಾಲಘಟ್ಟದಲ್ಲಿ ಕಹಳೆ ಕಾವಲುಗಾರನಾಗಿದ್ದ ಹನುಮಪ್ಪನ ಮಗ ಮದ್ದ ಹನುಮಪ್ಪನ ಪತ್ನಿಯಾಗಿ ಮದಕರಿ ನಾಯಕನಕೋಟೆಗೆ ನುಸುಳುತ್ತಿದ್ದ ಹೈದರಾಲಿ ಸೈನ್ಯವನ್ನುತನ್ನ ಮನೆಯಲ್ಲಿದ್ದಒನಕೆಯನ್ನುಅಸ್ತ್ರವಾಗಿ ಉಪಯೋಗಿಸಿ ಶತ್ರುಗಳ ರುಂಡವನ್ನುಚೆಂಡಾಡಿದ ಈಕೆ ತನ್ನಧೈರ್ಯ, ಸಮಯ ಪ್ರಜ್ಞೆ, ಕರ್ತವ್ಯ ನಿಷ್ಠೆ ಹಾಗೂ ಬದ್ಧತೆಯನ್ನು ಮೆರದು ವೀರ ವನಿತೆ ಒನಕೆ ಓಬವ್ವಎಂದು ಹೆಸರಗಿದ್ದಾಳೆ ಎಂದರು.

'ಯಾರು ಹುಟ್ಟಿನಿಂದ ಮಹಾತ್ಮರಾಗಿರುವುದಿಲ್ಲ. ಯಾವ ಸಾಮಾನ್ಯ ಮನುಷ್ಯನು ' ಮಹಾತ್ಮರಾಗಬಹುದು.ಆದರೆ ಆ ಚೇತನಕ್ಕೆಒಂದುಕಿಡಿತಾಗಬೇಕು.ಒಂದುರಸ ಸೋಕಬೇಕು. ಕಿಡಿತಾಕಿರಸ ಸೋಕಿದಾಗಎಲ್ಲರೂ ಮಹಾತ್ಮರಾಗಬಹುದು' ಎಂಬ ಕುವೆಂಪುರವರ ಮಾತಿನಂತೆ ಓಬವ್ವನಂತಹಕಿಡಿತಾಕಿಧೈರ್ಯ, ಶೌರ್ಯವೆಂಬ ರಸ ಸೋಕಿದಾಗಎಲ್ಲರೂ ಮಹಾತ್ಮರಾಗುವರು. ಆದರೆ ಇಂದಿನ ಹೆಣ್ಣುಮಕ್ಕಳು ಒಂದು ಜಿರಳೆಯನ್ನು ಎದುರಿಸಲು ಮನೆಯವರ ಸಹಾಯ ಪಡೆಯುತ್ತೀರ.ಆದರೆ ಅಂದಿನ ಕಾಲದಲ್ಲಿಯೇ ಓಬವ್ವಒಬ್ಬಂಟಿಯಾಗಿ ಶತ್ರುಗಳ ವಿರುದ್ಧ ಹೋರಾಡಿಚರಿತ್ರೆಯಲ್ಲಿಚಿರಸ್ಥಾಯಿಯಾಗಿ ಉಳಿದಿದ್ದಾರೆ.ಪ್ರತಿ ಹೆಣ್ಣುಕೂಡಯಾವುದೇ ಸಮಸ್ಯೆಗಳನ್ನು ದಿಟ್ಟತನದಿಂದಎದ 'ರಿಸಬೇಕುಎಂದರು. ಕನ್ನಡ ಮತ್ತು ಸಂಸ್ಕೃತಿಇಲಾಖೆಯ ಸಹಾಯಕ ನಿರ್ದೇಶಕಡಾ ಬಿ ವಿ ನಂದೀಶ್, ಮಹಿಳಾ ಸರ್ಕಾರಿಕಾಲೇಜಿನಇತಿಹಾಸ ವಿಭಾಗದ ಪ್ರಾಧ್ಯಪಕರು ಡಾ.ಕೃಷ್ಣೇಗೌಡ, ಕರ್ನಾಟಕಜಾನಪದ ಪರಿಷತ್ ನ ಅಧ್ಯಕ್ಷಕೀಲಾರಕೃಷ್ಣೆಗೌಡ, ಕನ್ನಡ ಸಾಹಿತ್ಯ ಪರಿ?ತ್ ನ ನಗರಘಟಕಅಧ್ಯಕ್ಷೆ ಸುಜಾತ ಕೃಷ್ಣ, ಜೈಕರ್ನಾಟಕ ಪರಿಷತ್ ನ ಮುಖ್ಯ ಸಂಚಾಲಕ ನಾರಾಯಣ್, ಅನುಪಮಾ ಉಪಸ್ಥಿತರಿದ್ದರು.

ಸಂಜೆ ಟಿಪ್ಸ್

## ಬ್ಲೂ ಡಾರ್ಟ್ ಎರಡನೇ ತ್ರೈಮಾಸಿಕ ಫಲಿತಾಂಶ ಪ್ರಕಟ

ದಕ್ಷಿಣ ಏಷ್ಯಾದ ಪ್ರೀಮಿಯರ್ ಎಕ್ಸ್‌ಪ್ರೆಸ್ ಏರ್, ಇಂಟಿಗ್ರೇಟೆಡ್ ಟ್ರಾನ್ಸ್ಪೋರ್ಟೇಶನ್ ಮತ್ತು ಡಿಸ್ಟ್ರಿಬ್ಯೂಷನ್ ಲಾಜಿಸ್ಟಿಕ್ಸ್ ಕಂಪನಿಯಾದ ಬ್ಲೂ ಡಾರ್ಟ್ ಎಕ್ಸ್‌ಪ್ರೆಸ್ ಲಿಮಿಟೆಡ್, ಸೆಪ್ಟೆಂಬರ್ 30, 2024 ರಂದು ಕೊನೆಗೊಂಡ ತ್ರೈಮಾಸಿಕದ ಆರ್ಥಿಕ ಫಲಿತಾಂಶಗಳನ್ನು ಇಂದು ನಡೆದ ತನ್ನ ಆಡಳಿತ ಮಂಡಳಿ ಸಭೆಯಲ್ಲಿ ಘೋಷಿಸಿತು. ಸೆಪ್ಟೆಂಬರ್ 30, 2024 ರಂದು ಕೊನೆಗೊಂಡ ತ್ರೈಮಾಸಿಕದಲ್ಲಿ ಕಂಪನಿಯು ?60.76 ಕೋಟಿ ತೆರಿಗೆ ನಂತರದ ಲಾಭವನ್ನು ಗಳಿಸಿದೆ. ಅದೇ ಅವಧಿಯಲ್ಲಿ ಕಾರ್ಯಾಚರಣೆಯಿಂದ ಬಂದ ಆದಾಯವು 1,448.46 ಕೋಟಿ ಆಗಿದೆ. ಬ್ಲೂ ಡಾರ್ಟ್ನ ಅಸಾಧಾರಣ ಸೇವಾ ಗುಣಮಟ್ಟ, ಸುಧಾರಿತ ಆಟೋಮೇಶನ್ ಮತ್ತು ತಂತ್ರಜ್ಞಾನವು ಕಾರ್ಯಾಚರಣೆಗಳಿಗೆ ಮೂಲಾಧಾರವಾಗಿದೆ. ಗ್ರಾಹಕರಿಗೆ ಅವರ ಎಲ್ಲಾ ಸಾರಿಗೆ ಅಗತ್ಯಗಳಿಗಾಗಿ ಸರಳ, ಒಂದೇ ಕಡೆ ಎಲ್ಲ ಪರಿಹಾರವನ್ನೂ ಒದಗಿಸುವ ತಾಣವಾಗಿದೆ. ಕಂಪನಿಯ ಕಾರ್ಯಕ್ಷಮತೆಯ ಬಗ್ಗೆ ಬ್ಲೂ ಡಾರ್ಟ್ ಎಕ್ಸ್‌ಪ್ರೆಸ್ ಲಿಮಿಟೆಡ್ನ ಮ್ಯಾನೇಜಿಂಗ್ ಡೈರೆಕ್ಟರ್ ವ್ಯವಸ್ಥಾಪಕ ನಿರ್ದೇಶಕ ಬಾಲ್ಫರ್ ಮ್ಯಾನುಯೆಲ್ ಮಾತನಾಡಿ, 'ಈ ತ್ರೈಮಾಸಿಕದಲ್ಲಿ, ನಾವು ವಾರ್ಷಿಕ ಉತ್ತಮ ಆದಾಯದ ಬೆಳವಣಿಗೆಯನ್ನು ಸಾಧಿಸಿದ್ದೇವೆ. ಸ್ಥಾಪಿತ ಮತ್ತು ಬೆಳೆಯುತ್ತಿರುವ ವಲಯಗಳಲ್ಲಿ ನಮ್ಮ ಕಾರ್ಯಕ್ಷಮತೆ ಬಲವಾಗಿದೆ ಎಂಬುದು ಇದರಿಂದ ತಿಳಿದುಬಂದಿದೆ. ನಮ್ಮ ಗಳಿಕೆ ಹೆಚ್ಚಾಗಿದ್ದರಿಂದ ನಮ್ಮ ಸರ್ವೀಸ್ ಅನ್ನು ಸುಧಾರಿಸಲು ಮತ್ತು ನಮ್ಮ ಗ್ರಾಹಕರ ಬದಲಾಗುತ್ತಿರುವ ಅಗತ್ಯಗಳನ್ನು ಪೂರೈಸಲು ಸಹಾಯ ಮಾಡುತ್ತದೆ. ಅಲ್ಲದೆ, ಹೊಸ ವಿಮಾನಗಳ ನಿಯೋಜನೆ ಸೇರಿದಂತೆ ನಮ್ಮ ನೆಟ್ವರ್ಕ್ ಅನ್ನು ವಿಸ್ತರಿಸುವಲ್ಲಿ ಪ್ರಮುಖ ಕಾರ್ಯತಂತ್ರವಾಗಿ ಹೂಡಿಕೆ ಮಾಡಲು ನಮಗೆ ಅನುವು ಮಾಡಿಕೊಡುತ್ತದೆ. ಇದರ ನಂತರದಲ್ಲಿ, ನಾವು ಃ2ಃ ಮತ್ತು ಇ-ಕಾಮರ್ಸ್ ವಿತರಣೆಗಾಗಿ ಕೇಂದ್ರಗಳನ್ನು ಅಭಿವೃದ್ಧಿಪಡಿಸುವಲ್ಲಿ ಹೂಡಿಕೆ ಮಾಡುತ್ತಿದ್ದೇವೆ. ಈ ಹೂಡಿಕೆಗಳನ್ನು ನಮ್ಮ ಸಂಪೂರ್ಣ ನೆಟ್ವರ್ಕ್ನಾದ್ಯಂತ ವ್ಯಾಪ್ತಿ ಹೆಚ್ಚಳ, ನಮ್ಯತೆ, ನಿಖರತೆ ಮತ್ತು ವೇಗವನ್ನು ಹೆಚ್ಚಿಸಲು ವಿನ್ಯಾಸಗೊಳಿಸಲಾಗಿದ್ದು, ವಿಶಿಷ್ಟ ಮತ್ತು ನವೀನ ಸಂಸ್ಥೆಯಾಗುವ ಮೂಲಕ, ಎದುರಾಗುವ ಅವಕಾಶಗಳನ್ನು ವಶಪಡಿಸಿಕೊಳ್ಳಲು ಮತ್ತು ನಮ್ಮ ಗ್ರಾಹಕರಿಗೆ ಇನ್ನೂ ಹೆಚ್ಚಿನ ಮೌಲ್ಯವನ್ನು ನೀಡಲು ನಾವು ಉತ್ತಮ ಸ್ಥಾನವನ್ನು ಹೊಂದಿದ್ದೇವೆ.ಆದ್ಯತೆಯ ಪೂರೈಕೆದಾರರಾಗಿ ತನ್ನ ಖ್ಯಾತಿಯನ್ನು ಕಾಯ್ದುಕೊಳ್ಳುವುದರ ಜೊತೆಗೆ ಭವಿಷ್ಯದ ನಿರೀಕ್ಷೆಗಳನ್ನು ಲಾಭವಾಗಿ ಪರಿವರ್ತಿಸಲು ಕಂಪನಿ ಧನಾತ್ಮಕ ದೃಷ್ಟಿಕೋನವನ್ನು ಹೊಂದಿದೆ.

## ಟೊಮೆಟೊ ಸಾಸ್

### ಪಾಕ ಶಾಲೆ



### ಬೇಕಿರುವ ಸಾಮಗ್ರಿ

ಒಂದು ಕಿಲೋ ಟೊಮೆಟೊ, 5-6 ಲವಂಗ, ಒಂದು ದಾಲ್ಚಿನ್ನಿ, ಒಂದು ಬೇ ಎಲೆ, 1/2 ತುರಿಯಾಗಿ ರುಬ್ಬಿರುವ ಒಣಮೆಣಸಿನಕಾಯಿ, 1/2 ಬೌಲ್ ಕತ್ತರಿಸಿದ ಈರುಳ್ಳಿ, ಒಂದು ಚಮಚ ಕತ್ತರಿಸಿದ ಶುಂಠಿ, ಒಂದು ಚಮಚ ಕತ್ತರಿಸಿದ ಬೆಳ್ಳುಳ್ಳಿ, ಒಂದು ಚಮಚ ಕಾಶ್ಮೀರಿ ಕೆಂಪು ಮೆಣಸಿನಕಾಯಿ, ಒಂದು ಬೌಲ್ ಸಕ್ಕರೆ, ಉಪ್ಪು ಟೀಚಮಚ

### ಮಾಡುವ ವಿಧಾನ

ಮೊದಲು ಟೊಮೆಟೊವನ್ನು ಕತ್ತರಿಸಿ ಕುಕ್ಕರ್ನಲ್ಲಿ ಹಾಕಿ. ಈಗ ನೀವು ಮಸಾಲೆಗಳ ಬಂಡಲ್ ಮಾಡಬೇಕು. ಒಂದು ಬಟ್ಟೆಯನ್ನು ತೆಗೆದುಕೊಂಡು ಅದರಲ್ಲಿ ಲವಂಗ, ದಾಲ್ಚಿನ್ನಿ, ಚೀಸ್ ಫ್ಲೇಕ್ಸ್, ಬೇಎಲೆ, ಈರುಳ್ಳಿ-ಬೆಳ್ಳುಳ್ಳಿ ಮತ್ತು ಕೆಂಪು ಮೆಣಸಿನಕಾಯಿಯೊಂದಿಗೆ ಶುಂಠಿಯನ್ನು ಸೇರಿಸಿ ಗಂಟು ಕಟ್ಟಿಕೊಳ್ಳಿ. ಈಗ ಈ ಬಂಡಲ್ ಅನ್ನು ಕುಕ್ಕರ್ನಲ್ಲಿ ಹಾಕಿದ ನಂತರ ನೀವು ಒಂದು ಚಮಚ ಉಪ್ಪು ಮತ್ತು 1/4 ಕಪ್ ನೀರು ಸೇರಿಸಬೇಕು. ಟೊಮೆಟೊವನ್ನು 2 ಸೀಟಿ ಬರುವವರೆಗೆ ಬೇಯಿಸಬೇಕು. 2 ಸೀಟಿ ಬಂದಾಗ ಕುಕ್ಕರ್ ತೆರೆದ ನಂತರ ಬಂಡಲ್ ಅನ್ನು ಹೊರತೆಗೆದು ಪಕ್ಕಕ್ಕೆ ಇಡಬೇಕು. ಟೊಮೆಟೊವನ್ನು ಸ್ಮ್ಯಾಶ್ ಮಾಡಿದ ಬಳಿಕ ಒಂದು ಜರಡಿ ಸಹಾಯದಿಂದ ತಳಿ ಸಿಪ್ಪೆ ಮತ್ತು ಬೀಜಗಳನ್ನು ಬೇರ್ಪಡಿಸಿ. ನೀವು ಅದನ್ನು ಮಿಕ್ಸರ್ನಲ್ಲಿ ಗ್ರೈಂಡ್ ಮಾಡಬಾರದು ಎಂಬುದನ್ನು ನೆನಪಿನಲ್ಲಿಡಿ. ಇಲ್ಲದಿದ್ದರೆ ನಿಮ್ಮ ಕೆಚಪ್ ಅಥವಾ ಸಾಸ್ನ ಬಣ್ಣವು ಬದಲಾಗುತ್ತದೆ. ಫಿಲ್ಟರ್ ಮಾಡಿದ ನಂತರ ನೀವು ಟೊಮೆಟೊ ಪ್ಯೂರಿಗೆ ಮಸಾಲೆಗಳ ಸುವಾಸನೆಯು ಚೆನ್ನಾಗಿ ಮಿಶ್ರಣ ಮಾಡಿ. 5 ರಿಂದ 6 ನಿಮಿಷಗಳ ಕಾಲ ಬೇಯಿಸಿ. ಬಳಿಕ ಅರ್ಧ ಬೌಲ್ ಸಕ್ಕರೆ ಮತ್ತು 1/4 ಕಪ್ ನೀರನ್ನು ಸೇರಿಸಬೇಕು. ಅದು ಗಟ್ಟಿಯಾಗುವವರೆಗೆ ಬೇಯಿಸಿ ನಂತರ ಗ್ಯಾಸ್ ಆಫ್ ಮಾಡಿ ಮತ್ತು ತಣ್ಣಗಾಗಲು ಬಿಡಿ. ಈಗ ಅದನ್ನು ಗಾಜಿನ ಬಾಟಲಿಯಲ್ಲಿ ತುಂಬಿಸಿ ಮತ್ತು ರೆಫ್ರಿಜರೇಟರ್ನಲ್ಲಿ ಸಂಗ್ರಹಿಸಿ. ಟೊಮೆಟೊ ಸಾಸ್ ಸವಿಯಲು ಸಿದ್ಧ.



## ಯಶ್ ನಟನೆಯ ಟಾಕ್ಸಿಕ್ ಸಿನಿಮಾಕ್ಕಾಗಿ ಮರಗಳ ಮಾರಣಹೋಮ: ಎಫ್ಐಆರ್

ರಾಕಿಂಗ್ ಸ್ಟಾರ್ ಯಶ್ ನಟನೆಯ ಬಹುನಿರೀಕ್ಷಿತ ಟಾಕ್ಸಿಕ್ ಸಿನಿಮಾ ಇದೀಗ ಸಂಕಷ್ಟಕ್ಕೆ ಸಿಲುಕಿದೆ . ಬೆಂಗಳೂರಿನ ಎಚ್ಎಂಟಿ ಕಾರ್ಖಾನೆ ಬಳಿ ಬೃಹತ್ ಸೆಟ್ ನಿರ್ಮಾಣ ಮಾಡಿ ತಿಂಗಳುಗಳ ಕಾಲ ಟಾಕ್ಸಿಕ್ ಸಿನಿಮಾದ ಶೂಟಿಂಗ್ ಮಾಡಲಾಗಿತ್ತು. ಆದರೆ ಇತ್ತೀಚೆಗೆ 'ಟಾಕ್ಸಿಕ್' ಸಿನಿಮಾ ತಂಡ, ಸೆಟ್ ನಿರ್ಮಾಣ ಮಾಡಲು ಮರಗಳನ್ನು ಕಡಿದು ನಾಶ ಮಾಡಿದೆ ಎಂಬ ಆರೋಪ ಕೇಳಿ ಬಂದಿತ್ತು.

ವಕೀಲರೊಬ್ಬರು ಈ ಬಗ್ಗೆ ದೂರು ದಾಖಲಿಸಿದ್ದರು. ಇತ್ತೀಚೆಗೆ, ಅರಣ್ಯ ಸಚಿವ ಈಶ್ವರ್ ಖಂಡ್ರೆ ಸಹ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದರಲ್ಲದೆ, ಎಚ್ಎಂಟಿ ಕೆಲ ನಿಯಮಗಳನ್ನು ಮುರಿದಿದೆ ಎಂಬ ಆರೋಪವೂ ಕೇಳಿ ಬಂದಿತ್ತು. ಇದೀಗ 'ಟಾಕ್ಸಿಕ್' ಸಿನಿಮಾ ನಿರ್ಮಾಪಕರ ವಿರುದ್ಧ ಎಫ್ಐಆರ್ ದಾಖಲಾಗಿದೆ.

ಮರಗಳನ್ನು ಕಡಿದ ಆರೋಪದಲ್ಲಿ ನ್ಯಾಯಾಲಯದ ಸೂಚನೆಯಂತೆ 'ಟಾಕ್ಸಿಕ್' ಸಿನಿಮಾದ ನಿರ್ಮಾಣ ಸಂಸ್ಥೆಗಳಾದ ಕೆವಿಎನ್ ಹಾಗೂ ಯಶ್ ರ ಮಾನ್ಸ್ಟರ್ ಮೈಂಡ್ ಕ್ರಿಯೇಷನ್ಸ್ ವಿರುದ್ಧ ಎಫ್ಐಆರ್ ದಾಖಲಿಸಲಾಗಿದೆ. ಕೆನರಾ ಬ್ಯಾಂಕ್ ಜನರಲ್ ಮ್ಯಾನೇಜರ್ ಹಾಗೂ ಹೆಚ್ಎಂಟಿ ಲಿಮಿಟೆಡ್ ವಿರುದ್ಧವೂ ಸಹ ಎಫ್ಐಆರ್ ದಾಖಲಾಗಿದೆ. ಅರಣ್ಯ ಕಾಯ್ದೆಯ ಅಡಿಯಲ್ಲಿ ಎಫ್ಐಆರ್ ದಾಖಲಾಗಿದ್ದು, ಆರೋಪಿಗಳಿಗೆ ನೊಟೀಸ್ ನೀಡಿ ವಿಚಾರಣೆಗೆ ಕರೆಯುವ ಸಾಧ್ಯತೆ ಇದೆ.

ಕಳೆದ ಕೆಲ ತಿಂಗಳಿಂದಲೂ 'ಟಾಕ್ಸಿಕ್' ಸಿನಿಮಾದ ಸೆಟ್ ನಿರ್ಮಾಣವಾಗಿರುವ ಜಾಗ ಮತ್ತು ಮರ ಕಡಿದಿರುವ ಕುರಿತು ವಿವಾದಗಳು ಚಾಲ್ತಿಯಲ್ಲಿವೆ. ಅರಣ್ಯ ಸಚಿವ ಈಶ್ವರ ಖಂಡ್ರೆಯವರು, ಎಚ್ಎಂಟಿ ತನಗೆ ನೀಡಲಾಗಿದ್ದ ಜಾಗವನ್ನು ಸಿನಿಮಾಗಳಿಗೆ ಬಾಡಿಗೆ ನೀಡಿ ಹಣ ಮಾಡುತ್ತಿದೆ ಎಂದು ಆರೋಪಿಸಿತ್ತು. 'ಟಾಕ್ಸಿಕ್' ಸಿನಿಮಾದ ಸೆಟ್ ನಿರ್ಮಾಣ ಮಾಡಿದ ಜಾಗದಲ್ಲಿ ಮುಂಚೆ ಇದ್ದ ಮರಗಳು ಆ ನಂತರ ನಾಶವಾದ ಮರಗಳ ಮಾಹಿತಿ ಒದಗಿಸುವ ಸ್ಯಾಟಲೈಟ್ ಚಿತ್ರವನ್ನು ಸಹ ಬಿಡುಗಡೆ ಮಾಡಲಾಗಿತ್ತು.

ಬಳಿಕ ಈ ಆರೋಪಗಳಿಗೆ ಸ್ಪಂದಿಸಿದ್ದ ಎಚ್ಎಂಟಿ, 'ಟಾಕ್ಸಿಕ್' ಸಿನಿಮಾದ ಸೆಟ್ ನಿರ್ಮಾಣ ಆಗಿರುವ ಸ್ಥಳ ನಮ್ಮದಲ್ಲ, ಅದು ಕೆನರಾ ಬ್ಯಾಂಕ್ಗೆ ಸೇರಿದ್ದು, ಕೆನರಾ ಬ್ಯಾಂಕ್ಗೆ ಸೇರಿದ ಸ್ಥಳವನ್ನು ನಾವು ಬಾಡಿಗೆಗೆ ಕೊಡುವ ಪ್ರಶ್ನೆಯೇ ಉದ್ಭವಿಸುವುದಿಲ್ಲ' ಎಂದಿತ್ತು. ಚಿತ್ರತಂಡ ಸಹ ಈ ಬಗ್ಗೆ ಪ್ರತಿಕ್ರಿಯಿಸಿ, ಮರ ಕಡಿದಿರುವ ಆರೋಪಗಳನ್ನು ತಳ್ಳಿ ಹಾಕಿತ್ತು.

## ಬಾದಾಮಿ ಸೇವನೆಯಿಂದ ಇದೆ ಇಷ್ಟೆಲ್ಲಾ ಪ್ರಯೋಜನ



ಹೆಲ್ತ್ ಟಿಪ್ಸ್

ಒಣ ಹಣ್ಣು ಬಾದಾಮಿ ಸೇವನೆಯಿಂದ ದೇಹಕ್ಕೆ ಹಲವಾರು ಪ್ರಯೋಜನಗಳಿವೆ. ಪೋಷಕಾಂಶಗಳ ಆಗರವಾಗಿರುವ ಬಾದಾಮಿ ಮಕ್ಕಳ ಬುದ್ಧಿ ಶಕ್ತಿಯನ್ನು ಹೆಚ್ಚಿಸುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

ಪ್ರತಿ ದಿನ ನೆನೆಸಿದ ನಾಲ್ಕು ಬಾದಾಮಿಯನ್ನು ತಿಂದರೆ ಅಂದ ಹೆಚ್ಚುವುದರ ಜೊತೆಗೆ ಆರೋಗ್ಯ ಭಾಗ್ಯವೂ ಸಿಗುತ್ತದೆ.

ಬಾದಾಮಿಯಲ್ಲಿ ಕೊಬ್ಬು ಕರಗಿಸುವಂತಹ ಗುಣ ಇದೆ ಇದರಲ್ಲಿ ವಿಟಮಿನ್ಸ್ ಮಿನರಲ್ಸ್ ಗಳು ಸಮೃದ್ಧಿಯಾಗಿವೆ.

ಬಾದಾಮಿಯಿಂದ ಮಿಲ್ಕ್ ಶೇಕ್ ತಯಾರಿಸಿ ಕುಡಿಯುವುದರಿಂದ ದೇಹಕ್ಕೆ ಪೋಷಕಾಂಶಗಳು ದೊರೆಯುತ್ತವೆ. ಪ್ರತಿದಿನ 8 ಬಾದಾಮಿಯಂತೆ ವಾರಕ್ಕೆ 5 ಬಾರಿ ಬೆಳಿಗ್ಗೆ ಖಾಲಿ ಹೊಟ್ಟೆಯಲ್ಲಿ ತಿಂದರೆ ಹೃದಯದ ಸಮಸ್ಯೆಗಳು ನಿಯಂತ್ರಣದಲ್ಲಿರುತ್ತವೆ. ಇದರಲ್ಲಿ ವಿಟಮಿನ್ 'ಇ' ಇದೆ, ಅದರೊಂದಿಗೆ ಪೊಟ್ಯಾಷಿಯಂ, ಸೋಡಿಯಮ್ ಅಂಶ ಕಡಿಮೆ ಇದೆ ಆದ್ದರಿಂದ ಬಾದಾಮಿ ಸೇವಿಸುವುದರಿಂದ ರಕ್ತದೊತ್ತಡ ಸಮಸ್ಯೆ ಇರುವುದಿಲ್ಲ.

ಬಾದಾಮಿಯಲ್ಲಿರುವ ಕ್ಯಾಲ್ಸಿಯಂ ಎಲುಬುಗಳಿಗೆ ಶಕ್ತಿಯನ್ನು ನೀಡುತ್ತದೆ. ಇದು ರಕ್ತದಲ್ಲಿ ಇನ್ಸುಲಿನ್ ಅಂಶವನ್ನು ವೃದ್ಧಿಸುತ್ತದೆ.

## ಬಿಳಿ ಕೂದಲು ಕಪ್ಪಗಾಗಿಸಲು ಸಹಾಯಕ ಈ ಸೊಪ್ಪು

ಬ್ಯೂಟಿ ಟಿಪ್ಸ್



ಪುಟ್ಟ ಪುಟ್ಟ ಮಕ್ಕಳಿಗೂ ಈಗ ಬಿಳಿ ಕೂದಲಿನ ಸಮಸ್ಯೆ ಶುರುವಾಗಿದೆ. ಬಿಳಿ ಕೂದಲು ಕಾಣಿಸಿಕೊಂಡಾಕ್ಷಣ ಹೇರ್ ಡೈ ಮಾಡುವುದು ಅಥವಾ ಇತರ ಉತ್ಪನ್ನಗಳನ್ನು ಬಳಸಬೇಡಿ. ಇದರಿಂದ ಸಮಸ್ಯೆ ಮತ್ತಷ್ಟು ಹೆಚ್ಚಾಗುತ್ತದೆ. ಅಕಾಲಿಕವಾಗಿ ಕೂದಲು ಬೆಳ್ಳಗಾದರೆ ಕರಿಬೇವನ್ನು ಬಳಸಿದ್ರೆ ಉತ್ತಮ ಫಲಿತಾಂಶ ಸಿಗುತ್ತದೆ. ಕರಿಬೇವು ಕೂದಲನ್ನು ಬಲಪಡಿಸಲು ತುಂಬಾ ಉಪಯುಕ್ತವಾಗಿದೆ. ಕೂದಲು ಮೃದುವಾಗಿ ಹೊಳಪು ಪಡೆಯುತ್ತದೆ. ಕರಿಬೇವಿನ ಎಲೆಗಳಲ್ಲಿ ಉತ್ಕರ್ಷಣ ನಿರೋಧಕ ಗುಣವಿದೆ. ಹಾಗಾಗಿ ಇದು ಬಿಳಿ ಕೂದಲನ್ನು ಕಪ್ಪಗಾಗಿಸುತ್ತದೆ. ಕರಿಬೇವಿನ ಎಲೆಗಳನ್ನು ನೀರಿನಲ್ಲಿ ಹಾಕಿ 20 ನಿಮಿಷಗಳ ಕಾಲ ಕುದಿಸಿ. ನಂತರ ಆ ನೀರಿನಿಂದ ಪ್ರತಿದಿನ ಕೂದಲಿನ ಬುಡಕ್ಕೆ ಹಾಗೂ ಕೂದಲಿಗೆ ಚೆನ್ನಾಗಿ ಮಸಾಜ್ ಮಾಡಬೇಕು. ಕರಿಬೇವಿನಲ್ಲಿ ಆಯಂಟಿ ಬ್ಯಾಕ್ಟೀರಿಯಲ್ ಮತ್ತು ಆಯಂಟಿ ಫಂಗಲ್ ಗುಣಗಳಿರುವುದರಿಂದ ನೆತ್ತಿಯ ಆರೋಗ್ಯಕ್ಕೂ ಇದು ಒಳ್ಳೆಯದು. ಡ್ಯಾಂಡ್ರಫ್ ಸಮಸ್ಯೆಗೆ ಕೂಡ ಕರಿಬೇವು ಪರಿಹಾರ ನೀಡುತ್ತದೆ. ಇದಲ್ಲದೆ ಕೂದಲು ಹೆಚ್ಚು ಉದುರ್ತಾ ಇದ್ದರೆ ಅಂಥವರು ಕೂಡ ಈ ಮನೆಮದ್ದನ್ನು ಟ್ರೈ ಮಾಡಿ ನೋಡಿ. ಕರಿಬೇವು ಕೂದಲಿನ ಸಂಪೂರ್ಣ ಆರೈಕೆ ಮಾಡುವುದರಿಂದ ಅತ್ಯುತ್ತಮ ಮನೆಮದ್ದುಗಳಲ್ಲಿ ಒಂದು ಎನಿಸಿಕೊಂಡಿದೆ.

## 'ನೂಪುರ ಧ್ವನಿ'ಯ ಮನಮೋಹಕ ನೃತ್ಯೋಲ್ಲಾಸ



ಅದೊಂದು ಅಪೂರ್ವ ಸಮ್ಮಿಲನ. ಮುದವಾದ ಸಂಜೆಯಲ್ಲಿ ರಂಗದ ಮೇಲೆ ನರ್ತಿಸುವ ಮುದ್ದಾದ ಹಕ್ಕಿಗಳ ಚಿಲಿಪಿಲಿ ರವ. ಕಣ್ಮನ ಸೂರೆಗೊಂಡ ಸುಂದರ ಹೆಜ್ಜೆ-ಗೆಜ್ಜೆಗಳ ಲಾಸ್ಯದ ರಸಾನುಭವ. ನಿಖರವಾದ ಅಡವುಗಳು, ಅಂಗಶುದ್ಧವಾದ ಆಂಗಿಕಾಭಿನಯ, ಮುಗ್ಧ ಮುಖಗಳ ರಮಣೀಯ ಅಭಿನಯ ಬಹು ಆಪ್ಯಾಯಮಾನವಾಗಿ, ಅಚ್ಚುಕಟ್ಟಾಗಿ ಮೂಡಿಬಂತು. ಎಲೆಮರೆಯ ಕಾಯಿಯಂತೆ ನಿಶ್ಶಬ್ದ ನೃತ್ಯ ಸೇವೆಯಲ್ಲಿ ತೊಡಗಿಕೊಂಡಿರುವ ನುರಿತ ನೃತ್ಯ ಕಲಾವಿದೆ- 'ನೂಪುರ ಧ್ವನಿ' ಸಂಸ್ಥೆಯ ಬದ್ಧತೆಯ ನೃತ್ಯಗುರು ವಿದುಷಿ. ಪಾರ್ವತಿ ಬಾಲಕೃಷ್ಣನ್ ಅವರ ಪಳಗಿದ ಗರಡಿಯಲ್ಲಿ ತಯಾರಾದ ಪುಟಾಣಿ ಕಲಾವಿದರು ವಯಸ್ಸಿಗೇ ಮೀರಿದ ನೃತ್ಯ ಸಾಮರ್ಥ್ಯವನ್ನು ಮೆರೆದರು ಎಂದರೆ ಹೊಗಳಿಕೆಯಾಗದು. ಕಾರ್ಯಕ್ರಮದ ಉತ್ತಾರಾರ್ಧದಲ್ಲಿ ಗುರು ಪಾರ್ವತಿ ಭಕ್ತಿತಾದಾತ್ಮ್ಯತೆಯ ಕೃತಿಗಳನ್ನು ಪರಕಾಯ ಪ್ರವೇಶ ಮಾಡಿ ಪಾತ್ರದಳೊಂದಾಗಿ ಮನಮೋಹಕವಾಗಿ ನರ್ತಿಸಿದ್ದು ಹೃದಯಸ್ಪರ್ಶಿಯಾಗಿತ್ತು.

ನೃತ್ಯ ಪ್ರದರ್ಶನದಲ್ಲಿ ಪ್ರಸ್ತುತಪಡಿಸಿದ ಕೃತಿಗಳ ಆಯ್ಕೆ ಬಹು ಸಮಂಜಸವಾಗಿತ್ತು. ಶುಭಾರಂಭದ 'ತೋಡಯ ಮಂಗಳಂ'- ( ದಂಡಾಯುಧ ಪಾಣಿ ಪಿಳ್ಳೈ ರಚನೆ) ಗುರು- ಹಿರಿಯರಿಗೆ, ದೇವಾನು ದೇವತೆಗಳಿಗೆ ವಂದಿಸುವ ಪ್ರಾರ್ಥನಾ ಕೃತಿ. ಪುಟ್ಟ ಮಕ್ಕಳಾದರೂ ಅವರ ಅಂಗಶುದ್ಧ ನರ್ತನ, ಸುಂದರ ಹಸ್ತ ವಿನಿಯೋಗದಿಂದ ಕೂಡಿದ ನೃತ್ತ ನಮನದ ಅಚ್ಚುಕಟ್ಟು ಮತ್ತು ಅಭಿನಯಿಸಿದ 'ಶ್ಲೋಕಮಾಲ'ದ ಪುಟ್ಟ ಶ್ಲೋಕಗಳ ಸಾಕಾರ ಮುದ ನೀಡಿತು. ನಂತರ ಮುತ್ತುಸ್ವಾಮಿ ದೀಕ್ಷಿತರು ರಚಿಸಿದ ಮೀನಾಕ್ಷಿ ದೇವಿಯ ಕುರಿತ ಕೃತಿ ನಯನ ಮನೋಹರವಾಗಿ ಮೂಡಿ ಬಂತು.

ಮುಂದೆ ಚತುರಶ್ರ ಜಾತಿಯ 'ಅಲರಿಪು'- ಹೆಸರಿಗೆ ಅನ್ವರ್ಥಕವಾಗಿ, ನೃತ್ಯದ ಪ್ರಾಥಮಿಕ ಅಂಶಗಳನ್ನು ಒಳಗೊಂಡ ಮುಗುಳು, ಹೂವಿನಂತೆ ಪ್ರಫುಲ್ಲವಾಗಿ ವಿಕಸಿತಗೊಂಡ ನೃತ್ಯಾರ್ಪಣೆ, ಗುರು ಪಾರ್ವತಿ ಅವರ ಸ್ಫುಟವಾದ ನಟುವಾಂಗದಲ್ಲಿ ಮನಮುಟ್ಟಿತು. ಮುಂದಿನ 'ಗಣೇಶ ಪಂಚರತ್ನಂ, ಜತಿಸ್ವರ ತಾಳ-ಲಯಬದ್ಧವಾಗಿ, ಸುಂದರಾಭಿನಯದಲ್ಲಿ ಅರ್ಪಣೆಗೊಂಡಿತು. ಶಿವಕಾಮಿಯ ವರ್ಣನೆಯನ್ನು ಕಣ್ಮುಂದೆ ಕಟ್ಟಿದಂತೆ ಅಭಿನಯಕ್ಕೆ ತೆರೆದುಕೊಂಡ - 'ಚಿನ್ನಂ ಚಿರು ಪೆಣ್ ಪೋಲೆ' ಕೃತಿ ಪಾರ್ವತಿಯವರ ನೃತ್ಯಸಂಯೋಜನೆಯಲ್ಲಿ ಆಕರ್ಷಿಸಿತು.

ಮುಂದಿನ ರಸಘಟ್ಟ- 'ಪದವರ್ಣ' ಕಾರ್ಯಕ್ರಮದ ಕೇಂದ್ರ ಬಿಂದುವಾಗಿತ್ತು. ದೀರ್ಘಬಂಧವಾದ 'ವರ್ಣ' ದಲ್ಲಿ ನೃತ್ತ ಸಾಮರ್ಥ್ಯ ಮತ್ತು ಅಭಿನಯ ಪ್ರಾವೀಣ್ಯ ಎರಡೂ ಸಮರಸವಾಗಿ ಬೆರೆತು ನೋಡುಗರ ಕಣ್ಣಿಗೆ ಹಬ್ಬ ನೀಡುತ್ತದೆ ಎಂದರೆ ಅತಿಶಯೋಕ್ತಿಯಲ್ಲ. ಈ ಎರಡೂ ಅಂಶಗಳಲ್ಲಿಯೂ ಪ್ರಭುತ್ವ ಬಯಸುವ ಈ ಕೃತಿಯನ್ನು ಕಲಾವಿದೆ ಪಾರ್ವತಿ ಬಾಲಕೃಷ್ಣನ್ ಬಹು ಪ್ರಬುದ್ಧತೆಯಿಂದ ನಿರ್ವಹಿಸಿದರು. ಭಕ್ತಿ ತಾದಾತ್ಮ್ಯತೆಯ ಅವರ ರಸಪೂರ್ಣ ಅಭಿನಯ, ಮಿಂಚಿನ ಸಂಚಾರದ ಮನಮೋಹಕ ನೃತ್ತ ಸೌಂದರ್ಯ ನೋಡುಗರನ್ನು ಹಿಡಿದು ಕೂರಿಸಿತು. ಷಣ್ಮುಖಪ್ರಿಯ ರಾಗ- ಆದಿತಾಳದ, ಡಾ.ಎಂ. ಬಾಲಮುರಳಿಕೃಷ್ಣ ರಚನೆಯ ' ಓಂಕಾರ ಪ್ರಣವನಾದ ಶ್ರುತಿ ಲಯ' ಶ್ರೀಕೃಷ್ಣನ, ಸೃಷ್ಟಿ-ಸ್ಥಿತಿ-ಲಯಕಾರ ಮಹಾಮಹಿಮನ ವೈಶಿಷ್ಟ್ಯ, ಮಹತ್ವ- ದಿವ್ಯ ರೂಪಗಳನ್ನು ಕಲಾವಿದೆ, ಸುಮನೋಹರವಾಗಿ ತಮ್ಮ ನುರಿತಾಭಿನಯದಿಂದ ಸಾಕ್ಷಾತ್ಕರಿಸಿದ್ದು ಹೃದಯಂಗಮವಾಗಿತ್ತು. ಪಾತ್ರದಲ್ಲಿ ತಲ್ಲೀನತೆ- ಭಕ್ತಿಭಾವದ ಆರ್ದ್ರ ಅಭಿನಯ, ಚೈತನ್ಯಪೂರ್ಣ ನೃತ್ಯದ ಪಲುಕುಗಳು ಸ್ತುತ್ಯಾರ್ಹವಾಗಿದ್ದವು. ಸುಂದರಭಂಗಿಗಳು, ಆಕಾಶಚಾರಿ, ಭ್ರಮರಿ, ನೃತ್ತ ವೈವಿಧ್ಯ ಗಮನಾರ್ಹವಾಗಿದ್ದವು.

ಮುಂದೆ- ಕವಿ ಪಾಪನಾಶಂ ಶಿವನ್ 'ನಂಬಿ ಕೆಟ್ಟವರೆವರಯ್ಯ ' ಎಂದು ಪ್ರಶ್ನಿಸಿರುವ ಕೃತಿಯನ್ನು ಅರ್ಥಪೂರ್ಣ ಆಂಗಿಕಾಭಿನಯ-ಪರಿಣಾಮಕಾರಿ ಅಭಿನಯದಲ್ಲಿ ಕಲಾವಿದೆ, ನಂಬಿರುವ ಶಿವನನ್ನು ಬಲವಿದ್ದಾಗ ಸತತ ಭಜಿಸಿ, ಜೀವನ ಸಾರ್ಥಕಪಡಿಸಿಕೊಳ್ಳಿರೆಂಬ ಉತ್ತಮ ಸಂದೇಶವನ್ನು ಬಿತ್ತರಿಸಿದರು. ನಯನ ಮನೋಹರವಾದ ರಸಾಭಿನಯ, ಮಾರ್ದವತೆಯಿಂದ ಕೂಡಿದ ಕಲಾವಿದೆಯ ಮನಮುಟ್ಟುವ ಭಾವ ತಲ್ಲೀನತೆಯ ಭಾವ-ಭಂಗಿಗಳು ಅಪ್ಯವೆನಿಸಿದವು.

ಅಂತ್ಯದಲ್ಲಿ ಭಕ್ತಿ ರಸಾಯನ ಉಣಿಸಿದ ರಾಮ ಭಜನೆ ಬೇರಾವುದೋ ಲೋಕಕ್ಕೆ ಕೊಂಡೊಯ್ದರೆ, ಮನಮೋಹಕ 'ತಿಲ್ಲಾನ' ಕಾರ್ಯಕ್ರಮಕ್ಕೆ ಸುಂದರ ಸಂಪನ್ನತೆಯನ್ನು ನೀಡಿತು.

ಅಚ್ಚುಕಟ್ಟಾಗಿ ಮೂಡಿಬಂದ, ಭಕ್ತಿಪ್ರಧಾನ ನೃತ್ಯ ಕಾರ್ಯಕ್ರಮಕ್ಕೆ ತಮ್ಮ ಪೂರಕ ಸಾಂಗತ್ಯದಿಂದ ಕಳೆ ತಂದವರೆಂದರೆ- ಸುಶ್ರಾವ್ಯ ಗಾಯನದಲ್ಲಿ ನಂದಕುಮಾರ್ ಉನ್ನಿ ಕೃಷ್ಣನ್, ಕರ್ಣಾನಂದ ಮೃದಂಗವಾದನದಲ್ಲಿ ನಾರಾಯಣ ಸ್ವಾಮಿ, ಹೃದಯಂಗಮ ಮುರಳೀಗಾನದಲ್ಲಿ ಕಾರ್ತೀಕ್. ಆರ್. ಸಾರ್ಥವಳ್ಳಿ, ಪ್ರೇರಣಾದಾಯಕ ಸೊಗಸಾದ ನಟುವಾಂಗದಲ್ಲಿ ಪಾರ್ವತಿ ಬಾಲಕೃಷ್ಣನ್ ಮತ್ತು ತೇಜಶ್ರೀ ಶ್ರೀನಿವಾಸ್ ಮುಂತಾದವರು.

**। ವೈ.ಕೆ.ಸಂಧ್ಯಾ ಶರ್ಮ**



ಜಯಶ್ರೀ.ಬಿ.ಆರ್
ಖ್ಯಾತ ಜ್ಯೋತಿಷಿ
ದೂರವಾಣಿ-9964739507
www.jyotishyavaastu.com

## ರಾಶಿ ಭವಿಷ್ಯ

**ಮೇಷ:** ಅಧಿಕಾರಿಗಳಲ್ಲಿ ಕಲಹ, ಆರ್ಥಿಕ ಪರಿಸ್ಥಿತಿ ಏರುಪೇರು, ನಿಂದನೆ, ನೀಚ ಜನರ ಸಹವಾಸ, ಮನಸ್ಸಿಗೆ ಚಿಂತೆ.

**ವೃಷಭ:** ಸ್ತ್ರೀ ಸಂಬಂಧ ವಿಚಾರಗಳಿಂದ ಚಿಂತೆ, ಶತ್ರುಬಾಧೆ, ವಿದೇಶ ಪ್ರಯಾಣ, ವಿದ್ಯಾಭಿವೃದ್ಧಿ.

**ಮಿಥುನ:** ಸಾಮಾನ್ಯ ಸೌಖ್ಯಕ್ಕೆ ದಕ್ಕೆ, ಅಕಾಲ ಭೋಜನ, ಅಧಿಕ ಖರ್ಚು, ಗುರು ಹಿರಿಯರಲ್ಲಿ ಭಕ್ತಿ, ತೀರ್ಥಕ್ಷೇತ್ರ ದರ್ಶನ.

**ಕಟಕ:** ರಾಜಕೀಯ ಕ್ಷೇತ್ರದವರಿಗೆ ಚಿಂತೆ, ಕೋಪ ಜಾಸ್ತಿ, ಪಾಪ ಬುದ್ಧಿ, ಕಾರ್ಯ ವಿಕಲ್ಪ.

**ಸಿಂಹ:** ಹಿರಿಯರಿಂದ ಬೋಧನೆ, ಮಿತ್ರರ ಸಹಾಯ, ಕೃಷಿಯಲ್ಲಿ ಲಾಭ, ಧನ ಹಾನಿ.

**ಕನ್ಯಾ:** ಧರ್ಮಕಾರ್ಯಾಸಕ್ತಿ, ವಸ್ತ್ರಾಭರಣ ಪ್ರಾಪ್ತಿ, ಸಾಧಾರಣ ಪ್ರಗತಿ, ನಂಬಿಕೆ ದ್ರೋಹ.

**ತುಲಾ:** ಶ್ರಮಕ್ಕೆ ತಕ್ಕ ಫಲ, ರಿಯಲ್ ಎಸ್ಟೇಟ್‌ನವರಿಗೆ ಲಾಭ, ಮನಶಾಂತಿ, ದೇವತಾ ಕಾರ್ಯಗಳನ್ನ ಮುಂದೂಡಿ.

**ವೃಶ್ಚಿಕ:** ನೆಮ್ಮದಿ ಇಲ್ಲದ ಜೀವನ, ವ್ಯಾಸಂಗದಲ್ಲಿ ಪ್ರಗತಿ, ಸಾಲಭಾದೆ, ಅನಗತ್ಯ ಅಲೆದಾಟ.

**ಧನಸ್ಸು:** ಆಕಸ್ಮಿಕ ಧನ ಲಾಭ, ಮಿತ್ರರಿಂದ ತೊಂದರೆ, ಮನೋವ್ಯಥೆ, ವಾದದಿಂದ ಮನೆಯಲ್ಲಿ ಕಲಹ.

**ಮಕರ:** ಹಿತಶತ್ರುಗಳಿಂದ ಮೋಸ, ಉದ್ಯೋಗದಲ್ಲಿ ಅಲ್ಪ ಲಾಭ, ಯತ್ನ ಕಾರ್ಯಗಳಲ್ಲಿ ತೊಂದರೆ.

**ಕುಂಭ:** ಅಲ್ಪ ಕಾರ್ಯಸಿದ್ಧಿ, ಕೈಗೊಂಡ ಕೆಲಸಗಳಲ್ಲಿ ವಿಘ್ನ, ವಿವಾಹ ಯೋಗ, ನಾನಾ ವಿಚಾರಗಳಲ್ಲಿ ಆಸಕ್ತಿ.

**ಮೀನ:** ವಿನಾಕಾರಣ ದ್ವೇಷ, ಹಣಕಾಸಿನ ತೊಂದರೆ, ಅಧಿಕ ಖರ್ಚು, ವಿದೇಶ ಪ್ರಯಾಣ, ಕೀರ್ತಿ ಲಾಭ.

## ವಿಶ್ವದಯೆ ದಿನ




ಪ್ರತಿ ವರ್ಷ ನವೆಂಬರ್ 13 ರಂದು ವಿಶ್ವ ದಯೆ ದಿನವನ್ನು ಆಚರಿಸಲಾಗುತ್ತದೆ. ಇದು ಯು.ಎಸ್, ಕೆನಡಾ, ಆಸ್ಟ್ರೇಲಿಯಾ, ಇಟಲಿ ಮತ್ತು ಭಾರತ ಸೇರಿದಂತೆ ಹಲವು ದೇಶಗಳಲ್ಲಿ ಆಚರಿಸಲಾಗುವ ಅಂತರರಾಷ್ಟ್ರೀಯ ದಿನವಾಗಿದೆ.

ವಿಶ್ವ ದಯೆ ದಿನವನ್ನು ಮೊದಲು ವಿಶ್ವ ದಯೆ ಆಂದೋಲನದಿಂದ ವೀಕ್ಷಣೆಯ ದಿನವಾಗಿ ಪರಿಚಯಿಸಲಾಯಿತು. 2019 ರಲ್ಲಿ, ಸಂಸ್ಥೆಯು ಸ್ವಿಸ್ ಕಾನೂನಿನ ಅಡಿಯಲ್ಲಿ ಅಧಿಕೃತ ಎನ್ಜಿಒ ಆಗಿ ನೋಂದಾಯಿಸಲ್ಪಟ್ಟಿತು, ಆದರೆ ಗುಂಪಿನ ಇತಿಹಾಸವು 1997 ರಲ್ಲಿ ಟೋಕಿಯೊ ಮೂಲದ ಸಮಾವೇಶಕ್ಕೆ ವಿಸ್ತರಿಸುತ್ತದೆ. ಆಸ್ಟ್ರೇಲಿಯಾ, ಥೈಲ್ಯಾಂಡ್, ಯುನೈಟೆಡ್ ಸ್ಟೇಟ್ಸ್ ಸೇರಿದಂತೆ ದೇಶಗಳಲ್ಲಿ ನೆಲೆಗೊಂಡಿರುವ ಸಂಸ್ಥೆಗಳು ಮತ್ತು ಸಂಘಗಳ ಒಂದು ಶ್ರೇಣಿ ಮತ್ತು ಯುನೈಟೆಡ್ ಕಿಂಗ್ಡಮ್ ಅನ್ನು ಈ ಸಮ್ಮೇಳನದಲ್ಲಿ ಒಟ್ಟುಗೂಡಿಸಲಾಯಿತು ಏಕೆಂದರೆ ಸಮಾಜದಲ್ಲಿ ದಯೆಯನ್ನು ಬೆಂಬಲಿಸುವ ಅವರ ಸಮರ್ಪಣೆ. ವಿಶ್ವ ದಯೆ ಚಳುವಳಿಯ ಆರಂಭಿಕ ಸಂರಚನೆಯು ಈ ಘಟನೆಯ ಪರಿಣಾಮವಾಗಿ ರೂಪುಗೊಂಡಿತು, ಅವರ ಪ್ರಾರಂಭದ ಲಿಖಿತ ಘೋಷಣೆಯೊಂದಿಗೆ ದಯೆ ಮತ್ತು ಹೆಚ್ಚು ಸಹಾನುಭೂತಿಯ ಜಗತ್ತನ್ನು ನಿರ್ಮಿಸಲು ಒಟ್ಟಿಗೆ ಸೇರುವ ಪ್ರತಿಜ್ಞೆ ಎಂದು ಹೇಳುತ್ತದೆ. 1998 ರಲ್ಲಿ, ಈ ಗುರಿಯ ಅನ್ವೇಷಣೆಯಲ್ಲಿ, ಅವರು ಉದ್ಘಾಟನಾ ವಿಶ್ವ ದಯೆ ದಿನವನ್ನು ಪ್ರಾರಂಭಿಸಲು ಅನುಕೂಲ ಮಾಡಿಕೊಡುತ್ತಾರೆ.

ವಿಶ್ವ ದಯೆ ಆಂದೋಲನವು ವಿವರಿಸಿದಂತೆ ವಿಶ್ವ ದಯೆ ದಿನದ ಉದ್ದೇಶವು ಸಮುದಾಯದಲ್ಲಿ ಒಳ್ಳೆಯ ಕಾರ್ಯಗಳನ್ನು ಎತ್ತಿ ತೋರಿಸುವುದು ಧನಾತ್ಮಕ ಶಕ್ತಿ ಮತ್ತು ನಮ್ಮನ್ನು ಬಂಧಿಸುವ ದಯೆಯ ಸಾಮಾನ್ಯ ಎಳೆಯನ್ನು ಕೇಂದ್ರೀಕರಿಸುವುದು. ಎರಡು ದಶಕಗಳ ಹಿಂದೆ ಅದರ ರಚನೆಯ ನಂತರ, ದಿನವು ನಿಜವಾಗಿಯೂ ಜಾಗತಿಕ ಗಮನವನ್ನು ಸಾಧಿಸಿದೆ; ದಿನಕ್ಕೆ ಸಂಬಂಧಿಸಿದ ಘಟನೆಗಳು ಪ್ರತಿ ಜನವಸತಿ ಖಂಡದಿಂದ ಭಾಗವಹಿಸುವವರನ್ನು ಆಕರ್ಷಿಸಿವೆ. ಇವುಗಳು ಸಂಗೀತ ಕಚೇರಿಗಳು, ನೃತ್ಯ ಜನಸಮೂಹ ಮತ್ತು ದಯೆ ಕಾರ್ಡ್ಗಳ ವಿತರಣೆಯಂತಹ ಚಟುವಟಿಕೆಗಳನ್ನು ಒಳಗೊಂಡಿವೆ.

ಪ್ರಸ್ತುತ, ದಿನವು ಅನಧಿಕೃತ ಆಚರಣೆಯಾಗಿದೆ, ಇದು ವಿಶ್ವಸಂಸ್ಥೆಯ ಅಧಿಕೃತ ಮಾನ್ಯತೆ ಸ್ಥಾನಮಾನವನ್ನು ಪಡೆಯಲು ವಿಶ್ವ ದಯೆ ಚಳುವಳಿಯ ಭರವಸೆಯಾಗಿ ಉಳಿದಿದೆ. ಗುಂಪು ತಮ್ಮ ಪ್ರಯತ್ನಗಳಲ್ಲಿ ಯಶಸ್ವಿಯಾದರೆ, ವಿಶ್ವ ದಯೆ ದಿನವು ಅಂತರರಾಷ್ಟ್ರೀಯ ಶಾಂತಿ ದಿನ, ಮಾನವ ಹಕ್ಕುಗಳ ದಿನ ಮತ್ತು ವಿಶ್ವ ಆರೋಗ್ಯ ದಿನದಂತಹ ಮಾನ್ಯತೆ ಪಡೆದ ಆಚರಣೆಗಳ ಶ್ರೇಣಿಗೆ ಸೇರುತ್ತದೆ.



# ಭಾರತಕ್ಕೆ ಭರ್ಜರಿ ಗುಡ್‌ನ್ಯೂಸ್ ಕೊಟ್ಟ ಟ್ರಂಪ್

**ಅಮೆರಿಕ:** ಅಮೆರಿಕದ ನಿಯೋಜಿತ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಭಾರತಕ್ಕೆ ಭರ್ಜರಿ ಗುಡ್ನ್ಯೂಸ್ ಕೊಟ್ಟಿದ್ದಾರೆ. ಅಮೆರಿಕದ ಅಧ್ಯಕ್ಷರಾಗಿ ಡೊನಾಲ್ಡ್ ಟ್ರಂಪ್ ಅವರು ಆಯ್ಕೆಯಾಗುತ್ತಿದ್ದಂತೆಯೇ ಭಾರತೀಯರಲ್ಲಿ ಹೊಸ ಕನಸುಗಳು ಚಿಗುರೊಡೆದಿತ್ತು. ಪ್ರಧಾನಿ ನರೇಂದ್ರ ಮೋದಿ ಅವರು ಹಾಗೂ ಅಮೆರಿಕದ ಅಧ್ಯಕ್ಷರ ನಡುವೆ ಉತ್ತಮ ಸಂಬಂಧ ಇದೆ.

ಹೀಗಾಗಿ, ಭಾರತಕ್ಕೆ ಒಳ್ಳೆಯ ಅವಕಾಶಗಳು ಸಿಗಲಿವೆ. ಟ್ರಂಪ್ ಅವರ ಆಯ್ಕೆಯಿಂದಾಗಿ ಭಾರತಕ್ಕೆ ಲಾಭವಾಗಲಿದೆ ಎಂದೇ ಹೇಳಲಾಗಿತ್ತು. ಇದೀಗ ಭಾರತಕ್ಕೆ ಲಾಭವಾಗುವ ಮೊದಲ ಬೆಳವಣಿಗೆ ಆಗಿದೆ.

ಈಚೆಗೆ ನಡೆದ ಅಮೆರಿಕ ಅಧ್ಯಕ್ಷೀಯ ಚುನಾವಣೆಯಲ್ಲಿ ಡೊನಾಲ್ಡ್ ಟ್ರಂಪ್ ಅವರು ಭರ್ಜರಿ ಗೆಲುವು ದಾಖಲಿಸಿದ್ದಾರೆ. ಡೊನಾಲ್ಡ್ ಟ್ರಂಪ್ ಅವರು ಅಧ್ಯಕ್ಷರಾದ ಮೇಲೆ ಭಾರತದ ಪ್ರಧಾನಿ ನರೇಂದ್ರ ಮೋದಿ ಅವರು, ನನ್ನ ಹಳೆಯ ಸ್ನೇಹಿತ ಮತ್ತೆ ಅಮೆರಿಕದ ಅಧ್ಯಕ್ಷರಾಗಿ ಆಯ್ಕೆಯಾಗಿದ್ದಾರೆ. ಅವರಿಗೆ ಶುಭಾಶಯಗಳು ಭಾರತದೊಂದಿಗೆ ಅಮೆರಿಕದ ಬಾಂಧವ್ಯ ಇನ್ನಷ್ಟು ವೃದ್ಧಿಯಾಗಲಿದೆ. ಎರಡೂ ದೇಶಗಳ ನಡುವೆ ಹೊಸ ಅಭಿವೃದ್ಧಿಗೆ ಹಾದಿಯಾಗಲಿದೆ ಎಂದಿದ್ದರು. ಇದೀಗ ಆ ಮಾತುಗಳು ನಿಜವಾಗ್ತಿದೆ.



ಚೀನಾಗೆ ಟಾಂಗ್ ಕೊಟ್ಟು ಭಾರತಕ್ಕೆ ನೆರವು ನೀಡಲು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಅವರು ಮೊದಲ ಹೆಜ್ಜೆ ಇರಿಸಿದ್ದಾರೆ. ಇದೀಗ ಅಮೆರಿಕದ ರಾಷ್ಟ್ರೀಯ ಭದ್ರತಾ ಸಲಹೆಗಾರರಾಗಿ ಮೈಕ್ ವಾಲ್ಟ್ಜ ಅವರನ್ನು ನೇಮಕ ಮಾಡಲಾಗಿದೆ. ಇವರು ಅಮೆರಿಕದ ಫ್ಲೋರಿಡಾದ ಪ್ರತಿನಿಧಿಯಾಗಿದ್ದಾರೆ. ಇವರ ಆಯ್ಕೆ ಭಾರತಕ್ಕೆ ಲಾಭದಾಯಕ ಎಂದೇ ವಿಶ್ಲೇಷಿಸಲಾಗುತ್ತಿದೆ.

ಯಾಕೆಂದರೆ ಮೈಕ್ ವಾಲ್ಟ್ಜ ಚೀನಾದ ಮೇಲೆ ಸದಾ ಹದ್ದಿನ ಕಣ್ಣು ಇರಿಸಿದ್ದರು. ಚೀನಾದ ತಪ್ಪು ನಿರ್ಧಾರಗಳನ್ನು ಇವರು ಸದಾ ವಿರೋಧಿಸಿಕೊಂಡು ಬಂದಿದ್ದಾರೆ. ಅಷ್ಟೇ ಅಲ್ಲ ಕೆಲವು ಕಠಿಣ ಸಂದರ್ಭಗಳಲ್ಲಿ ಚೀನಾದ ವಿರುದ್ಧ ಗಟ್ಟಿ ನಿರ್ಧಾರಗಳನ್ನು ಸಹ ತೆಗೆದುಕೊಂಡಿದ್ದಾರೆ.

## ದಕ್ಷಿಣ ಕೊರಿಯಾ ಜನಪ್ರಿಯ ಯುವ ನಟ ಸಾಂಗ್ ಜೇ-ರಿಮ್ ನಿಧನ

**ಸಿಯೋಲ್:** ದಕ್ಷಿಣ ಕೊರಿಯಾದ ಜನಪ್ರಿಯ ನಟ ಸಾಂಗ್ ಜೇ-ರಿಮ್ ಮಂಗಳವಾರ ನಿಧನರಾಗಿದ್ದಾರೆ. 39 ವರ್ಷ ವಯಸ್ಸಿನ ಜೇ-ರಿಮ್, ಸಿಯೋಲ್ ನಲ್ಲಿರುವ ಅಪಾರ್ಟ್ಮೆಂಟ್ ನಲ್ಲಿ ಶವವಾಗಿ ಪತ್ತೆಯಾಗಿದ್ದು, ಸಾವಿಗೆ ನಿಖರ ಕಾರಣ ಇನ್ನೂ ತಿಳಿದುಬಂದಿಲ್ಲ.ಪೊಲೀಸರು ಪ್ರಕರಣ ಕುರಿತಾಗಿ ತನಿಖೆ ನಡೆಸುತ್ತಿದ್ದಾರೆ. ಘಟನಾ ಸ್ಥಳದಲ್ಲಿ ಎರಡು ಪುಟದ ಡೆತ್ ನೋಟ್ ಪತ್ತೆಯಾಗಿದೆ ಎನ್ನಲಾಗಿದೆ. ನಟನ ಅಂತ್ಯಕ್ರಿಯೆ ನವೆಂಬರ್ 14 ರಂದು ನಡೆಯಲಿದೆ. ಸಾಂಗ್ ಜೇ-ರಿಮ್ ನಿಧನ ಸುದ್ದಿ ತಿಳಿದು ಕೊರಿಯನ್ ಸಿನಿ ಪ್ರೇಕ್ಷಕರಿಗೆ ಆಘಾತವಾಗಿದ್ದು ಅಪಾರ ಅಭಿಮಾನಿಗಳು ಸಂತಾಪ ವ್ಯಕ್ತಪಡಿಸಿದ್ದಾರೆ. ಸಾಂಗ್ ಜೆ- ರಿಮ್ 2009ರ ಆಕ್ಟ್ರೇಸ್ ಚಿತ್ರದ ಮೂಲಕ ಸಿನಿರಂಗಕ್ಕೆ ಕಾಲಿಟ್ಟರು. ದಿ ಮೂನ್ ಎಂಬ್ರೇಸಿಂಗ್ ದಿ ಸನ್ ಚಿತ್ರದಲ್ಲಿ ನಟಿಸಿದ ಬಳಿಕ ಹೆಚ್ಚು ಜನಪ್ರಿಯರಾಗಿದ್ದರು. ಟು ವೀಕ್ಸ್ (2013), ಅನ್ಕೈಂಡ್ ಲೇಡೀಸ್ (2015), ಸೀಕ್ರೆಟ್ ಮದರ್ (2018), ಐ ವಾನ್ನಾ ಹಿಯರ್ ಯುವರ್ ಸಾಂಗ್ (2019), ಕೆಫೆ ಮಿನಾಮ್ಡಾಂಗ್ (2022) ಮತ್ತು ಇತ್ತೀಚಿನ ಮೈ ಮಿಲಿಟರಿ ವ್ಯಾಲೆಂಟೈನ್ (2024) ನಂತಹ ಶೋಗಳಲ್ಲಿ ಅವರು ಕಾಣಿಸಿಕೊಂಡಿದ್ದಾರೆ. ಐ ವಿಲ್ ಬಿಕಮ್ ರಿಚ್ ಮತ್ತು ಡೆತ್ ಬಿಸಿನೆಸ್ ಸಿನಿಮಾಗಳು ತೆರೆಗೆ ಬರುವ ಮುನ್ನವೇ ಜೇ-ರಿಮ್ ಇಹಲೋಕ ತ್ಯಜಿಸಿದ್ದು, ಅಪಾರ ಅಭಿಮಾನಿಗಳಿಗೆ ಆಘಾತ ತಂದಿದೆ.



## ಕೆನಡಾ ಎರಡು ದೇವಸಾನಗಳಲ್ಲಿ ಭಾರತೀಯ ಕಾನ್ಸುಲರ್ ಶಿಬಿರ ರದ್ದು

**ಟೊರಂಟೊ:** ಕೆನಡಾದ ಗ್ರೇಟರ್ ಟೊರಂಟೊ ಪ್ರದೇಶದಲ್ಲಿರುವ ಎರಡು ಹಿಂದು ದೇವಸ್ಥಾನಗಳು ಈ ವಾರಾಂತ್ಯ ನಿಗದಿಯಾಗಿದ್ದ ಕಾನ್ಸುಲರ್ ಶಿಬಿರಗಳನ್ನು ಭದ್ರತೆಯ ಕಾರಣದಿಂದ ರದ್ದುಗೊಳಿಸಿವೆ. ಟೊರಂಟೋದ ಕಾಲಿ ಬಾರಿ ಮಂದಿರದಲ್ಲಿ ನವೆಂಬರ್ 16 ಮತ್ತು ಬ್ರಾಂಪ್ಟನ್ನ ತ್ರಿವೇಣಿ ಮಂದಿರದಲ್ಲಿ ನವೆಂಬರ್ 17ರಂದು ನಿಗದಿಯಾಗಿದ್ದ ಕಾನ್ಸುಲರ್ ಶಿಬಿರಗಳನ್ನು ರದ್ದುಗೊಳಿಸಲಾಗಿದೆ. ನಿಗದಿತ ದಿನದಂದು ಹಿಂಸಾತ್ಮಕ ಪ್ರತಿಭಟನೆಯ ಅತ್ಯಂತ ಹೆಚ್ಚಿನ ಬೆದರಿಕೆ ಇರುವುದಾಗಿ ಪ್ರಾದೇಶಿಕ ಪೊಲೀಸರು ಮಾಹಿತಿ ನೀಡಿರುವುದರಿಂದ ಈ ಕ್ರಮ ಕೈಗೊಳ್ಳಲಾಗಿದೆ ಎಂದು ದೇವಸ್ಥಾನದ ಆಡಳಿತ ಮಂಡಳಿ ಹೇಳಿದೆ. ಕಾನ್ಸುಲರ್ ಶಿಬಿರದ ಸಂದರ್ಭ ಪ್ರತಿಭಟನೆ ನಡೆಸುವುದಾಗಿ ಖಾಲಿಸ್ತಾನ್ ಪ್ರತ್ಯೇಕತಾವಾದಿ ಗುಂಪು ಸಿಖ್ಸ್ ಫಾರ್ ಜಸ್ಟಿಸ್ ಬೆದರಿಕೆ ಒಡ್ಡಿದೆ.



## ಆರ್‌ಪಿಎಲ್ ಸ್ಟಾಕ್ ಪ್ರಕರಣ; ಸುಪ್ರೀ ಕೋರ್ಟ್‌ನಲ್ಲಿ ಮುಕೇಶ್ ಅಂಬಾನಿಗೆ ನಿರಾಳ

**ನವದೆಹಲಿ:** ರಿಲಯನ್ಸ್ ಇಂಡಸ್ಟ್ರೀಸ್ ಅಧ್ಯಕ್ಷ ಮುಕೇಶ್ ಅಂಬಾನಿ ಮತ್ತು ಇತರ ಎರಡು ಘಟಕಗಳ ಮೇಲೆ ಮಾರುಕಟ್ಟೆ ನಿಯಂತ್ರಕ ವಿಧಿಸಿದ್ದ ದಂಡವನ್ನು ರದ್ದುಗೊಳಿಸಿದ ಸೆಕ್ಯೂರಿಟೀಸ್ ಮೇಲ್ಮನವಿ ನ್ಯಾಯಮಂಡಳಿ ಆದೇಶದ ವಿರುದ್ಧ ಸೆಬಿ ಸಲ್ಲಿಸಿದ್ದ ಮನವಿಯನ್ನು ಸುಪ್ರೀಂ ಕೋರ್ಟ್ ಸೋಮವಾರ ವಜಾಗೊಳಿಸಿದೆ. 2007ರ ನವೆಂಬರ್ ನಲ್ಲಿ ಹಿಂದಿನ ರಿಲಯನ್ಸ್ ಪೆಟ್ರೋಲಿಯಂ ಲಿಮಿಟೆಡ್ (ಖಕಐ)ನ ಷೇರುಗಳಲ್ಲಿ ಕುಶಲ ವ್ಯಾಪಾರ ಮಾಡಿದ ಆರೋಪ ಇತ್ತು. ನ್ಯಾಯಮೂರ್ತಿಗಳಾದ ಜೆ ಬಿ ಪರ್ದಿವಾಲಾ ಮತ್ತು ಆರ್ ಮಹದೇವನ್ ಅವರ ಪೀಠವು ಎಸ್‌ಎಟಿ ನೀಡಿದ ಆದೇಶದಲ್ಲಿ ಮಧ್ಯಪ್ರವೇಶ ಮಾಡಲು ಒಲವು ಹೊಂದಿಲ್ಲ ಎಂದು ಹೇಳಿದೆ.



2023 ರಲ್ಲಿ ಆಕ್ಷೇಪಾರ್ಹ ಆದೇಶವನ್ನು ಅಂಗೀಕರಿಸಲಾಯಿತು, ಅದನ್ನು 2023ನೇ ಇಸವಿಯಲ್ಲಿ ಪ್ರಶ್ನಿಸಲಾಯಿತು ಹಾಗೂ ಒಂದು ವರ್ಷದ ನಂತರ ಈಗ ವಿಷಯವನ್ನು ಪ್ರಸಾರ ಮಾಡಲಾಗುತ್ತಿದೆ. ನಮ್ಮ ಹಸ್ತಕ್ಷೇಪವನ್ನು ಸಮರ್ಥಿಸುವ ಈ ಮೇಲ್ಮನವಿಯಲ್ಲಿ ಕಾನೂನಿನ ಪ್ರಶ್ನೆಯೇ ಇಲ್ಲ. ಇದನ್ನು ವಜಾಗೊಳಿಸಲಾಗಿದೆ. ನೀವು ಅಂತಹ ವ್ಯಕ್ತಿಯನ್ನು ವರ್ಷಗಳವರೆಗೆ ಬೆನ್ನಟ್ಟಲು ಸಾಧ್ಯವಿಲ್ಲ ಎಂದು ಪೀಠ ಹೇಳಿದೆ. ಸೆಬಿಯು ಡಿಸೆಂಬರ್ 4, 2023ರ ಸೆಕ್ಯೂರಿಟೀಸ್ ಮೇಲ್ಮನವಿ ನ್ಯಾಯಮಂಡಳಿಯ (ಎಸ್‌ಎಟಿ) ಆದೇಶದ ವಿರುದ್ಧ ಸುಪ್ರೀಂ ಕೋರ್ಟ್ಗೆ ಅರ್ಜಿ ಸಲ್ಲಿಸಿತ್ತು.2021ರ ಜನವರಿಯಲ್ಲಿ ಸೆಕ್ಯೂರಿಟೀಸ್ ಮತ್ತು ಎಕ್ಸ್ ಚೇಂಜ್ ಬೋರ್ಡ್ ಆಫ್ ಇಂಡಿಯಾ (ಸೆಬಿ) ಜಾರಿಗೊಳಿಸಿದ ಆದೇಶದ ವಿರುದ್ಧ ಎಲ್ಲ ಘಟಕಗಳು ನ್ಯಾಯಮಂಡಳಿಯ ಮುಂದೆ ಮೇಲ್ಮನವಿ ಸಲ್ಲಿಸಿದ ನಂತರ ಎಸ್ ಎಟಿ ತೀರ್ಪು ಬಂದಿದೆ. ಆರ್ ಪಿಎಲ್ ಪ್ರಕರಣದಲ್ಲಿ 2021ರ ಜನವರಿಯಲ್ಲಿ ಸೆಬಿಯು ರಿಲಯನ್ಸ್ ಇಂಡಸ್ಟ್ರೀಸ್ ಲಿಮಿಟೆಡ್ (ಆರ್‌ಐಎಲ್) ಮೇಲೆ 25 ಕೋಟಿ ರೂಪಾಯಿ, ಕಂಪನಿಯ ಅಧ್ಯಕ್ಷ ಮತ್ತು ವ್ಯವಸ್ಥಾಪಕ ನಿರ್ದೇಶಕರಾಗಿರುವ ಅಂಬಾನಿಗೆ ರೂ. 15 ಕೋಟಿ, ನವಿ ಮುಂಬೈ ಎಸ್‌ಇಝಡ್ ಪ್ರೈವೇಟ್ ಲಿಮಿಟೆಡ್ಗೆ ರೂ. 20 ಕೋಟಿ ಮತ್ತು ಮುಂಬೈ ಎಸ್‌ಇಝಡ್ ಹಾಗೂ ಮೇಲೆ ರೂ. 10 ಕೋಟಿ ದಂಡ ವಿಧಿಸಿತು.

ನವಿ ಮುಂಬೈ ಎಸ್ ಇಜೆಡ್ ಮತ್ತು ಮುಂಬೈ ಎಸ್ ಇಜೆಡ್ ಅನ್ನು ಒಮ್ಮೆ ರಿಲಯನ್ಸ್ ಗ್ರೂಪ್ನಲ್ಲಿ ಸೇವೆ ಸಲ್ಲಿಸಿದ ಆನಂದ್ ಜೈನ್ ಅವರು ಪ್ರಚಾರ ಮಾಡಿದ್ದಾರೆ. ಅಂಬಾನಿ, ನವಿ ಮುಂಬೈ ಎಸ್ ಇಜೆಡ್ ಮತ್ತು ಮುಂಬೈ ಎಸ್ ಇಜೆಡ್ ವಿರುದ್ಧ 2021 ರಲ್ಲಿ ನೀಡಲಾದ ಸೆಬಿಯ ಆದೇಶವನ್ನು ನ್ಯಾಯಮಂಡಳಿ ರದ್ದುಗೊಳಿಸಿದೆ. ಒಂದು ವೇಳೆ ನಿಯಂತ್ರಕದಲ್ಲಿ ಠೇವಣಿ ಇಟ್ಟಿದ್ದಲ್ಲಿ ದಂಡದ ಮೊತ್ತವನ್ನು ಹಿಂದಿರುಗಿಸುವಂತೆ ಸೆಬಿಗೆ ನಿರ್ದೇಶನ ನೀಡಿತ್ತು. ಈ ಪ್ರಕರಣವು ನವೆಂಬರ್ 2007 ರಲ್ಲಿ ನಗದು ಮತ್ತು ಭವಿಷ್ಯದ ವಿಭಾಗದಲ್ಲಿ ಆರ್ ಪಿಎಲ್ ಷೇರುಗಳ ಮಾರಾಟ ಮತ್ತು ಖರೀದಿಗೆ ಸಂಬಂಧಿಸಿದೆ. ಮಾರ್ಚ್ 2007ರಲ್ಲಿ ರಿಲಯನ್ಸ್ ನ ನಿರ್ಧಾರವನ್ನು ಅನುಸರಿಸಿ ಆರ್ ಪಿಎಲ್ ನಲ್ಲಿ ಸುಮಾರು ಶೇ 5ರಷ್ಟು ಪಾಲನ್ನು ಮಾರಾಟ ಮಾಡಿತು, ಇದು ಪಟ್ಟಿ ಮಾಡಲಾದ ಅಂಗಸಂಸ್ಥೆಯಾಗಿದ್ದು, ಅದು ನಂತರ 2009ರಲ್ಲಿ ರಿಲಯನ್ಸ್ ನೊಂದಿಗೆ ವಿಲೀನಗೊಂಡಿತು. ಆರ್‌ಐಎಲ್ನ ಮಂಡಳಿಯು ಹೂಡಿಕೆಯನ್ನು ನಿರ್ಧರಿಸಲು ಇಬ್ಬರಿಗೆ ನಿರ್ದಿಷ್ಟವಾಗಿ ಅಧಿಕಾರ ನೀಡಿದೆ ಎಂದು ನ್ಯಾಯಮಂಡಳಿ ಹೇಳಿತ್ತು. ಇದಲ್ಲದೆ, ಕಾರ್ಪೊರೇಟ್ ಸಂಸ್ಥೆಗಳ ಪ್ರತಿಯೊಂದು ಉಲ್ಲಂಘನೆಗೆ ವ್ಯವಸ್ಥಾಪಕ ನಿರ್ದೇಶಕರು ಜವಾಬ್ದಾರರಾಗಿರುತ್ತಾರೆ ಎಂದು ಸೂಚಿಸಲಾಗುವುದಿಲ್ಲ ಎಂದು ಟ್ರಿಬ್ಯೂನಲ್ ಗಮನಿಸಿತು.

## ಆರ್‌ಡಿಎಕ್ಸ್ ಇಟ್ಟು ಅಯೋಧ್ಯೆಯ ರಾಮಮಂದಿರ ಸ್ಫೋಟಿಸುವ ಬೆದರಿಕೆ

**ಲಕ್ನೋ:** ಅಯೋಧ್ಯೆಯಲ್ಲಿರುವ ಶ್ರೀರಾಮ ಜನ್ಮಭೂಮಿ ದೇವಸ್ಥಾನವನ್ನು ಆರ್‌ಡಿಎಕ್ಸ್‌ನೊಂದಿಗೆ ಸ್ಫೋಟಿಸುವ ಮತ್ತು ಬಾಬರಿ ಮಸೀದಿಯನ್ನು ನಿರ್ಮಿಸುವ ಬೆದರಿಕೆಗಳು ಬಂದಿವೆ. ಟ್ರಸ್ಟ್‌ನ ಸಿಎ ಚಂದನ್ ಕುಮಾರ್ ರೈ ರಾಮಜನ್ಮಭೂಮಿ ಪೊಲೀಸ್ ಠಾಣೆಯಲ್ಲಿ ಅಪರಿಚಿತ ವ್ಯಕ್ತಿಯ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.



2024ರ ಆಗಸ್ಟ್ 22 ರಂದು ಶ್ರೀರಾಮ ಜನ್ಮಭೂಮಿ ತೀರ್ಥ ಕ್ಷೇತ್ರ ಟ್ರಸ್ಟ್‌ನ ಹೆಲ್ಪ್ ಡೆಸ್ಕ್ ವಾಟ್ಸಾಪ್‌ಗೆ ಈ ಸಂದೇಶ ಬಂದಿದೆ. ಉರ್ದು ಭಾಷೆಯಲ್ಲಿ ಬರೆದ ಸಂದೇಶದಲ್ಲಿ ರಾಮಜನ್ಮಭೂಮಿ ದೇವಸ್ಥಾನವನ್ನು ನಾಲ್ಕು ಸಾವಿರ ಕಿಲೋ ಆರ್‌ಡಿಎಕ್ಸ್‌ನಿಂದ ಧ್ವಂಸ ಮಾಡುವುದಾಗಿ ಬೆದರಿಕೆ ಹಾಕಲಾಗಿದೆ. ಪ್ರಕರಣದ ತನಿಖೆಯ ವೇಳೆ ಬಿಹಾರ ಪ್ರಾಂತ್ಯದ ಭಾಗಲ್ಪುರ ಜಿಲ್ಲೆಯ ಬಾಬರ್ ಗಂಜ್ ನಿವಾಸಿ ಮೊಹಮ್ಮದ್ ಅಮನ್ ಹೆಸರು ಬೆಳಕಿಗೆ ಬಂದಿದೆ.

ಪ್ರಕರಣ ಬೆನ್ನಲ್ಲೆ ಈ ಹಿನ್ನೆಲೆ ಪ್ರಕರಣದ ತನಿಖೆ ನಡೆಸುತ್ತಿರುವ ಇನ್‌ಸ್ಪೆಕ್ಟರ್ ರಜನೀಶ್ ಕುಮಾರ್ ಪಾಂಡೆ ಅವರಿಗೆ ನ್ಯಾಯಾಲಯ ಸಮನ್ಸ್ ಜಾರಿ ಮಾಡಿದೆ. ಈಗಾಗಲೇ ಜೈಲಿನಲ್ಲಿ ಬಂಧಿತರಾಗಿರುವ ಆರೋಪಿ ಮೊಹಮ್ಮದ್ ಅಮಾನ್ ಜಾಮೀನು ಅರ್ಜಿ ವಿಚಾರಣೆಯ ವೇಳೆ ಹೆಚ್ಚುವರಿ ಸೆಷನ್ಸ್ ನ್ಯಾಯಾಧೀಶ ಅಶೋಕ್ ಕುಮಾರ್ ದುಬೆ ಈ ಆದೇಶ ನೀಡಿದ್ದಾರೆ.

ಘಟನೆಯ ತನಿಖೆ ನಡೆಸುತ್ತಿರುವ ಸಬ್ ಇನ್‌ಸ್ಪೆಕ್ಟರ್ ರಜನೀಶ್ ಕುಮಾರ್ ಪಾಂಡೆ ಅವರಿಗೆ ಮೂಲ ಕೇಸ್ ಡೈರಿ ಮತ್ತು ಅದರ ಎಲ್ಲಾ ನಮೂನೆಗಳೊಂದಿಗೆ ನ್ಯಾಯಾಲಯಕ್ಕೆ ಹಾಜರಾಗುವಂತೆ ನ್ಯಾಯಾಲಯ ಆದೇಶಿಸಿದೆ.

## ವಕ್ಫ್ ಕಾಯಿದೆ ತಿದ್ದುಪಡಿ ತಡೆಯಲು ಯಾರಿಂದಲೂ ಸಾಧ್ಯವಿಲ್ಲ: ಅಮಿತ್ ಶಾ

**ದೆಹಲಿ:** ಕರ್ನಾಟಕದಲ್ಲಿ ವಕ್ಫ್ ಮಂಡಳಿಯು ದೇವಾಲಯಗಳು, ರೈತರು ಮತ್ತು ಬಡವರ ಭೂಮಿ ಕಬಳಿಸುತ್ತಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಮಂಗಳವಾರ ಆರೋಪಿಸಿದ್ದು, ಇದನ್ನು ತಡೆಯಲು ವಕ್ಫ್ ಕಾಯಿದೆ ತಿದ್ದುಪಡಿ ತರುವುದು ಖಚಿತ. ಅದನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ ಎಂದು ಅವರು ಹೇಳಿದರು.

ಜಾರ್ಖಂಡ್ನ ಬಾಘ್ಮಾರಾದಲ್ಲಿ ಚುನಾವಣಾ ರ್ಯಾಲಿಯನ್ನು ಉದ್ದೇಶಿಸಿ ಮಾತನಾಡಿದ ಶಾ ಹೇಳಿದರು.

ನೆರೆಯ ರಾಷ್ಟ್ರಗಳ ನುಸುಳುಕೋರರನ್ನು ನಿಯಂತ್ರಿಸಲು ಅಗತ್ಯವಿರುವ ಏಕರೂಪ ನಾಗರಿಕ ಸಂಹಿತೆ (ಯುಸಿಸಿ) ಅನುಷ್ಠಾನವನ್ನೂ ತಡೆಯಲು ಯಾರಿಗೂ ಸಾಧ್ಯವಿಲ್ಲ ಅವರು ಇದೇ ವೇಳೆ ಹೇಳಿದ್ದಾರೆ. ಅದರೆ ಕಾನೂನಿನ ವ್ಯಾಪ್ತಿಯಿಂದ ಬುಡಕಟ್ಟು ಸಮುದಾಯವನ್ನು ಹೊರಗಿಡಲಾಗುವುದು ಎಂದು ಅವರು ಹೇಳಿದರು. ವಕ್ಫ್ ಮಂಡಳಿಗೆ ಎಲ್ಲರ ಭೂಮಿ ಕಸಿದುಕೊಳ್ಳುವ ಅಭ್ಯಾಸವಿದೆ. ಕರ್ನಾಟಕದಲ್ಲಿ ಮಂಡಳಿಯು ಗ್ರಾಮಸ್ಥರ ಆಸ್ತಿಪಾಸ್ತಿಗಳನ್ನು ನುಂಗಿಹಾಕಿದೆ. ದೇವಾಲಯಗಳು, ರೈತರು ಮತ್ತು ಗ್ರಾಮಸ್ಥರ ಭೂಮಿ ಕಸಿದುಕೊಂಡಿದೆ. ಹೀಗಾಗಿ ವಕ್ಫ್ ಮಂಡಳಿಯಲ್ಲಿ ಬದಲಾವಣೆಗಳ ಅಗತ್ಯವಿದೆ ಎಂಬುದು ಎಲ್ಲರ ಅಭಿಪ್ರಾಯ. ಆದರೆ ಹೇಮಂತ್ ಸೊರೇನ್ ಮತ್ತು ರಾಹುಲ್ ಗಾಂಧಿ ಬೇಡ ಎಂದು ಹೇಳುತ್ತಾರೆ. ಅವರು ಅದನ್ನು ವಿರೋಧಿಸುತ್ತಲೇ ಇರಲಿ. ನಾನು ನಿಮಗೆ ಭರವಸೆ ನೀಡುತ್ತೇನೆ. ವಕ್ಫ್ ಕಾಯ್ದೆಗೆ ತಿದ್ದುಪಡಿ ತರುವ ಮಸೂದೆಯನ್ನು ಬಿಜೆಪಿ ಅಂಗೀಕರಿಸುತ್ತದೆ. ಈ ವಿಚಾರದಲ್ಲಿ ನಮ್ಮನ್ನು ತಡೆಯಲು ಯಾರಿಂದಲೂ ಸಾಧ್ಯವಿಲ್ಲ' ಸವಾಲು ಎಸೆದರು.



## ರಝಾಕರ್‌ಗಳಿಂದ್ಲೇ ಕುಟುಂಬಸ್ಥರ ಹತ್ಯೆಯಾದ್ರೂ ಈ ಕಾರಣಕ್ಕಾಗಿ ಖರ್ಗೆ ಮಾತಾಡ್ತಿಲ್ಲ: ಯೋಗಿ ತಿರುಗೇಟು

**ಮುಂಬೈ:** ರಝಾಕರ್‌ಗಳಿಂದಲೇ ತನ್ನ ಕುಟುಂಬದವರ ಹತ್ಯೆ ನಡೆದಿದ್ದರೂ ಮುಸ್ಲಿಮರ ವೋಟ್ ಬ್ಯಾಂಕ್ಗಾಗಿ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಯವರು ಏನೂ ಮಾತನಾಡುತ್ತಿಲ್ಲ ಎಂದು ಉತ್ತರ ಪ್ರದೇಶ ಸಿಎಂ ಯೋಗಿ ಆದಿತ್ಯನಾಥ್ ತಿರುಗೇಟು ನೀಡಿದ್ದಾರೆ. ಮಹಾರಾಷ್ಟ್ರ ವಿಧಾನಸಭಾ ಚುನಾವಣೆ ಹಿನ್ನೆಲೆಯಲ್ಲಿ ಇಂದು ಅಚಲಪುರದಲ್ಲಿ ನಡೆದ ಬಿಜೆಪಿ ಪ್ರಚಾರ ಸಭೆಯಲ್ಲಿ ಅವರು ಮಾತನಾಡುತ್ತಾ ಕಾಂಗ್ರೆಸ್ ವಿರುದ್ಧ ವಾಗ್ದಾಳಿ ನಡೆಸಿದರು. ಖರ್ಗೆಯವರು ಇತ್ತೀಚಿನ ದಿನಗಳಲ್ಲಿ ನನ್ನ ಮೇಲೆ ಅನಗತ್ಯವಾಗಿ ಕೋಪ ಮಾಡಿಕೊಳ್ಳುತ್ತಿದ್ದಾರೆ. ಆದರೆ ನಾನು ಅವರ ವಯಸ್ಸನ್ನು ಗೌರವಿಸುತ್ತೇನೆ. ಖರ್ಗೆ ಜೀ, ನನ್ನ ಮೇಲೆ ಸಿಟ್ಟು ಮಾಡಿಕೊಳ್ಳಬೇಡಿ? ನಿಮಗೆ ಸಿಟ್ಟು ಮಾಡಿಕೊಳ್ಳಬೇಕಾದರೆ ಹೈದರಾಬಾದ್ ನಿಜಾಮನ ಮೇಲೆ ಸಿಟ್ಟು ಮಾಡಿಕೊಳ್ಳಿ ಎಂದರು.ಖರ್ಗೆಯವರ ಗ್ರಾಮವಾದ ವಾರ್ವಟ್ಟಿ ಹೈದರಾಬಾದ್ನ ನಿಜಾಮರ ಆಳ್ವಿಕೆಗೆ ಒಳಪಟ್ಟ ಸಮಯದಲ್ಲಿ ಬ್ರಿಟಿಷರು ರಾಷ್ಟ್ರವನ್ನು ವಿಭಜಿಸಲು ಮುಸ್ಲಿಂ ಲೀಗ್ ಅನ್ನು ಪ್ರೋತ್ಸಾಹಿಸಿದರು. ಅದಕ್ಕೆ ಕಾಂಗ್ರೆಸ್ ನಾಯಕತ್ವವು ತಲೆಬಾಗಿತು. ಸ್ವಾತಂತ್ರ್ಯದ ನಂತರ ನಿಜಾಮರಿಗೆ ಅಧಿಕಾರ ಕಳೆದುಕೊಳ್ಳುವ ಭೀತಿ ಎದುರಾಗಿದ್ದು, ಹಿಂಸಾಚಾರ ಆರಂಭವಾಯಿತು. 1948 ರಲ್ಲಿ ನಿಜಾಮರು ನಿಮ್ಮ ಗ್ರಾಮವನ್ನು ಸುಟ್ಟುಹಾಕಿದರು. ಹಿಂದೂಗಳನ್ನು ಬರ್ಬರವಾಗಿ ಕೊಂದರು ಮತ್ತು ನಿಮ್ಮ ತಾಯಿ, ಸಹೋದರಿ, ನಿಮ್ಮ ಕುಟುಂಬದ ಸದಸ್ಯರನ್ನು ಸುಟ್ಟುಹಾಕಿದರು. ಈ ವಿಚಾರ ಖರ್ಗೆ ಅವರಿಗೆ ಗೊತ್ತಿದ್ದರೂ ಬಹಿರಂಗವಾಗಿ ಅವರು ಹೇಳಿಕೆ ನೀಡುತ್ತಿಲ್ಲ ಎಂದರು.

## ಶೇಖ್ ಹಸೀನಾ ಬಂಧನಕ್ಕೆ ರೆಡ್ ನೋಟೀಸ್: ಇಂಟರ್‌ಪೋಲ್ ಸಹಾಯ ಕೇಳಿದ ಬಾಂಗ್ಲಾದೇಶ!

**ಬಾಂಗ್ಲಾದೇಶ:** ಬಾಂಗ್ಲಾದೇಶದ ಮಾಜಿ ಪ್ರಧಾನಿ ಶೇಖ್ ಹಸೀನಾ ಬಂಧನಕ್ಕೆ ರೆಡ್ ನೋಟೀಸ್ ಜಾರಿ ಮಾಡುವಂತೆ ಬಾಂಗ್ಲಾದೇಶದ ವಿಶೇಷ ನ್ಯಾಯಮಂಡಳಿ ಅಂತಾರಾಷ್ಟ್ರೀಯ ಪೊಲೀಸ್ ಸಂಸ್ಥೆ ಇಂಟರ್‌ಪೋಲ್ಗೆ ಮಂಗಳವಾರ ಸೂಚಿಸಿದೆ.



ಶೇಖ್ ಹಸೀನಾ ತನ್ನ ಆಪ್ತ ಸಹಾಯಕರು ಮತ್ತು ಮಾಜಿ ಸಚಿವರೊಂದಿಗೆ ಆಗಸ್ಟ್ 5 ರಂದು ಭಾರತಕ್ಕೆ ಪಲಾಯನ ಮಾಡುವ ಮೂಲಕ ಅವರ 15 ವರ್ಷಗಳ ಆಡಳಿತ ಅಂತ್ಯಗೊಂಡಿತ್ತು.

ನೊಬೆಲ್ ಶಾಂತಿ ಪ್ರಶಸ್ತಿ ವಿಜೇತ ಮೊಹಮ್ಮದ್ ಯೂನಸ್ ಅವರು ಆಗಸ್ಟ್ 8 ರಂದು ದಕ್ಷಿಣ ಏಷ್ಯಾ ರಾಷ್ಟ್ರದ ಹಂಗಾಮಿ ನಾಯಕರಾಗಿ ಅಧಿಕಾರ ವಹಿಸಿಕೊಂಡರು.

ಇದೀಗ ಬಿ.ಎಂ. ಹಸೀನಾ ಮತ್ತು ಇತರರ ಬಂಧನದಲ್ಲಿ ಫ್ರಾನ್ಸ್ ಮೂಲದ ಸಂಸ್ಥೆಯಿಂದ ನೆರವು ಕೋರಿ ಪೊಲೀಸ್ ಮುಖ್ಯಸ್ಥರ ಮೂಲಕ ಇಂಟರ್‌ಪೋಲ್ಗೆ ಪತ್ರ ಬರೆದಿದ್ದೇವೆ ಎಂದು ನ್ಯಾಯಮಂಡಳಿಯ ಪ್ರಾಸಿಕ್ಯೂಟರ್ ಸುಲ್ತಾನ್ ಮಹಮೂದ್ ಅಸೋಸಿಯೇಟೆಡ್ ಪ್ರೆಸ್ಗೆ ತಿಳಿಸಿದ್ದಾರೆ.

ಯೂನಸ್ ನೇತೃತ್ವದ ಸರ್ಕಾರವು ಹಸೀನಾರನ್ನು ವಿಚಾರಣೆಗೆ ಒಳಪಡಿಸುವುದಾಗಿ ಹೇಳಿದ್ದು, ಅವರನ್ನು ಭಾರತದಿಂದ ಹಸ್ತಾಂತರಿಸಲು ಪ್ರಯತ್ನಿಸುವುದಾಗಿ ಹೇಳಿದೆ. ಈ ಹಿಂದೆ, ಬಾಂಗ್ಲಾದೇಶದ ಅಧಿಕಾರಿಗಳು ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರನ್ನು ಭಾರತದಿಂದ ಹಸ್ತಾಂತರಿಸಲು ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳುವುದಾಗಿ ಹೇಳಿದ್ದರು.

ಬಾಂಗ್ಲಾದೇಶದ ನ್ಯಾಯಮಂಡಳಿ, ದೇಶಭ್ರಷ್ಟ ಮಾಜಿ ನಾಯಕಿ ಶೇಖ್ ಹಸೀನಾಗೆ ಬಂಧನ ವಾರಂಟ್ ನ್ನು ಸಹ ಆದೇಶಿಸಿದೆ.

## ಪಾಕಿಸ್ತಾನ: ವಾಯುಮಾಲಿನ್ಯದ ಹಿನ್ನೆಲೆಯಲ್ಲಿ ರಸ್ತೆಯಲ್ಲಿ ಜನರ ಸಂಚಾರಕ್ಕೆ ನಿರ್ಬಂಧ

**ಪಾಕಿಸ್ತಾನ:** ಪಾಕಿಸ್ತಾನದಲ್ಲಿ ದಿನೇ ದಿನೇ ವಾಯುಮಾಲಿನ್ಯ ಹೆಚ್ಚಾಗುತ್ತಿದೆ. ಈ ಕಾರಣದಿಂದಾಗಿ ಜನ ಸಾಕಷ್ಟು ಆರೋಗ್ಯ ಸಮಸ್ಯೆಗಳಿಂದ ಬಳುತ್ತಿದ್ದಾರೆ. ಹೀಗಾಗಿ, ಸರ್ಕಾರ ಜನರ ಓಡಾಟಕ್ಕೆ ಬ್ರೇಕ್ ಹಾಕಿದ್ದು ಪಾಕಿಸ್ತಾನದ ಪಂಜಾಬ್ ಪ್ರಾಂತ್ಯವು ಹೆಚ್ಚಿನ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಿದೆ.



ತೀವ್ರವಾದ ವಾಯುಮಾಲಿನ್ಯದಿಂದ ಉಂಟಾಗುವ ಕಾಯಿಲೆಗಳನ್ನು ನಿಗ್ರಹಿಸಲು ಸೋಮವಾರದಿಂದ ಕೆಲವು ಪ್ರದೇಶಗಳಲ್ಲಿ ಅಂಗಡಿಗಳು, ಮಾರುಕಟ್ಟೆಗಳು ಮತ್ತು ಮಾಲ್ಗಳನ್ನು ಮುಚ್ಚಲು ಆದೇಶಿಸಲಾಗಿದೆ ಜನರು ಹೊರಗಡೆ ಹೆಚ್ಚು ಓಡಾಡದಂತೆ ಕ್ರಮ ವಹಿಸಲಾಗಿದೆ. ವಾಯು ಗುಣಮಟ್ಟದಲ್ಲಿ ವಿಶ್ವದ ಅತ್ಯಂತ ಕಲುಷಿತ ನಗರವಾದ ಲಾಹೋರ್ ಸೇರಿದಂತೆ ವಿವಿಧ ಸ್ಥಳಗಳಲ್ಲಿ ನ.17 ರ ವರೆಗೆ ಶಿಕ್ಷಣ ಸಂಸ್ಥೆಗಳು ಮತ್ತು ಉದ್ಯಾನಗಳು ಮತ್ತು ಪ್ರಾಣಿಸಂಗ್ರಹಾಲಯಗಳಂತಹ ಸಾರ್ವಜನಿಕ ಸ್ಥಳಗಳನ್ನು ಮುಚ್ಚಲಾಗಿದೆ. ಲಾಹೋರ್, ಮುಲ್ತಾನ್, ಫೈಸಲಾಬಾದ್ ಮತ್ತು ಗುಜ್ರಾನ್ವಾಲಾ ಜಿಲ್ಲೆಗಳಲ್ಲಿ ಉಸಿರಾಟದ ಕಾಯಿಲೆಗಳು, ಕಣ್ಣು ಮತ್ತು ಗಂಟಲಿನ ಕಿರಿಕಿರಿ ಮತ್ತು ಗುಲಾಬಿ ಕಣ್ಣಿನ ಕಾಯಿಲೆಯ ರೋಗಿಗಳ ಸಂಖ್ಯೆ ಹೆಚ್ಚುತ್ತಿರುವುದು ಆತಂಕ ಮೂಡಿಸಿದೆ. ಕ್ರೀಡಾ ಕಾರ್ಯಕ್ರಮಗಳು, ಪ್ರದರ್ಶನಗಳು, ಉತ್ಸವಗಳು ಮತ್ತು ರೆಸ್ಟೋರೆಂಟ್ಗಳಲ್ಲಿ ಊಟ ಸೇರಿದಂತೆ ಹೊರಾಂಗಣ ಚಟುವಟಿಕೆಗಳನ್ನು ನಿಷೇಧಿಸಲಾಗಿದೆ. ಅನಿವಾರ್ಯ ಧಾರ್ಮಿಕ ಕಾರ್ಯಗಳಿಗೆ ಮಾತ್ರ ವಿನಾಯಿತಿ ನೀಡಲಾಗಿದೆ.

## ಚೆಕ್ ಬೌನ್ಸ್ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು

**ನವದೆಹಲಿ:** ಇಂದಿನ ಜಗತ್ತಿನಲ್ಲಿ ಹೆಚ್ಚಿನ ಜನರು ಡಿಜಿಟಲ್ ವಿಧಾನಗಳ ಮೂಲಕ ಹಣದ ವಹಿವಾಟು ನಡೆಸುತ್ತಿದ್ದಾರೆ, ಆದರೆ ಇನ್ನೂ ಅನೇಕ ಜನರು ಚೆಕ್ ಮೂಲಕ ದೊಡ್ಡ ಮೊತ್ತದ ಪಾವತಿ ಅಥವಾ ವಹಿವಾಟುಗಳನ್ನು ಮಾಡುತ್ತಾರೆ.



ಚೆಕ್ ಬೌನ್ಸ್ ಸಮಸ್ಯೆ ಸಾಕಷ್ಟು ಸಾಮಾನ್ಯವಾಗಿದೆ, ಇದರಲ್ಲಿ ಚೆಕ್ ಅನ್ನು ನಗದು ಮಾಡಲಾಗುವುದಿಲ್ಲ.

ಇತ್ತೀಚೆಗಷ್ಟೇ ಸುಪ್ರೀಂ ಕೋರ್ಟ್ ಮಹತ್ವದ ತೀರ್ಪು ನೀಡಿದ್ದು, ಹಳೆಯ ಚೆಕ್ ಬೌನ್ಸ್ ಪ್ರಕರಣದಲ್ಲಿ ಹೈಕೋರ್ಟ್ ತೀರ್ಪನ್ನು ರದ್ದುಗೊಳಿಸಿದೆ. ಚೆಕ್ ಬೌನ್ಸ್ಗೆ ಸಂಬಂಧಿಸಿದ ವಿಷಯಗಳ ಮೇಲೆ ಈ ನಿರ್ಧಾರವು ದೊಡ್ಡ ಪರಿಣಾಮವನ್ನು ಬೀರಬಹುದು, ಆದ್ದರಿಂದ ಅದನ್ನು ಅರ್ಥಮಾಡಿಕೊಳ್ಳುವುದು ಮುಖ್ಯವಾಗಿದೆ.

ಚೆಕ್ ಬೌನ್ಸ್ ಪ್ರಕರಣವು ಭಾರತದಲ್ಲಿ ಅಪರಾಧದ ವರ್ಗದಲ್ಲಿ ಬರುತ್ತದೆ ಮತ್ತು ಅದಕ್ಕೆ ಕಠಿಣ ಶಿಕ್ಷೆಯ ನಿಬಂಧನೆ ಇದೆ. ಒಬ್ಬ ವ್ಯಕ್ತಿಯು ಯಾರಿಗಾದರೂ ಚೆಕ್ ಅನ್ನು ನೀಡಿದರೆ ಮತ್ತು ಆ ಚೆಕ್ ಬ್ಯಾಂಕಿನಲ್ಲಿ ಬೌನ್ಸ್ ಆಗಿದ್ದರೆ, ಅದು ವ್ಯಕ್ತಿಯ ಮೇಲಿನ ನಂಬಿಕೆಯನ್ನು ಮುರಿಯುವುದಕ್ಕೆ ಸಮಾನವೆಂದು ಪರಿಗಣಿಸಲಾಗುತ್ತದೆ. ಚೆಕ್ ಬೌನ್ಸ್ ಆಗಿದ್ದಲ್ಲಿ ದೂರುದಾರರು ಆರೋಪಿಯ ವಿರುದ್ಧ ನ್ಯಾಯಾಲಯದಲ್ಲಿ ಮೊಕದ್ದಮೆ ಹೂಡಬಹುದು, ಇದು ಹಣಕಾಸಿನ ದಂಡ ಹಾಗೂ ಆರೋಪಿಗೆ ಜೈಲು ಶಿಕ್ಷೆ ವಿಧಿಸಬಹುದು.

ಇತ್ತೀಚೆಗೆ, ಚೆಕ್ ಬೌನ್ಸ್ ಪ್ರಕರಣಗಳಲ್ಲಿ ಹೆಚ್ಚುತ್ತಿರುವ ಬಾಕಿ ಪ್ರಕರಣಗಳ ಬಗ್ಗೆ ಸುಪ್ರೀಂ ಕೋರ್ಟ್ ಕಳವಳ ವ್ಯಕ್ತಪಡಿಸಿದೆ. ಎರಡೂ ಪಕ್ಷಗಳು ರಾಜಿ ಮಾಡಿಕೊಳ್ಳಲು ಸಿದ್ಧರಿದ್ದರೆ, ಪ್ರಕರಣಗಳನ್ನು ತ್ವರಿತವಾಗಿ ವಿಲೇವಾರಿ ಮಾಡಲು ನ್ಯಾಯಾಲಯವು ಅಂತಹ ರಾಜಿಗಳನ್ನು ಪ್ರೋತ್ಸಾಹಿಸಬೇಕು ಎಂದು ನ್ಯಾಯಾಲಯ ನಂಬುತ್ತದೆ.

## ಇಸ್ರೇಲ್ ದಾಳಿಯಲ್ಲಿ 14 ಫೆಲೆಸ್ತೀನೀಯರ ಮೃತ್ಯು

**ಗಾಝಾ:** ಗಾಝಾದಲ್ಲಿ ಇಸ್ರೇಲ್ ನಡೆಸಿದ ಎರಡು ವೈಮಾನಿಕ ದಾಳಿಯಲ್ಲಿ ಇಬ್ಬರು ಮಕ್ಕಳು, ಮಹಿಳೆ ಸೇರಿದಂತೆ ಕನಿಷ್ಠ 14 ಫೆಲೆಸ್ತೀನೀಯರು ಮೃತಪಟ್ಟಿದ್ದು 14ಕ್ಕೂ ಹೆಚ್ಚು ಮಂದಿ ಗಾಯಗೊಂಡಿರುವುದಾಗಿ ಫೆಲೆಸ್ತೀನ್ನ ಆರೋಗ್ಯ ಇಲಾಖೆ ಹೇಳಿದೆ.

ಗಾಝಾದ ಮುವಾಸಿ ನಗರದಲ್ಲಿ ಸ್ಥಳಾಂತರಿಸಲ್ಪಟ್ಟವರಿಗಾಗಿ ನಿರ್ಮಿಸಿರುವ ತಾತ್ಕಾಲಿಕ ಕ್ಯಾಂಟೀನ್ ಮೇಲೆ ಸೋಮವಾರ ತಡರಾತ್ರಿ ನಡೆದ ದಾಳಿಯಲ್ಲಿ ಇಬ್ಬರು ಮಕ್ಕಳ ಸಹಿತ ಕನಿಷ್ಠ 11 ಮಂದಿ ಮೃತಪಟ್ಟಿದ್ದು ಹಲವರು ಗಾಯಗೊಂಡಿದ್ದಾರೆ.

ಕ್ಯಾಂಟೀನ್ನ ಮೇಜುಗಳಡಿ ಗಾಯಗೊಂಡು ಬಿದ್ದವರನ್ನು ಆಸ್ಪತ್ರೆಗೆ ಸ್ಥಳಾಂತರಿಸುವ ವೀಡಿಯೊಗಳು ಸಾಮಾಜಿಕ ಮಾಧ್ಯಮದಲ್ಲಿ ಪ್ರಸಾರವಾಗಿವೆ. ಮಂಗಳವಾರ ಬೆಳಿಗ್ಗೆ ಮಧ್ಯ ಗಾಝಾದ ನುಸೀರಾತ್ ನಿರಾಶ್ರಿತರ ಶಿಬಿರದ ಮನೆಯೊಂದನ್ನು ಗುರಿಯಾಗಿಸಿ ನಡೆದ ದಾಳಿಯಲ್ಲಿ ಮಹಿಳೆಯ ಸಹಿತ ಮೂವರು ಸಾವನ್ನಪ್ಪಿದ್ದು 11ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ ಎಂದು ಸ್ಥಳೀಯ ಆಸ್ಪತ್ರೆಯ ಮೂಲಗಳು ಹೇಳಿವೆ. ಈ ಮಧ್ಯೆ, ಉತ್ತರ ಗಾಝಾ ಪಟ್ಟಿಯಲ್ಲಿ ಭೂ ಕಾರ್ಯಾಚರಣೆ ಸಂದರ್ಭ ತನ್ನ ನಾಲ್ವರು ಸೈನಿಕರು ಹತರಾಗಿದ್ದಾರೆ ಎಂದು ಇಸ್ರೇಲಿ ಸೇನೆ ಮಂಗಳವಾರ ಹೇಳಿದೆ.

ಉತ್ತರ ಗಾಝಾ ಪಟ್ಟಿಯಲ್ಲಿ ಸೋಮವಾರ ನಡೆದ ಹೋರಾಟದ ಸಂದರ್ಭ ನಾಲ್ವರು ಯೋಧರು ಹತರಾಗಿದ್ದು ಇದರೊಂದಿಗೆ ಕಳೆದ ವರ್ಷದ ಅಕ್ಟೋಬರ್ನಲ್ಲಿ ಫೆಲೆಸ್ತೀನಿಯನ್ ಪ್ರದೇಶದಲ್ಲಿ ಭೂ ಕಾರ್ಯಾಚರಣೆ ಆರಂಭಗೊಂಡಂದಿನಿಂದ ಮೃತಪಟ್ಟ ಇಸ್ರೇಲ್ ಸೈನಿಕರ ಸಂಖ್ಯೆ 376ಕ್ಕೆ ತಲುಪಿದೆ ಎಂದು ಹೇಳಿಕೆ ತಿಳಿಸಿದೆ.



Postal Registration No.KA/BGW-1823/2019-2021, Posted at Patrika Channel, RMS Bhavan, Bengaluru PSO, Mysore Road, Bengaluru- 560020, RNI No.KARKAN/2002/08054

# ಅವನು ಸಂಜು ಅವಳು ಗೀತಾ: 'ಸಂಜು ಮತ್ತು ಗೀತಾ 2' ಸಾಂಗ್ ರಿಲೀಸ್



ಪವಿತ್ರ ಇಂಟರ್‌ನ್ಯಾಷನಲ್ ಮೂವೀಮೇಕರ್ಸ್ ಅಡಿಯಲ್ಲಿ ಛಲವಾದಿ ಕುಮಾರ್ ಅವರ ನಿರ್ಮಾಣದ, ನಾಗಶೇಖರ್ ಅವರ ನಿರ್ದೇಶನದ ಈ ವರ್ಷದ ಬಹುನಿರೀಕ್ಷಿತ ಚಿತ್ರ ಸಂಜು ವೆಡ್ಸ್ ಗೀತಾ-2. ನಾಗಶೇಖರ್ ಅವರ ಹುಟ್ಟುಹಬ್ಬದ ಪ್ರಯುಕ್ತ ಈ ಚಿತ್ರದ 'ಅವನು ಸಂಜು ಅವಳು ಗೀತಾ ಅವರಿಬ್ಬರು ಸೇರಲು ಸಂಗೀತ' ಎಂಬ ಹಾಡಿನ ಬಿಡುಗಡೆ ಕಾರ್ಯಕ್ರಮ ಅದ್ದೂರಿಯಾಗಿ ನೆರವೇರಿತು.ಅಲ್ಲಿ ನಟ ಉಪೇಂದ್ರ, ಫಿಲಂ ಚೇಂಬರ್ ಅಧ್ಯಕ್ಷ ಎನ್.ಎಂ.ಸುರೇಶ್, ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್ ಕೂಡ ಹಾಜರಿದ್ದರು. ಕವಿರಾಜ್ ಅವರ ಸಾಹಿತ್ಯ ರಚನೆಯ ಈ ಹಾಡಿಗೆ ಶ್ರೀಧರ್ ವಿ.ಸಂಭ್ರಮ್ ಅದ್ಭುತವಾದ ಟ್ಯೂನ್ ಹಾಕಿದ್ದಾರೆ.

ಈ ಸಂದರ್ಭದಲ್ಲಿ ಮಾತನಾಡಿದ ನಿರ್ದೇಶಕ ನಾಗಶೇಖರ್ ನಾನು ಈ ಸಿನಿಮಾ ಮಾಡಬೇಕೆಂದು ನಿರ್ಧರಿಸಿದಾಗ ಮೊದಲು ಹಾಡುಗಳನ್ನು ರೆಡಿ ಮಾಡಿಕೊಳ್ಳಬೇಕಾಗಿತ್ತು. ಒಟ್ಟು 6 ಸುಂದರ ಹಾಡುಗಳು ಚಿತ್ರದಲ್ಲಿದ್ದು, ಈ ಹಾಡಿನಲ್ಲಿ ಒಬ್ಬ ಸೈನಿಕನ ಪ್ರೇಮಕಥೆಯನ್ನು ಹೇಳಿದ್ದೇನೆ. ಸ್ವಿಟ್ಜರ್ ಲ್ಯಾಂಡ್ ಸೈನಿಕನೊಬ್ಬ ತನ್ನ ರಾಣಿ ಸೆಲ್ವಿಕ್ ಳನ್ನು ತನ್ನ ಹೃದಯದಲ್ಲಿಟ್ಟುಕೊಂಡು ಪ್ರೀತಿ ಮಾಡ್ತಿರ್ತಾನೆ. ಆತನಿಗೆ ತನ್ನ ಪ್ರೀತಿಯನ್ನು ಹೇಳಿಕೊಳ್ಳಲಿಕ್ಕೆ ಆಗ್ತಿರಲಿಲ್ಲ, ಏಕೆಂದರೆ ಆಕೆ ಮಹಾರಾಣಿ. ಆತನದು ಒನ್ ವೇ ಲವ್, ಒಮ್ಮೆ ಜರ್ಮನ್ ಸೈನಿಕರು ಸ್ವಿಟ್ಜರ್ ಲ್ಯಾಂಡ್ ಮೇಲೆ ಅಟ್ಯಾಕ್ ಮಾಡ್ತಾರೆ. ಆಗ ವೀರಾವೇಶದಿಂದ ಹೋರಾಡಿದ ಆ ಸೈನಿಕ ಅವರನ್ನು ಸೋಲಿಸಿ ವೀರಮರಣವನ್ನಪ್ಪುತ್ತಾನೆ, ತನ್ನ ರಾಣಿಗೆ ಆಕೆಯ ಕಿರೀಟವನ್ನು ಮತ್ತೆ ತಂದುಕೊಡುತ್ತಾನೆ. ಸಾಯೋ ಸಮಯದಲ್ಲಿ ಆತ ರಾಣಿಗೆ ತನ್ನ ರಕ್ತದಲ್ಲಿ ''ಐ ಲವ್ ಯು ಫಾರೆವರ್'' ಅಂತ ಒಂದು ಪತ್ರ ಬರೆಯುತ್ತಾನೆ. ಈ ಹಾಡು ಚಿತ್ರಕಥೆಯಲ್ಲಿ ಬಹಳ ಮುಖ್ಯವಾದ ಭಾಗವಾಗಿರುತ್ತದೆ. ಈ ಸಾಂಗ್ ನಲ್ಲಿ ಮೊದಲಬಾರಿಗೆ ಆಕ್ಷನ್ ಇಟ್ಟಿದ್ದೇನೆ ಎಂದು ಹೇಳಿದರು.

ಶ್ರೀಧರ್ ವಿ.ಸಂಭ್ರಮ್ ಮಾತನಾಡಿ ನಾಗಶೇಖರ್ ಅವರು ಈ ಥರದ ಕಥೆ ಇದೆ ಎಂದಾಗ ಖುಷಿಯಾಯ್ತು. ಅವರುಸುಲಭವಾಗಿ ಟ್ಯೂನ್ ಒಪ್ಪುವವರಲ್ಲ, ಆದರೆ ಈ ನಾನು ಈ ಟ್ಯೂನ್ ಕೊಟ್ಟ ಕೂಡಲೇ ಒಪ್ಪಿದರು. ಎಲ್ಲಾ ಹಾಡುಗಳು ಕಥೆಗೆ ಪೂರಕವಾಗಿ ಮೂಡಿಬಂದಿವೆ ಎಂದರು. ಸಾಹಿತಿ ಕವಿರಾಜ್ ಮಾತನಾಡಿ ಇದು ಸಿನಿಮಾ ಕೆಲಸ ಅನಿಸೋದೇ ಇಲ್ಲ. ನಮಗೆ ಅಷ್ಟು ಫ್ರೀಡಂ ಕೊಟ್ಟಿರ್ತಾರೆ. ನಾಗಶೇಖರ್ ಸಿನಿಮಾಗೆ ಹಾಡುಗಳನ್ನು ಬರೀಬೇಕಾದ್ರೆ ತಾನಾಗೇ ಒಳ್ಳೊಳ್ಳೆ ಪದಗಳು ಹುಟ್ಟಿಕೊಳ್ಳುತ್ತವೆ. ನಿರ್ದೇಶಕರು ನಮಗೆಲ್ಲ ಒಂದು ರೆಸಾರ್ಟ್ ಬುಕ್ ಮಾಡಿ ಲಿರಿಕ್ ಬರೆಯಲು ಹೇಳಿದ್ದರು, ಈ ಚಿತ್ರದ ಸಾಂಗ್ ಬರೆಯಲು ಹೋದಾಗ ಏನೋ ಹೊಸ ಸ್ಫೂರ್ತಿ ಬರುತ್ತದೆ ಎಂದು ಹೇಳಿದರು.

ನಟ ಉಪೇಂದ್ರ ಮಾತನಾಡಿ ನನಗೆ ಮೊದಲು ಈ ಚಿತ್ರದ ಕ್ಲೈಮ್ಯಾಕ್ಸ್ ಏನು ಅಂತ ಗೊತ್ತಾಯ್ತು.ನಾನು ಅವತ್ತೇ ಹೇಳಿದೆ ಈ ಸಿನಿಮಾ ಸೂಪರ್ ಸಕ್ಸಸ್ ಅಂತ. ಈಗ ಈ ಹಾಡನ್ನು ನೋಡಿದಾಗ ಡಿಸೈಡ್ ಮಾಡಿದೆ. 100% ಹಿಟ್ ಆಗುತ್ತೆ ಎಂದು ಕಾನ್ಫಿಡೆಂಟಾಗಿ ಹೇಳಿದರು. ನಿರ್ಮಾಪಕ ಛಲವಾದಿ ಕುಮಾರ್, ಮಾತನಾಡುತ್ತ ಸಿನಿಮಾ ತುಂಬಾ ಚೆನ್ನಾಗಿ ಮೂಡಿಬಂದಿದೆ. ಮುಂದಿನ ತಿಂಗಳು ಬಿಡುಗಡೆಯಾಗುತ್ತಿದೆ. ಖಂಡಿತ ಹಿಟ್ ಆಗುತ್ತೆ ಎಂಬ ಬಂಬಿಕೆಯಿದೆ ಎಂದರು. ನಾಯಕಿ ರಚಿತಾರಾಮ್ ಶೂಟಿಂಗ್ ನಲ್ಲಿದ್ದುದರಿಂದ ಬಂದಿರಲಿಲ್ಲ.



# 'ಅಮರನ್' ಚಿತ್ರದ ಅಬ್ಬರ ಶಿವಕಾರ್ತಿಕೇಯನ್, ಸಾಯಿ ಪಲ್ಲವಿ

ತಮಿಳು ನಟ ಶಿವ ಕಾರ್ತಿಕೇಯನ್ ಹಾಗೂ ನಟಿ ಸಾಯಿ ಪಲ್ಲವಿ ನಟನೆಯ 'ಅಮರನ್' ಸಿನಿಮಾ ಭರ್ಜರಿ ಪ್ರದರ್ಶನ ಕಾಣುತ್ತಿದೆ. ಬಾಕ್ಸಾಫೀಸ್ ನಲ್ಲೂ ಗಳಿಕೆಯಲ್ಲಿ ಸಖತ್ ಸದ್ದು ಮಾಡ್ತಿದೆ. ಹುತಾತ್ಮರಾದ ಭಾರತೀಯ ಸೇನಾ ಅಧಿಕಾರಿ ಮೇಜರ್ ಮುಕುಂದ್ ವರದರಾಜನ್ ಅವರ ಸ್ಫೂರ್ತಿದಾಯಕ ಕಥೆ ಹೇಳುವ ಬಹುನಿರೀಕ್ಷಿತ ಬಯೋಪಿಕ್‌ಗೆ ಉತ್ತಮ ರೆಸ್ಪಾನ್ಸ್ ಸಿಕ್ಕಿದೆ. ಅಕ್ಟೋಬರ್ 31ರಂದು ತೆರೆಕಂಡ 'ಅಮರನ್ ಸಿನಿಮಾ' ಎಲ್ಲಾ ಕಡೆಗಳಿಂದಲೂ ಮೆಚ್ಚುಗೆಗೆ ಪಾತ್ರವಾಗಿದೆ.

ಸೋನಿ ಪಿಕ್ಚರ್ಸ್ ಸಹಯೋಗದಲ್ಲಿ ನಟ ಕಮಲ್ ಹಾಸನ್ ಅವರ ರಾಜಕಮಲ್ ಫಿಲ್ಮ್ಸ್ ಇಂಟನ್ಯಾಷನಲ್ ಈ ಚಿತ್ರವನ್ನು ನಿರ್ಮಿಸಿದೆ. ಚಿತ್ರದಲ್ಲಿ ಶಿವಕಾರ್ತಿಕೇಯನ್ ಸೇನಾ ಯೋಧನ ಪಾತ್ರದಲ್ಲಿ ಕಾಣಿಸಿಕೊಂಡಿದ್ದಾರೆ. ನಟಿ ಸಾಯಿ ಪಲ್ಲವಿ ಅದ್ಭುತವಾಗಿ ನಟಿಸಿದ್ದಾರೆ. ಈ ಚಿತ್ರಕ್ಕೆ ಮ್ಯೂಸಿಕ್ ಡೈರೆಕ್ಟರ್ ಜಿವಿ ಪ್ರಕಾಶ್ ಕುಮಾರ್ ಸಂಗೀತ ನೀಡಿದ್ದಾರೆ.

ಈ ಚಿತ್ರವು ದಿವಂಗತ ಸೇನಾ ಮೇಜರ್ ಮುಕುಂದ್ ವರದರಾಜನ್ ಅವರ ಜೀವನವನ್ನು ಆಧರಿಸಿದೆ. ಶಿವಕಾರ್ತಿಕೇಯನ್ ಅವರು ಮೇಜರ್ ಮುಕುಂದ್ ಪಾತ್ರದಲ್ಲಿ ಕಾಣಿಸಿಕೊಂಡ್ರೆ. ಪತ್ನಿ ಇಂದೂ ರೆಬೆಕಾ ವರ್ಗೀಸ್ ಪಾತ್ರದಲ್ಲಿ ಸಾಯಿ ಪಲ್ಲವಿ ನಟಿಸಿದ್ದಾರೆ. ಈ ಚಿತ್ರವನ್ನು ರಾಜ್‌ಕುಮಾರ್ ಪೆರಿಯಸಾಮಿ ನಿರ್ದೇಶನ ಮಾಡಿದ್ದಾರೆ. ದೀಪಾವಳಿ ಹಬ್ಬದ ದಿನದಂದು ತಮಿಳು ಸೇರಿದಂತೆ ಬಹುಭಾಷೆಗಳಲ್ಲಿ 'ಅಮರನ್' ಎಲ್ಲೆಡೆ ಅಬ್ಬರಿಸುತ್ತಿದ್ದು, ಇದೀಗ ಪ್ರೇಕ್ಷಕರು ಸಿನಿಮಾವನ್ನು ಮೆಚ್ಚಿಕೊಂಡಿದ್ದಕ್ಕೆ ಚಿತ್ರತಂಡದ ಖುಷಿಗೆ ಕಾರಣವಾಗಿದೆ.

ಸಿನಿಮಾಗೆ ಪ್ರೇಕ್ಷಕ ಜೈಕಾರ





# 'ಕುಬೇರ' ಸಿನಿಮಾದಲ್ಲಿ ನಾಗಾರ್ಜುನ ಅಕ್ಕಿನೇನಿ ಹೊಸ ಪೋಸ್ಟರ್ ಔಟ್

ಧನುಷ್ ನಟನೆಯ 'ಕುಬೇರ' ಸಿನಿಮಾದಲ್ಲಿ ಟಾಲಿವುಡ್ ಕಿಂಗ್ ನಾಗಾರ್ಜುನ ಅಕ್ಕಿನೇನಿ ಪ್ರಮುಖ ಪಾತ್ರದಲ್ಲಿ ನಟಿಸಿದ್ದಾರೆ. ಚಿತ್ರದಲ್ಲಿನ ಅವರ ಪಾತ್ರದ ವಿಶೇಷ ಪೋಸ್ಟರ್ ವೊಂದನ್ನು ರಿವೀಲ್ ಮಾಡುವುದರ ಜೊತೆಗೆ ಸಿನಿಮಾದ ಕುರಿತು ಬಿಗ್ ಅಪ್‌ಡೇಟ್‌ವೊಂದನ್ನು ಹಂಚಿಕೊಂಡಿದ್ದಾರೆ.

'ಕುಬೇರ' ಸಿನಿಮಾದಲ್ಲಿ ನಟನೆಗೆ ಸ್ಕೋಪ್ ಇರುವಂತಹ ಪಾತ್ರದಲ್ಲಿ ನಾಗಾರ್ಜುನ ಅಕ್ಕಿನೇನಿ ನಟಿಸಿದ್ದಾರೆ. ಸದ್ಯ ನಟನ ಪೋಸ್ಟರ್‌ವೊಂದನ್ನು ಚಿತ್ರತಂಡ ಹಂಚಿಕೊಂಡಿದೆ. ಜೊತೆಗೆ ನವೆಂಬರ್ 15ರಂದು ಸಿನಿಮಾದ ಮೊದಲ ಗ್ಲಿಂಪ್ಸ್ ಬಿಡುಗಡೆ ಮಾಡೋದಾಗಿ ಚಿತ್ರತಂಡ ಅಪ್‌ಡೇಟ್ ಹಂಚಿಕೊಂಡಿದೆ.

ಇನ್ನೂ ಧನುಷ್ ಮತ್ತು ರಶ್ಮಿಕಾ ಮಂದಣ್ಣ ಮೊದಲ ಬಾರಿಗೆ ಜೋಡಿಯಾಗಿ ನಟಿಸಿದ್ದಾರೆ. ಹಾಗಾಗಿ ಸಿನಿಮಾ ಬಗ್ಗೆ ಅಭಿಮಾನಿಗಳಿಗೆ ಭಾರೀ ನಿರೀಕ್ಷೆಯಿದೆ.

# ಭಾರತ ಬರಲಿ, ಬಾರದೇ ಇರಲಿ ನಾವು ಚಾಂಪಿಯನ್ಸ್ ಟ್ರೋಫಿ ಆಯೋಜಿಸುತ್ತೇವೆ: ಪಾಕಿಸ್ತಾನ

ಭಾರತ ತಂಡ ಪಾಕಿಸ್ತಾನಕ್ಕೆ ಬಾರದೇ ಇದ್ದರೂ ನಾವು ಚಾಂಪಿಯನ್ಸ್ ಟ್ರೋಫಿ ಆಯೋಜಿಸುತ್ತೇವೆ ಎಂದು ಪಾಕಿಸ್ತಾನ ಕ್ರಿಕೆಟ್ ಬೋರ್ಡ್ ಐಸಿಸಿ ತಿಳಿಸಿದೆ ಎಂದು ವರದಿಯಾಗಿದೆ.

ಹೈಬ್ರಿಡ್ ಮಾದರಿಯಲ್ಲಿ ಪಂದ್ಯ ನಡೆಸಲು ಸಾಧ್ಯವೇ ಎಂದು ಐಸಿಸಿ ಪಿಸಿಬಿಯನ್ನು ಕೇಳಿತ್ತು. ಈ ಪ್ರಶ್ನೆಗೆ ಪಿಸಿಬಿ ಭಾರತ ತಂಡ ಪಾಕ್‌ಗೆ ಬರಲಿ ಅಥವಾ ಬಾರದೇ ಇದ್ದರೂ ಇದ್ದರೂ ನಾವು ಟೂರ್ನಿಯನ್ನು ಆಯೋಜಿಸುಸುತ್ತೇವೆ ಎಂದು ಪತ್ರ ಬರೆದಿದೆ.

ಭದ್ರತಾ ದೃಷ್ಟಿಯಿಂದ ಭಾರತ ತಂಡ ಪಾಕಿಸ್ತಾನಕ್ಕೆ ತೆರಳಲು ನಿರಾಕರಿಸಿತ್ತು. ಬಳಿಕ ದುಬೈಯಲ್ಲಿ ಹೈಬ್ರಿಡ್ ಮಾದರಿಯಲ್ಲಿ ಪಂದ್ಯ ನಡೆಸುವ ಬಗ್ಗೆ ಪ್ರಸ್ತಾಪವಾಗಿತ್ತು. ಈಗ ಈ ಎಲ್ಲಾ ಪ್ರಸ್ತಾಪವನ್ನು ಪಾಕಿಸ್ತಾನ ನಿರಾಕರಿಸಿದೆ.

ಪಿಸಿಬಿ ಅಧ್ಯಕ್ಷ ಮೊಹ್ಸಿನ್ ನಖ್ವಿ ಇತ್ತೀಚೆಗೆ ಹೈಬ್ರಿಡ್ ಮಾದರಿಯಲ್ಲಿ ಪಂದ್ಯಾವಳಿಯನ್ನು ಆಯೋಜಿಸುವ ಸಾಧ್ಯತೆಯನ್ನು ತಳ್ಳಿಹಾಕಿದ್ದರು. ಅಂತಹ ವ್ಯವಸ್ಥೆ ಬಗ್ಗೆ ಯಾವುದೇ ಚರ್ಚೆಗಳು ನಡೆದಿಲ್ಲ ಎಂದು ಹೇಳಿದ್ದರು.

ಈಗಾಗಲೇ ಟಿವಿ ರೈಟ್ಸ್ ಮಾರಾಟವಾಗಿರುವ ಕಾರಣ ಭಾರತ ತಂಡ ಒಂದು ವೇಳೆ ಭಾಗವಹಿಸದೇ ಇದ್ದರೆ ಐಸಿಸಿಗೆ ಭಾರೀ ನಷ್ಟವಾಗಲಿದೆ. ಹೀಗಾಗಿ ಐಸಿಸಿ ಯಾವ ನಿರ್ಧಾರ ಕೈಗೊಳ್ಳಲಿದೆ ಎಂಬ ಕುತೂಹಲ ಹೆಚ್ಚಾಗಿದೆ. 2025ರ ಫೆಬ್ರವರಿಯಲ್ಲಿ ಚಾಂಪಿಯನ್ಸ್ ಟ್ರೋಫಿ ನಡೆಸಲು ಐಸಿಸಿ ಸಿದ್ಧತೆ ನಡೆಸಿದೆ.



ಭಾರತ ತಂಡವು 2005-2006ರಲ್ಲಿ ರಾಹುಲ್ ದ್ರಾವಿಡ್ ನಾಯಕತ್ವದಲ್ಲಿ ಪಾಕಿಸ್ತಾನಕ್ಕೆ ತನ್ನ ಕೊನೆಯ ಪ್ರವಾಸ ಕೈಗೊಂಡಿತ್ತು. ಈ ಪಂದ್ಯದಲ್ಲಿ ಇತ್ತಂಡಗಳು 3 ಟೆಸ್ಟ್ ಹಾಗೂ 5 ಏಕದಿನ ಪಂದ್ಯಗಳನ್ನಾಡಿದ್ದವು. ನಂತರ ರಾಜತಾಂತ್ರಿಕ ಕಾರಣಗಳಿಂದಾಗಿ ಉಭಯ ತಂಡಗಳ ನಡುವೆ ಯಾವುದೇ ದ್ವಿಪಕ್ಷೀಯ ಸರಣಿ ನಡೆದಿಲ್ಲ. ಐಸಿಸಿ ಟೂರ್ನಿ ಅಥವಾ ಏಷ್ಯಾ ಕಪ್ ಟೂರ್ನಿಗಳಲ್ಲಿ ಮಾತ್ರವೇ ಪರಸ್ಪರ ಮುಖಾಮುಖಿಯಾಗುತ್ತಿವೆ.

ಭಾರತ ಮತ್ತು ಪಾಕಿಸ್ತಾನ ಇತ್ತಂಡಗಳ ನಡುವಿನ ಪಂದ್ಯವು ಯಾವಾಗಲೂ ರಣರೋಚಕವಾಗಿರುತ್ತವೆ. 2023 ರಲ್ಲಿ ನಡೆದ ವಿಶ್ವಕಪ್ ಕ್ರಿಕೆಟ್ ಪಂದ್ಯಗಳಲ್ಲಿ ಭಾಗವಹಿಸಲು ಪಾಕಿಸ್ತಾನ ತಂಡ ಭಾರತಕ್ಕೆ ಬಂದಿತ್ತು.

# ಬಿಎಸ್‌ವೈಗೆ ಶಾಕ್ ಕೊಟ್ಟ ಸರ್ಕಾರ

## 300 ಕೋಟಿ ಅನುದಾನ ಅಕ್ರಮ ತನಿಖೆಗೆ ಸಮಿತಿ ರಚನೆ

**ಬೆಂಗಳೂರು:** ಮಾಜಿ ಮುಖ್ಯಮಂತ್ರಿ ಬಿ.ಎಸ್ .ಯಡಿಯೂರಪ್ಪಗೆ ರಾಜ್ಯ ಸರ್ಕಾರ ಮತ್ತೊಂದು ಶಾಕ್ ಕೊಟ್ಟಿದೆ. ಕೋವಿಡ್ ಬಳಿಕ ಕೆಕೆಆರ್‌ಡಿಬಿ ಅಕ್ರಮದ ಕುರಿತು ತನಿಖೆಗೆ ಸರ್ಕಾರ ತಂಡ ರಚಿಸಿದೆ.

ಕೋವಿಡ್ ಹಗರಣದ ತನಿಖೆಗೆ ಬಳಿಕ ಯಡಿಯೂರಪ್ಪ ವಿರುದ್ಧ ಮತ್ತೊಂದು ಹಗರಣದ ತನಿಖೆಗೆ ಸರ್ಕಾರ ಸಮಿತಿ ರಚನೆ ಮಾಡಿದೆ. ಕಲ್ಯಾಣ-ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ (ಕೆಕೆಆರ್‌ಡಿಬಿ) ಅಕ್ರಮದ ಕುರಿತು ತನಿಖೆಗೆ ಆದೇಶ ಹೊರಡಿಸಿದೆ. 300 ಕೋಟಿ ಅನುದಾನ ಅಕ್ರಮ ಆಗಿದೆ ಎಂದು ತನಿಖೆಗೆ ಸರ್ಕಾರ ಸಮಿತಿ ರಚನೆ ಮಾಡಿದೆ.

2020-2023ರ ಅವಧಿಯಲ್ಲಿ ಕಲ್ಯಾಣ ಕರ್ನಾಟಕ ಮಾನವ ಸಂಪನ್ಮೂಲ, ಕೃಷಿ ಮತ್ತು ಸಾಂಸ್ಕೃತಿಕ ಸಂಘ ರಚನೆ ಮಾಡಲಾಗಿತ್ತು. ಈ ಅವಧಿಯಲ್ಲಿ ದತ್ತಾತ್ರೇಯ ಪಾಟೀಲ್ ರೇವೂರ್



ಅಧ್ಯಕ್ಷರಾಗಿದ್ದರು. ಆಗ ಯಡಿಯೂರಪ್ಪ ಅವರು ಸಿಎಂ ಆಗಿದ್ದರು. ಪ್ರತಿ ವರ್ಷ 100 ಕೋಟಿಯಂತೆ 300 ಕೋಟಿ ಅನುದಾನ ಬಿಡುಗಡೆ ಮಾಡಲಾಗಿತ್ತು.

ಈ ಅನುದಾನದಲ್ಲಿ ದುರ್ಬಳಕೆ ಆಗಿದೆ ಎನ್ನುವ ಆರೋಪ ಕೇಳಿಬಂದಿದೆ. ಈ ಹಿನ್ನೆಲೆಯಲ್ಲಿ ಸರ್ಕಾರ ತನಿಖೆಗೆ ಸಮಿತಿ ರಚನೆ ಮಾಡಿದೆ.

### ಆರೋಪ ಏನು?

- » **ಯಡಿಯೂರಪ್ಪ ಸಿಎಂ ಆಗಿದ್ದಾಗ 2020-2023 ರಲ್ಲಿ ಕೆಕೆಆರ್‌ಡಿಬಿಗೆ 300 ಕೋಟಿ ಅನುದಾನ ಬಿಡುಗಡೆ ಆಗಿತ್ತು.**
- » **ಈ ಅನುದಾನ ವೆಚ್ಚ ಮಾಡುವಲ್ಲಿ ವ್ಯಾಪಕ ಅಕ್ರಮ ಆಗಿದೆ ಅನ್ನೋ ಆರೋಪ.**
- » **ಈಗ ಅಕ್ರಮದ ತನಿಖೆ ನಡೆಸಲು ನಿವೃತ್ತ ಐಎಎಸ್ ಸುಧೀರ್ ಕುಮಾರ್ ನೇತೃತ್ವದಲ್ಲಿ ಸಮಿತಿ ರಚನೆ.**
- » **ಕೋವಿಡ್ ಅವಧಿಯಲ್ಲಿ ಮೃತಪಟ್ಟ ಶಿಕ್ಷಕರ ಕುಟುಂಬಕ್ಕೆ ಪರಿಹಾರ ನೀಡಿಕೆ. ದೇಶಿ ಹಸು ಸಾಕಣೆಗೆ ಪ್ರೋತ್ಸಾಹ ಧನ ವಿತರಣೆ. 1 ಕೋಟಿ ಸಸಿ ನೆಟ್ಟಿರುವ ಬಗ್ಗೆಯೂ ತನಿಖೆ.**

# ಆರ್‌ಸಿಬಿಗೆ ಬರುವ ಸೂಚನೆ ನೀಡಿದ ಕೆಎಲ್ ರಾಹುಲ್




ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್-18 ರ ಮೆಗಾ ಹರಾಜಿನಲ್ಲಿ ಕೆಎಲ್ ರಾಹುಲ್ ಕಾಣಿಸಿಕೊಳ್ಳುವುದು ಖಚಿತವಾಗಿದೆ. ಲಕ್ನೋ ಸೂಪರ್ ಜೈಂಟ್ಸ್ ತಂಡದಿಂದ ಹೊರಬಂದಿರುವ ರಾಹುಲ್ ಮೆಗಾ ಆಕ್ಷನ್‌ನಲ್ಲಿ ಅದೃಷ್ಟ ಪರೀಕ್ಷಿಸಲಿದ್ದಾರೆ. ಈ ಅದೃಷ್ಟ ಪರೀಕ್ಷೆಯೊಂದಿಗೆ ಕನ್ನಡಿಗ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಬರಲಿದ್ದಾರಾ ಎಂಬುದೇ ಪ್ರಶ್ನೆ.

ಏಕೆಂದರೆ ಕೆಎಲ್ ರಾಹುಲ್ ಈ ಹಿಂದಿನಿಂದಲೂ ತವರು ತಂಡದ ಪರ ಕಣಕ್ಕಿಳಿಯುವ ಇಂಗಿತ ವ್ಯಕ್ತಪಡಿಸುತ್ತಾ ಬಂದಿದ್ದಾರೆ. ಇದೀಗ ಮತ್ತೊಮ್ಮೆ ಆರ್‌ಸಿಬಿ ಜೊತೆಗಿನ ನಂಟನ್ನು ತಿಳಿಸಿರುವ ರಾಹುಲ್, ರಾಯಲ್ ಚಾಲೆಂಜರ್ಸ್ ಬೆಂಗಳೂರು ಪರ ಕಣಕ್ಕಿಳಿಯುವ ಆಶಾಭಾವನೆ ವ್ಯಕ್ತಪಡಿಸಿದ್ದಾರೆ.

ಖಾಸಗಿ ಚಾನೆಲ್‌ವೊಂದರ ಸಂದರ್ಶನದಲ್ಲಿ ಮಾತನಾಡಿದ ಕೆಎಲ್ ರಾಹುಲ್, 2016 ರಲ್ಲಿ ಆರ್‌ಸಿಬಿ ತಂಡದಲ್ಲಿದ್ದಾಗ, ನಾನು ಸಾಕಷ್ಟು ಎಂಜಾಯ್ ಮಾಡಿದ್ದೆ. ಅದರಲ್ಲೂ ಬೆಂಗಳೂರು ನನ್ನ ತವರೂರು. ಅಭಿಮಾನಿಗಳು ನನ್ನನ್ನು ಕನ್ನಡದ ಹುಡುಗ ಎಂದೇ ಕರೆತಾರೆ. ಈ ಎಲ್ಲಾ ಕಾರಣದಿಂದಾಗಿ ನನಗೆ ಬೆಂಗಳೂರು ಪರ ಕಣಕ್ಕಿಳಿಯುವುದು ವಿಶೇಷವಾಗಿತ್ತು ಎಂದು ತಿಳಿಸಿದ್ದಾರೆ.

ಈ ಮೂಲಕ ಕೆಎಲ್ ರಾಹುಲ್ ಮತ್ತೆ ಆರ್‌ಸಿಬಿ ಪರ ಕಣಕ್ಕಿಳಿಯುವ ಇಂಗಿತವನ್ನು ವ್ಯಕ್ತಪಡಿಸಿದ್ದಾರೆ. ಈ ಇಂಗಿತವನ್ನು ಪೂರೈಸಲು ಈ ಬಾರಿಯ ಮೆಗಾ ಹರಾಜಿನಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು ಫ್ರಾಂಚೈಸಿ ಕನ್ನಡಿಗನ ಖರೀದಿಗೆ ಬಿಡ್ ಮಾಡುವುದು ಅತ್ಯುತ್ತಮ ಆಯ್ಕೆ. ಏಕೆಂದರೆ ನಾಯಕ ಫಾಫ್ ಡುಪ್ಲೆಸಿಸ್ ಆರ್‌ಸಿಬಿ ತಂಡದಿಂದ ಹೊರಬಿದ್ದಿದ್ದು, ಹಾಗೆಯೇ ವಿಕೆಟ್ ಕೀಪರ್ ದಿನೇಶ್ ಕಾರ್ತಿಕ್ ನಿವೃತ್ತಿ ಘೋಷಿಸಿದ್ದಾರೆ. ಹೀಗಾಗಿ ಕೆಎಲ್ ರಾಹುಲ್ ಆಯ್ಕೆಯಿಂದ ಆರ್ ಸಿಬಿ ಇಬ್ಬರ ಸ್ಥಾನವನ್ನು ತುಂಬಬಹುದು.

ಅಂದಹಾಗೆ ಕೆಎಲ್ ರಾಹುಲ್ ಆರ್‌ಸಿಬಿ ಪರ ಒಟ್ಟು 19 ಪಂದ್ಯಗಳನ್ನಾಡಿದ್ದಾರೆ. ಈ ವೇಳೆ 14 ಇನಿಂಗ್ಸ್‌ಗಳಲ್ಲಿ ಬ್ಯಾಟ್ ಬೀಸಿರುವ ಅವರು 4 ಅರ್ಧಶತಕಗಳೊಂದಿಗೆ ಒಟ್ಟು 417 ರನ್ ಕಲೆಹಾಕಿದ್ದಾರೆ. ಇದೀಗ ರಾಹುಲ್ ಮತ್ತೆ ತವರು ತಂಡದ ಪರ ಕಣಕ್ಕಿಳಿಯುವ ಇರಾದೆಯಲ್ಲಿದ್ದು, ಈ ಆಸೆಯು ಈ ಬಾರಿಯ ಮೆಗಾ ಹರಾಜಿನ ಮೂಲಕ ಈಡೇರಲಿದೆಯಾ ಕಾದು ನೋಡಬೇಕಿದೆ.

# ವಾಲ್ಮೀಕಿ ಹಗರಣದಲ್ಲಿ ಬಂಧನವಾಗಿದ್ದ ಶಾಸಕ ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ?

**ಮೈಸೂರು/ಬೆಂಗಳೂರು:** ವಾಲ್ಮೀಕಿ ಹಗರಣದಲ್ಲಿ ಕಾಂಗ್ರೆಸ್ ಶಾಸಕ ಬಿ ನಾಗೇಂದ್ರ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿ ಜೈಲಿಗೆ ಹೋಗಿ ಬಂದಿದ್ದಾರೆ. ಹೌದು..ನಾಗೇಂದ್ರ ಅವರು ಜಾಮೀನಿನ ಮೇಲೆ ಆಚೆ ಬಂದಿದ್ದಾರೆ. ಇದರ ಬೆನ್ನಲ್ಲೇ ಅವರಿಗೆ ಮತ್ತೆ ಸಚಿವ ಸ್ಥಾನ ಭಾಗ್ಯ ದೊರೆಯುವ ಸಾಧ್ಯತೆಗಳು ಇವೆ. ಈ ಬಗ್ಗೆ ಸ್ವತಃ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ನೀಡುವ ಮಾತುಗಳನ್ನಾಡಿದ್ದಾರೆ. ಜಾರಿ ನಿರ್ದೇಶನಾಲಯ (ಇ.ಡಿ) ವಾಲ್ಮೀಕಿ ಹಗರಣದ ತನಿಖೆಯನ್ನು ನಡೆಸಿದ್ದರೆ, ಇತ್ತ ಸಿಎಂ, ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ನೀಡುವ ಸುಳಿವು ಕೊಟ್ಟಿದ್ದಾರೆ.

ಮೈಸೂರು ಜಿಲ್ಲೆ ಊ.ಆ.ಕೋಟೆಯಲ್ಲಿ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಮಾತನಾಡಿದ ಸಿದ್ದರಾಮಯ್ಯ, ವಾಲ್ಮೀಕಿ ನಿಗಮದಲ್ಲಿ ಕೆಲ ಹಣ ದುರುಪಯೋಗ ಆಗಿದೆ. ಆ ಪ್ರಕರಣದ ತನಿಖೆ ನಡೆಯುತ್ತಿದೆ. ಆದರೂ ನಿಗಮಕ್ಕೆ ಒಂದು ಪೈಸೆಯೂ ಕಡಿಮೆ ಮಾಡಲ್ಲ. ನನ್ನ ಬಳಿಯೇ ಈಗ ಆ ಖಾತೆ ಇದೆ, ಹಣ ಮೀಸಲಿಡುತ್ತೇನೆ. ಶಾಸಕ ಬಿ.ನಾಗೇಂದ್ರ ಮೇಲೂ ಸುಳ್ಳು ಕೇಸ್ ಹಾಕಿಸಿದ್ದಾರೆ. ನಾಗೇಂದ್ರಗೆ ಈಗ



ಬೇಲ್ ಸಿಕ್ಕಿದೆ, ಹೊರಗಡೆ ಬಂದಿದ್ದಾರೆ. ಚುನಾವಣೆ ಆದ್ಮೇಲೆ ಒಂದು ತೀರ್ಮಾನ ಮಾಡಬೇಕಿದೆ ಎಂದು ಹೇಳುವ ಮೂಲಕ ನಾಗೇಂದ್ರಗೆ ಮತ್ತೆ ಸಚಿವ ಸ್ಥಾನ ನೀಡುವ ಸುಳಿವು ನೀಡಿದರು.

ಹೆಚ್‌ಡಿ.ಕೋಟೆಯಲ್ಲಿ ನಡೆದ ವಾಲ್ಮೀಕಿ ಜಯಂತಿ ಕಾರ್ಯಕ್ರಮದಲ್ಲಿ ಶಾಸಕ ಅನಿಲ್ ಚಿಕ್ಕಮಾದುಗೆ ಸಚಿವ ಸ್ಥಾನ ನೀಡುವಂತೆ ಅವರ ಬೆಂಬಲಿಗರು ಸಿಎಂ ಮುಂದೆ ಬೇಡಿಕೆ ಇಟ್ಟರು. ಆ ವೇಳೆ ಸಿದ್ದರಾಮಯ್ಯ ಪ್ರತಿಕ್ರಿಯಿಸಿ ಸಚಿವ ಸ್ಥಾನ ಕೊಡಲು ಸಾಧ್ಯವಿಲ್ಲ. ಎಲ್ಲಿ ಖಾಲಿ ಇದೆ, ಕೊಡುತ್ತೇನೆ ಎಂದು ಸುಳ್ಳು ಹೇಳಲು ಆಗಲ್ಲ. ಈಗ ಹೇಳಿ ಆ ನಂತರ ಮಾತಿಗೆ ತಪ್ಪಲು ಆಗುತ್ತಾ? ನಾಗೇಂದ್ರ ಅವರಿಗೆ ಕೊಡಬೇಕು. ಕೊಡುತ್ತೇನೆ ಎಂದು ಸ್ಪಷ್ಟಪಡಿಸಿದರು.

ವಾಲ್ಮೀಕಿ ಹಗರಣ ಬೆಳಕಿಗೆ ಬರುತ್ತಿದ್ದಂತೆಯೇ ಪ್ರಕರಣದಲ್ಲಿ ಇಡಿ ಪ್ರವೇಶ ಮಾಡಿತ್ತು. ಬಳಿಕ ನಾಗೇಂದ್ರ ಅವರು ಸಿಎಂ ಸೂಚನೆ ಮೇರೆಗೆ ತಮ್ಮ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಇಡಿ ಅಧಿಕಾರಿಗಳು ವಾಲ್ಮೀಕಿ ಅಭಿವೃದ್ಧಿ ನಿಗಮದ ಅಧ್ಯಕ್ಷ ಕಾಂಗ್ರೆಸ್ ಶಾಸಕ ಬಸನಗೌಡ ದದ್ದಲ್ ಹಾಗೂ ನಾಗೇಂದ್ರ ಅವರ ಮನೆಗಳ ಮೇಲೆ ದಾಳಿ ಮಾಡಿ ಕೆಲ ಮಹತ್ವದ ದಾಖಲೆಗಳನ್ನು ಸಂಗ್ರಹಿಸಿತ್ತು. ಅಲ್ಲದೇ ನಾಗೇಂದ್ರ ಅವರನ್ನು ಬಂಧಿಸಿ ಪರಪ್ಪನ ಅಗ್ರಹಾರಕ್ಕೆ ಕಳುಹಿಸಿತ್ತು.

ಇನ್ನು ಜಾರಿ ನಿರ್ದೇಶನಾಲಯ ಒಟ್ಟು 4970 ಪುಟಗಳ ಆರೋಪ ಪಟ್ಟಿಯನ್ನು ಸಲ್ಲಿಕೆ ಮಾಡಿತ್ತು. ಈ ಆರೋಪ ಪಟ್ಟಿಯಲ್ಲಿ ವಾಲ್ಮೀಕಿ ಹಗರಣದಲ್ಲಿ ಬಿ ನಾಗೇಂದ್ರ ಪ್ರಮುಖ ರುವಾರಿ ಎಂದು ಉಲ್ಲೇಖಿಸಿತ್ತು. ಅಲ್ಲದೆ, ನಾಗೇಂದ್ರ ಅಣತಿಯಂತೆ ವಾಲ್ಮೀಕಿ ನಿಗಮದಲ್ಲಿ ಅಕ್ರಮ ಹಣ ವರ್ಗಾವಣೆ ಆಗಿದೆ ಎಂದೂ ಹೇಳಿತ್ತು. ಆದರೆ, ರಾಜ್ಯ ಸರ್ಕಾರ ರಚಿಸಿರುವ ಎಸ್‌ಐಟಿ ಸಲ್ಲಿಕೆ ಮಾಡಿರುವ ಚಾರ್ಜ್‌ಶೀಟ್‌ನಲ್ಲಿ ಬಿ ನಾಗೇಂದ್ರ ಅವರ ಹೆಸರೇ ಇಲ್ಲ.

Printed, Published & Owned by N.Venugopal Krishna, Printed at DASHAPRAMATHI MUDRANALAYA, No.433/1, Chikkavitalenahalli Village, Thagachagere Post, Kasaba Hobli, Channapatna Taluk, Ramanagar District, Pin-562160. Published at No.15, Ground Floor, 12th Block, 5th Main, Kumara Park (West), Behind BDA Head Office, Bengaluru-560020. Editor: N.Venugopal Krishna, Mobile No.+91 94835 89085, email: sanjemugilu@gmail.com